ಸಂಪುಟ: 21, ಸಂಚಿಕೆ: 125, ಪುಟಗಳು: 8, ಬುಧವಾರ, 14 ಫೆಬ್ರವರಿ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆನೆಕಾ

## ಪಂಚಾಂಗ

(ಬುಧವಾರ 14, ಫೆಬ್ರವರಿ -2024)

- ಶೋಭಕೃತ್ ಸಂವತ್ಸರ, ಶಿಶಿರ ಋತು
- ಉತ್ತರಾಯಣ, ಮಾಘ ಮಾಸ
- ಶುಕ್ಲ ಪಕ್ಷ, ಬಿದಿಗೆ,
- ಶತಭಿಷಾ ನಕ್ಷತ್ರ
- ರಾಹುಕಾಲ: 12 : 27 PM 01 : 53 PM
- ಗುಳಿಕಕಾಲ: 11 : 01 AM 12 : 27 PM
- ಯಮಗಂಡಕಾಲ : 08 : 10 AM 09 : 36 AM

# ಆಸ್ತಿ ತೆರಿಗೆ ಬಾಕಿ

## ರಾಕ್‌ಲೈನ್‌ಮಾಲ್‌ಗೆ ಬೀಗಮುದ್ರೆ!

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ ದೊಡ್ಡ ದೊಡ್ಡ ವಾಣಿಜ್ಯ ಕಟ್ಟಡಗಳ ವಿರುದ್ಧ ಪಾಲಿಕೆ ಕ್ರಮ ಕೈಗೊಳ್ಳುತ್ತಿದೆ. ಬಿಬಿಎಂಪಿ ಇಂದು (ಫೆ.14) ತೆರಿಗೆ ಬಾಕಿ ಉಳಿಸಿಕೊಂಡಿರುವ ರಾಕ್ ಲೈನ್ ಮಾಲ್ ಗೆ ಬೀಗಮುದ್ರೆ ಹಾಕಿದೆ. ನಟ, ನಿರ್ಮಾಪಕ ರಾಕ್ ಲೈನ್ ವೆಂಕಟೇಶ್ ಒಡೆತನದ ಟಿ.ದಾಸರಹಳ್ಳಿಯ ಪ್ರಶಾಂತ್ ನಗರದಲ್ಲಿರುವ ರಾಕ್ ಲೈನ್ ಮಾಲ್ 2011 ರಿಂದ 2023ರವರೆಗೆ 11.51 ಕೋಟಿ ರೂ. ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿದೆ. ಈ ಹಿನ್ನೆಲೆಯಲ್ಲಿ ಬಿಬಿಎಂಟಿ ನೋಟಿಸ್ ನೀಡಿತ್ತು. ನೋಟಿಸ್ ನೀಡಿದರೂ ಬಾಕಿ ಪಾವತಿಸದ ಹಿನ್ನೆಲೆಯಲ್ಲಿ ದಾಸರಹಳ್ಳಿಯ




ಬಿಬಿಎಂಪಿ ಕಂದಾಯ ಅಧಿಕಾರಿಗಳು ಮಾಲ್‌ಗೆ ಬೀಗಮುದ್ರೆ ಹಾಕಿದ್ದಾರೆ.

2023ರ ನವೆಂಬರ್ ಮತ್ತು 2024ರ ಫೆಬ್ರವರಿ ನಡುವೆ 46,318 ಆಸ್ತಿಗಳಿಗೆ ತೆರಿಗೆ ಬಾಕಿ ವಸೂಲಿಗೆ ಬಿಬಿಎಂಪಿ ನೋಟಿಸ್ ಜಾರಿ ಮಾಡಿದೆ. ಬಿಬಿಎಂಪಿ ಕಂದಾಯ ಅಧಿಕಾರಿಗಳು

ಪುಟ 2

# ಮೋದಿ ಕಟೌಟ್ ತಬ್ಬಿಕೊಂಡು, ಸೊಂಟ ಬಳುಕಿಸುತ್ತಾ ರೀಲ್ಸ್ ಮಾಡಿದ ಮಹಿಳೆ

**ನವದೆಹಲಿ:** ಹೆಚ್ಚುತ್ತಿರುವ ಪ್ರಧಾನಿ ಮೋದಿ ಅವರ ಜನಪ್ರಿಯತೆ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಗಮನಸೆಳೆಯಲು ರೈಲ್ವೆ ನಿಲ್ದಾಣ, ಪಡಿತರ ಅಂಗಡಿಗಳು ಸೇರಿದಂತೆ ವಿವಿಧ ಸ್ಥಳಗಳಲ್ಲಿ ಕೇಂದ್ರ ಸರ್ಕಾರವು ಪ್ರಧಾನಿ ಅವರ ಕಟೌಟ್ ಇರುವ 'ಸೆಲ್ಫಿ ಪಾಯಿಂಟ್'ಗಳನ್ನು ಸ್ಥಾಪಿಸಿದೆ. ಸರ್ಕಾರದ ಕಲ್ಯಾಣ ಯೋಜನೆಗಳ ಪ್ರಚಾರಕ್ಕಾಗಿ ಜನರು ಪ್ರಧಾನಿಯೊಂದಿಗೆ ಸೆಲ್ಫಿ ತೆಗೆದುಕೊಳ್ಳಲು ಕಟೌಟ್‌ಗಳನ್ನು ಹಾಕಿದರೆ ಮಹಿಳೆಯೊಬ್ಬಳು ಮೋದಿ ಕಟೌಟ್ ಮುಂದೆ ಸೆಲ್ಫಿ ತೆಗೆಸಿಕೊಳ್ಳುವ ಬದಲು ''ಆಜಾ ಸಜನ್ ಆಜಾ'' ಎಂದು ಸೊಂಟ ಬಳುಕಿಸುತ್ತಾ ರೀಲ್ಸ್ ಮಾಡಿದ್ದಾಳೆ. ದೇಶದ ಪ್ರಧಾನಿಯನ್ನು ಅಪ್ಪಿಕೊಂಡು ಅಸಭ್ಯವಾಗಿ ನೃತ್ಯ ಮಾಡಿರುವುದು ಇದೀಗ ಭಾರೀ ಟೀಕೆಗೆ ಕಾರಣವಾಗಿದೆ.

ಪುಟ 2



## ಸಂಕ್ಷಿಪ್ತ ಸುದ್ದಿ

### ಬಿಜೆಪಿ ರಾಜ್ಯಸಭಾ ಅಭ್ಯರ್ಥಿಗಳ ಎರಡನೇ ಪಟ್ಟಿ ಬಿಡುಗಡೆ

**ಒಡಿಶಾ:** ಮುಂಬರಲಿರುವ ರಾಜ್ಯಸಭಾ ಚುನಾವಣೆಗೆ ಬಿಜೆಪಿಯು ಮಧ್ಯಪ್ರದೇಶ ಹಾಗೂ ಒಡಿಶಾದಿಂದ ಅಭ್ಯರ್ಥಿಗಳನ್ನು ಘೋಷಿಸಿದೆ. ಒಡಿಶಾದಿಂದ ಅಶ್ವಿನಿ ವೈಷ್ಣವ್ ಅವರನ್ನು ಅಭ್ಯರ್ಥಿ ಎಂದು ಘೋಷಿಸಲಾಗಿದೆ. ಮಧ್ಯಪ್ರದೇಶದಿಂದ ಬನ್ಸಿಲಾಲ್ ಗುರ್ಜರ್, ಮಾಯಾ ನರೋಲಿಯಾ, ಉಮೇಶ್ ನಾಥ್ ಮಹಾರಾಜ್ ಮತ್ತು ಎಲ್ ಮುರುಗನ್ ಅವರ ಹೆಸರುಗಳಿವೆ. ಮಧ್ಯಪ್ರದೇಶದಲ್ಲಿ ಶಾಸಕರ ಬಲದ ಆಧಾರದ ಮೇಲೆ, ಬಿಜೆಪಿ ನಾಲ್ಕು ಸ್ಥಾನಗಳನ್ನು ಗೆಲ್ಲುವ ಸಾಧ್ಯತೆಯನ್ನು ಹೊಂದಿದ್ದರೆ, ಕಾಂಗ್ರೆಸ್ ಒಂದು ಸ್ಥಾನವನ್ನು ಗೆಲ್ಲಬಹುದು.



ಪುಟ 2

### ಭಾರತದ ಇತಿಹಾಸದಲ್ಲಿ ಪುಲ್ವಾಮ ದಾಳಿಯ ಕಹಿ ನೆನಪು




**ಪುಲ್ವಾಮಾ:** ಇಂದು ದೇಶಕ್ಕೆ ಕರಾಳ ದಿನವಾಗಿದ್ದು, 5 ವರ್ಷಗಳ ಹಿಂದೆ ಭಾರತೀಯ ಸೇನೆ ಭದ್ರತಾಪಡೆಗಳ ಮೇಲೆ ನಡೆದ ದಾಳಿಯಿಂದಾಗಿ 40 ಕ್ಕೂ ಯೋಧರು ಕೊನೆಯುಸಿರೆಳೆದಿದ್ದರು. ಜೈಶ್-ಎ-ಮೊಹಮ್ಮದ್ ಸಂಘಟನೆಯ ಉಗ್ರಗಾಮಿಗಳು ನಡೆಸಿದ್ದ ಆತ್ಮಾಹುತಿ ಬಾಂಬ್ ದಾಳಿಯಿಂದಾಗಿ ಭಾರತೀಯ ಸೇನೆಯ ವಾಹನದಲ್ಲಿ ತೆರಳುತ್ತಿದ್ದ ಯೋಧರು ಬಲಿಯಾಗಿದ್ದರು. ಈ ಸಕಹಿ ಸುದ್ದಿಯೊಂದು ಹೊರಬೀಳುತ್ತಿದ್ದಂತೆ ಇಡೀ ದೇಶವೇ ಮೌನಕ್ಕೆ ಜಾರಿತ್ತು. ಪ್ರಾಣತೆತ್ತ ಯೋಧರ ಕುಟುಂಬಗಳು ಆಸರೆಯಿಲ್ಲದೇ ಕಂಗಾಲಾಗಿತ್ತು. ಅಂದು ಫೆಬ್ರವರಿ 14ರ ಮಧ್ಯಾಹ್ನ 3 ಗಂಟೆ ಸಮಯವಾಗಿತ್ತಷ್ಟೇ. ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾ ಜಿಲ್ಲೆಯ ಲೆಥ್ಪೊರ ಬಳಿಯ ಅವಾಂತಿಪೋರಾ ಬಳಿ ಶ್ರೀನಗರಕ್ಕೆ 2500 ಕ್ಕೂ ಹೆಚ್ಚು ಭಾರತೀಯ ಭದ್ರತಾ ಸಿಬ್ಬಂದಿಗಳಿದ್ದ 78 ಸೇನಾ ವಾಹನಗಳು ರಾಷ್ಟ್ರೀಯ ಹೆದ್ದಾರಿ 44ರಲ್ಲಿ ಸಾಗುತ್ತಿತ್ತು. ಅದೇ ವೇಳೆಯಲ್ಲಿ 350 ಕೆಜಿ ಸ್ಫೋಟಕಗಳಿದ್ದ ಮಹೀಂದ್ರಾ, ಸ್ಕಾರ್ಪಿಯೋ ಎಸ್‌ಯುವಿಯೊಂದು ಸೇನಾ ವಾಹನಕ್ಕೆ ಬಂದು ಢಿಕ್ಕಿ ಹೊಡೆದಿತ್ತು.

ಪುಟ 2

## ಫೆಬ್ರವರಿ 16 ಬಂದ್‌ಗೆ ಕರೆ ನೀಡಿದ ಸಂಯುಕ್ತ ಕಿಸಾನ್ ಮೋರ್ಚಾ

# ಗ್ರಾಮೀಣ ಭಾರತ ಬಂದ್‌ಗೆ ಕರೆ

**ದೆಹಲಿ:** ಹಲವು ಬೇಡಿಕೆಗಳ ಈಡೇರಿಕೆಗಾಗಿ ದೆಹಲಿ ಚಲೋ ಚಳವಳಿಯನ್ನು ಹಮ್ಮಿಕೊಂಡಿದ್ದ ಸಂಯುಕ್ತ ಕಿಸಾನ್ ಮೋರ್ಚಾ ಇದೀಗ ಫೆಬ್ರವರಿ 16ರಂದು ಗ್ರಾಮೀಣ ಭಾರತ ಬಂದ್‌ಗೆ ಕರೆ ನೀಡಿದೆ. ಸಂಯುಕ್ತ ಕಿಸಾನ್ ಮೋರ್ಚಾ (ಎಸ್‌ಕೆಎಂ) ಬ್ಯಾನರ್‌ನಡಿಯಲ್ಲಿ ಕೇಂದ್ರ, ಕಾರ್ಮಿಕ ಸಂಘಟನೆಗಳೊಂದಿಗೆ ರೈತ ಸಂಘಗಳು ತಮ್ಮ ಇತರ ಬೇಡಿಕೆಗಳನ್ನು ಕೇಂದ್ರ ಸರ್ಕಾರದ ಮುಂದಿರಿಸಲು ಫೆಬ್ರವರಿ 16 ರಂದು ದೇಶಾದ್ಯಂತ ಗ್ರಾಮೀಣ ಭಾರತ್ ಬಂದ್ ಎಂದು ಕರೆಯಲಾಗುವ ಮುಷ್ಕರಕ್ಕೆ ಕರೆ ನೀಡಿವೆ. ಎಸ್‌ಕೆಎಂ ಮತ್ತು ಕಾರ್ಮಿಕ ಸಂಘಟನೆಗಳು ಕರೆ ನೀಡಿರುವ ಗ್ರಾಮೀಣ ಭಾರತ್ ಬಂದ್ ಫೆಬ್ರವರಿ 16 ರಂದು ಬೆಳಗ್ಗೆ 6 ರಿಂದ ಸಂಜೆ 4 ರವರೆಗೆ ನಡೆಯಲಿದೆ.

ರೈತರ ಬೇಡಿಕೆಗಳೇನು ಧರಣಿ ನಿರತ ರೈತರು ಮತ್ತು ಕಾರ್ಮಿಕ ಸಂಘಟನೆಗಳ ಪ್ರಮುಖ ಬೇಡಿಕೆಗಳೆಂದರೆ ರೈತರಿಗೆ ಪಿಂಚಣಿ, ಬೆಳೆಗಳಿಗೆ ಎಂಎಸ್‌ಪಿ, ಹಳೆಯ ಪಿಂಚಣಿ ಯೋಜನೆ ಅನುಷ್ಠಾನ ಮತ್ತು ಕಾರ್ಮಿಕ ಕಾನೂನುಗಳ ತಿದ್ದುಪಡಿಯನ್ನು ಹಿಂಪಡೆಯುವುದು. ಉದ್ಯೋಗಿಗಳ ಗುತ್ತಿಗೆ, ಖಾತರಿಯ ಉದ್ಯೋಗ ಇತ್ಯಾದಿಗಳು ಸೇರಿವೆ. ಇನ್ನೂ, ಇತರ ಬೇಡಿಕೆಗಳಲ್ಲಿ ಉದ್ಯೋಗಿಗಳಿಗೆ ಸಂಬಂಧಿಸಿದ ಸಮಸ್ಯೆಗಳಾದ ಆಪರೇಷನಲ್ ಪರ್ಫಾರ್ಮೆನ್ಸ್-ಲಿಂಕ್ಡ್ ಸಂಬಳ ಅನುಷ್ಠಾನವನ್ನು ಹಿಂತೆಗೆದುಕೊಳ್ಳುವುದು, ತಿದ್ದುಪಡಿಗಳು ಕಾರ್ಮಿಕ ಕಾನೂನುಗಳು ಮತ್ತು ಇತರ ಹಲವಾರು ಬೇಡಿಕೆಗಳು ಸರ್ಕಾರದ ಮುಂದಿವೆ. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಬಲಪಡಿಸಲು, ಹಳೆಯ ಪಿಂಚಣಿ ಯೋಜನೆಯನ್ನು ಮರುಸ್ಥಾಪಿಸಲು ಮತ್ತು ಔಪಚಾರಿಕ ಮತ್ತು ಅನೌಪಚಾರಿಕ ವಲಯಗಳಲ್ಲಿ ಎಲ್ಲರಿಗೂ ಪಿಂಚಣಿ ಮತ್ತು ಸಾಮಾಜಿಕ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ರೈತರು ಪ್ರಯತ್ನಿಸುತ್ತಿದ್ದಾರೆ.



### ರೈತರು ಕ್ರಿಮಿನಲ್‌ಗಳಲ್ಲ

**ಸ್ವಾಮಿನಾಥನ್ ಪುತ್ರಿ ಮಧುರಾ ರೈತರು ಕ್ರಿಮಿನಲ್ ಗಳನ್ನು ಅವರೇನೋ ಅಪರಾಧ ಮಾಡಿದ್ದಾರೆ ಎಂಬಂತೆ ಅವರನ್ನು ನೋಡಬೇಡಿ ಎಂದು ಮಧುರಾ ಹೇಳಿದ್ದಾರೆ. ಪ್ರತಿಭಟನಾ ನಿರತ ರೈತರ ಹಲವು ಬೇಡಿಕೆಗಳ ಪೈಕಿ ಸ್ವಾಮಿನಾಥನ್ ಸಮಿತಿ ವರದಿ ಜಾರಿ ಪ್ರಮುಖ ಅಂಶವಾಗಿದೆ. ಸ್ವಾಮಿನಾಥನ್ ರ ರೈತರ ರಾಷ್ಟ್ರೀಯ ಆಯೋಗವು ಡಿಸೆಂಬರ್ 2004 ಮತ್ತು 2006 ರ ನಡುವೆ ಒಟ್ಟು ಐದು ವರದಿಗಳನ್ನು ಸಲ್ಲಿಸಿತ್ತು.**

ಫೆ.16 ರಂದು ಯಾವೆಲ್ಲಾ ಸೇವೆಗಳ ಮೇಲೆ ಪರಿಣಾಮ ಫೆಬ್ರವರಿ 16 ರಂದು ದಿನವಿಡೀ ಭಾರತ್ ಬಂದ್‌ನಲ್ಲಿ, ಸಾರಿಗೆ, ಕೃಷಿ ಚಟುವಟಿಕೆಗಳು, MNREGA ಗ್ರಾಮೀಣ ಕೆಲಸಗಳು, ಖಾಸಗಿ ಕಚೇರಿಗಳು, ಹಳ್ಳಿ ಅಂಗಡಿಗಳು ಮತ್ತು ಗ್ರಾಮೀಣ ಕೈಗಾರಿಕಾ ಮತ್ತು ಸೇವಾ ವಲಯದ ಸಂಸ್ಥೆಗಳು ಮುಚ್ಚಲ್ಪಡುತ್ತವೆ. ಇದಲ್ಲದೆ, ಮುಷ್ಕರದ ಸಮಯದಲ್ಲಿ ಆಂಬ್ಯುಲೆನ್ಸ್‌ಗಳ ಕಾರ್ಯಾಚರಣೆ, ಪತ್ರಿಕೆ ವಿತರಣೆ, ಮದುವೆ, ಮೆಡಿಕಲ್ ಶಾಪ್‌ಗಳು, ಬೋರ್ಡ್ ಪರೀಕ್ಷೆಗೆ ಹೋಗುವ ವಿದ್ಯಾರ್ಥಿಗಳು ಇತ್ಯಾದಿ ತುರ್ತು ಸೇವೆಗಳನ್ನು ನಿಲ್ಲಿಸಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

# ಇಂದು ಅಬುಧಾಬಿಯಲ್ಲಿ ಮೊದಲ ಹಿಂದೂ ದೇವಾಲಯ ಉದ್ಘಾಟಿಸಲಿದ್ದಾರೆ ಮೋದಿ

**ಅಬುಧಾಬಿ:** ಅಬುಧಾಬಿಯಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಮೊದಲ ಹಿಂದೂ ದೇವಾಲಯದ ಉದ್ಘಾಟನಾ ಕಾರ್ಯಕ್ರಮ ನೆರವೇರಿಸಲಿದ್ದಾರೆ. ರಾಜಸ್ಥಾನದ ಗುಲಾಬಿ ಮರಳುಗಲ್ಲಿನಿಂದ ನಿರ್ಮಿಸಲಾದ ಅಬುಧಾಬಿಯ ಮೊದಲ ಹಿಂದೂ ದೇವಾಲಯವನ್ನು ಭಾರತದ ಪ್ರಧಾನಿ ನರೇಂದ್ರ ಮೋದಿ ಬುಧವಾರ ಉದ್ಘಾಟಿಸಲಿದ್ದಾರೆ. ಬೋಚಸನ್ ವಾಸಿ ಅಕ್ಷರ ಪುರುಷೋತ್ತಮ ಸ್ವಾಮಿನಾರಾಯಣ ಸಂಸ್ಥೆಸ್ವಾಮಿ ನಾರಾಯಣ ದೇವಾಲಯವನ್ನು ನಿರ್ಮಿಸಿದೆ.

ಈ ದೇವಾಲಯವು ತನ್ನ ವೈಭವದಿಂದ ಪ್ರಪಂಚದಾದ್ಯಂತದ ಜನರನ್ನು ಆಕರ್ಷಿಸುತ್ತಿದೆ. 27 ಎಕರೆ ಪ್ರದೇಶದಲ್ಲಿ 108 ಅಡಿ ಎತ್ತರದ ಈ ದೇವಾಲಯವನ್ನು ವಾಸ್ತುಶಿಲ್ಪದ ಅದ್ಭುತವೆಂದು ಪರಿಗಣಿಸಲಾಗಿದೆ. ದೇವಾಲಯದ ಆಡಳಿತದ ಪ್ರಕಾರ, ಗಂಗಾ ಮತ್ತು ಯಮುನಾ ನದಿಗಳ ಪವಿತ್ರ ನೀರು ದೇವಾಲಯದ ಎರಡೂ ಬದಿಗಳಲ್ಲಿ ಹರಿಯುತ್ತದೆ, ಇದನ್ನು ಭಾರತದಿಂದ ಬೃಹತ್ ಪಾತ್ರೆಗಳಲ್ಲಿ ತರಲಾಯಿತು.



ದೇವಾಲಯದ ವಿಶೇಷತೆ ಏನು ದೇವಸ್ಥಾನದ ಮುಖ್ಯಸ್ಥ ಸ್ವಾಮಿ ಬ್ರಹ್ಮವಿಹಾರಿದಾಸ್ ಮಾತನಾಡಿ, ಈ ದೇವಾಲಯದ ಮೂಲೆ ಮೂಲೆಯಲ್ಲಿ ಭಾರತದ ವೈಭವವಿದೆ. ಇಲ್ಲಿ ವಾರಾಣಸಿಯನ್ನು ಕೂಡ ನೋಡಬಹುದು. ಅಬುಧಾಬಿಯಲ್ಲಿ ನಿರ್ಮಿಸಲಾದ ಹಿಂದೂ ದೇವಾಲಯವು 108 ಅಡಿಗಳು. ಇದರಲ್ಲಿ 40,000 ಘನ ಅಡಿ ಅಮೃತಶಿಲೆ, 1,80,000 ಘನ ಅಡಿ ಮರಳುಗಲ್ಲು, 18,00,000 ಇಟ್ಟಿಗೆಗಳನ್ನು ಬಳಸಲಾಗಿದೆ. ದೇವಸ್ಥಾನದಲ್ಲಿ 300 ಸೆನ್ಸಾರ್‌ಗಳನ್ನು ಅಳವಡಿಸಲಾಗಿದೆ.

ಪುಟ 2

## ಬಿಜೆಪಿ ಶಾಸಕ ಕೆ.ಗೋಪಾಲಯ್ಯಗೆ ಜೀವ ಬೆದರಿಕೆ

# ದೂರು ದಾಖಲು

**ಬೆಂಗಳೂರು:** ಬಿಜೆಪಿ ಶಾಸಕ ಕೆ ಗೋಪಾಲಯ್ಯಗೆ ಜೀವ ಬೆದರಿಕೆ ಒಡ್ಡಿದ ಆರೋಪದಲ್ಲಿ ಮಾಜಿ ಕಾರ್ಪೊರೇಟರ್ ಪದ್ಮರಾಜು ವಿರುದ್ಧ ಬೆಂಗಳೂರಿನ ಕಾಮಾಕ್ಷಿಪಾಳ್ಯ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿದೆ. ಮಂಗಳವಾರ ರಾತ್ರಿ 11 ಗಂಟೆಗೆ ಗೋಪಾಲಯ್ಯಗೆ ಕರೆ ಮಾಡಿದ್ದ ಪದ್ಮರಾಜು, ಅವಾಚ್ಯವಾಗಿ ನಿಂದಿಸಿ ಕೊಲೆ ಬೆದರಿಕೆ ಹಾಕಿದ್ದಾಗಿ ಪೊಲೀಸ್ ಠಾಣೆಗೆ ಕೆ. ಗೋಪಾಲಯ್ಯ ದೂರು ನೀಡಿದ್ದರು.



ಈ ವಿಚಾರವಾಗಿ ಶಾಸಕ ಕೆ ಗೋಪಾಲಯ್ಯ ಪ್ರತಿಕ್ರಿಯೆ ನೀಡಿದ್ದು, ಅವನು ಮಾತನಾಡಿರುವ ವಿಚಾರಗಳನ್ನು ಈಗ ಬಹಿರಂಗಪಡಿಸಲು ಆಗದು. ಆತ ಇದಕ್ಕೂ ಮೊದಲು ಬೇರೆ ಶಾಸಕರಿಗೆ ಕೂಡ ಬೆದರಿಕೆ ಹಾಕಿದ್ದ. ಪದ್ಮರಾಜು ಮಗಳಿಗೂ ನಾನೇ ಕೆಲಸ ಕೊಡಿಸಿದ್ದೇನೆ ಎಂದು ತಿಳಿಸಿದ್ದಾರೆ.

ಪದ್ಮರಾಜು ಬೆದರಿಕೆ ಹಾಕಿದ ವಿಚಾರವಾಗಿ ಸಿಎಂ ಸಿದ್ದರಾಮಯ್ಯ, ಗೃಹಸಚಿವ ಪರಮೇಶ್ವರ ಅವರಿಗೂ ದೂರು ನೀಡುತ್ತೇನೆ. ಪದ್ಮರಾಜುನನ್ನ ಗಡಿಪಾರು ಮಾಡುವಂತೆ ಆಗ್ರಹಿಸುತ್ತೇನೆ ಎಂದು ಗೋಪಾಲಯ್ಯ ಹೇಳಿದ್ದಾರೆ.

ಈ ಮಧ್ಯೆ, ವಿಧಾನಸಭೆ ಸ್ಪೀಕರ್‌ಗೆ ಹಾಗೂ ಬೆಂಗಳೂರು ನಗರ ಪೊಲೀಸ್ ಕಮಿಷನರ್ ಗೂ ಶಾಸಕ ಕೆ.ಗೋಪಾಲಯ್ಯ ದೂರು ನೀಡಿದ್ದಾರೆ.

ಪುಟ 2

## ಬೆಂಗಳೂರಿಗೆ ಬಂತು ನಮ್ಮ ಮೆಟ್ರೋದ

# ಚಾಲಕ ರಹಿತ ರೈಲು

**ಬೆಂಗಳೂರು:** ನಮ್ಮ ಮೆಟ್ರೋದ ಮೊದಲ ಚಾಲಕ ರಹಿತ ರೈಲು ಬೆಂಗಳೂರು ತಲುಪಿದೆ. ಇಂದು ಬೆಳಿಗ್ಗೆ 3.30 ಕ್ಕೆ ಚೆನ್ನೈ ಬಂದರಿನಿಂದ ಬೆಂಗಳೂರಿನ ಹೆಬ್ಬಗೋಡಿ ಡಿಪೋಗೆ ಚಾಲಕ ರಹಿತ ನಮ್ಮ ಮೆಟ್ರೋ ರೈಲು ಬಂದು ತಲುಪಿದೆ. ಆರು ಬೋಗಿಗಳನ್ನು ಟ್ರೇಲರ್‌ಗಳ ಮೂಲಕ ಸಾಗಿಸಲಾಗಿದೆ. ಈ ಚಾಲಕ ರಹಿತ ರೈಲು ಆರ್‌ವಿ ರಸ್ತೆ-ಬೊಮ್ಮಸಂದ್ರ ಲೈನ್‌ನಲ್ಲಿ ಸಂಚರಿಸಲಿದೆ. ಪ್ರತಿ ಕೋಚ್ 38.7 ಮೆಟ್ರಿಕ್ ಟನ್ ತೂಕವಿದೆ.

ಪುಟ 2



# ಸಿಎಂ ಕ್ಷೇತ್ರದಲ್ಲಿ ನಿವೃತ್ತ ಶಿಕ್ಷಕನ ಹತ್ಯೆ!

## ಮದುವೆಯಾದರೂ ಅದೇ ಕುಟುಂಬದ ಟೆಕ್ಕಿ ಮೇಲೆ ಕ್ರಷ್!

## ವಾಮಾಚಾರ ಪೋಟೋದಿಂದ ಸಿಕ್ಕಿಬಿದ್ದ ಪೊಲೀಸಪ್ಪ!

**ಮೈಸೂರು:** ಇದು ಕೇವಲ ಸ್ಟೋರಿಯಲ್ಲ. ಪೊಲೀಸರ ವೃತ್ತಿಪರತೆ, ಬದ್ಧತೆ ಹಾಗೂ ದಕ್ಷತೆಗೆ ಹಿಡಿದ ಕೈಗನ್ನಡಿ. ಇಲ್ಲಿ ಕಾನೂನು ರಕ್ಷಕನೇ ಕಾನೂನು ಭಕ್ಷಕನಾಗಿದ್ದ. ಕಾನೂನಿನ ಆಳ ಅಗಲವನ್ನು ಅರಿತು ಕೊಲೆ ಮಾಡಿ ತಪ್ಪಿಸಿಕೊಳ್ಳಲು ಚಾಪೆ ಕೆಳಗೆ ನುಸುಳಿದ್ದ. ಆದ್ರೆ ನಮ್ಮ ಮೈಸೂರು ಜಿಲ್ಲಾ ಪೊಲೀಸರು ರಂಗೋಲಿ ಕೆಳಗೆ ನುಗ್ಗಿ ಪಾತಕಿಯನ್ನು ಹೆಡೆಮುರಿ ಕಟ್ಟಿದ್ದಾರೆ. ಆರೋಪಿಯನ್ನು ಪತ್ತೆ ಹಚ್ಚಿ ಜೈಲಿಗೆ ಕಳುಹಿಸುವ ಮೂಲಕ ಅಪರಾಧಿ ತಮ್ಮದೇ ಇಲಾಖೆಯವನೇ ಆಗಿದ್ದರೂ ಆತ ಅಪರಾಧಿಯೇ ಎಂಬ ಮಹತ್ವದ ಸಂದೇಶವನ್ನು ಸಮಾಜಕ್ಕೆ ನೀಡಿದ ಮೈಸೂರು ಜಿಲ್ಲಾ ಪೊಲೀಸರು ಟಿವಿ9 ಸೆಲ್ಯೂಟ್‌ಗೆ ಭಾಜನರಾಗಿದ್ದಾರೆ. ಅದು ಸಿಎಂ ಸಿದ್ದರಾಮಯ್ಯ ಅವರ ತವರು ಜಿಲ್ಲೆ ಮೈಸೂರು, ಅದರಲ್ಲೂ ಅವರ ಹುಟ್ಟೂರು ವರುಣ ಕ್ಷೇತ್ರದಲ್ಲಿ ನಡೆದಿದ್ದ



ಕೊಲೆ ಪ್ರಕರಣ. ಮೈಸೂರು ತಾಲ್ಲೂಕಿನ ವರುಣ ಪೊಲೀಸ್ ಠಾಣೆಯ ಸಬ್ ಇನ್ಸಪೆಕ್ಟರ್ ಚೇತನ್ ಎಂದಿನಂತೆ ತಮ್ಮ ಠಾಣೆಯಲ್ಲಿದ್ದಾಗ ವರುಣ ಪೊಲೀಸ್ ಠಾಣಾ ವ್ಯಾಪ್ತಿಯ ದೇವಲಾಪುರ ಗ್ರಾಮದ ರಸ್ತೆ ಬದಿಯಲ್ಲಿ ಅಪರಿಚಿತ ಶವ ಪತ್ತೆಯಾಗಿರುವ ಬಗ್ಗೆ ಮಾಹಿತಿ ಸಿಕ್ಕಿದೆ.

ಪುಟ 2

## ಮತ್ತೆ ಸದ್ದು ಮಾಡಲಿದೆಯಾ ಬೇಬಿ ಬೆಟ್ಟದ ಕಲ್ಲು ಗಣಿಗಾರಿಕೆ ಟ್ರಯಲ್ ಬ್ಲಾಸ್ಟಿಂಗ್

# ಸರ್ಕಾರದ ತಯಾರಿ

**ಮಂಡ್ಯ:** ಕೆಆರ್ ಎಸ್ ಅಣೆಕಟ್ಟೆಯಿಂದ ಕೇವಲ ಐದಾರು ಕಿಲೋಮೀಟರ್ ದೂರದಲ್ಲಿರುವ ಬೇಬಿ ಬೆಟ್ಟದಲ್ಲಿ ಮತ್ತೆ ಕಲ್ಲು ಗಣಿಗಾರಿಕೆ ಸದ್ದು ಮಾಡಲಿದೆಯೇ ಎಂಬ ಅನುಮಾನ ಇದೀಗ ಬಲವಾಗಿದೆ. ಮಂಡ್ಯದ ಬೇಬಿ ಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟಿಂಗ್ ಗೆ ಸರ್ಕಾರ ಸದ್ದಿಲ್ಲದೆ ತಯಾರಿ ನಡೆಸಿರುವುದೇ ಈ ಅನುಮಾನಕ್ಕೆ ಕಾರಣವಾಗಿದೆ. ರೈತರ ವಿರೋಧದ ನಡುವೆಯೂ ಟ್ರಯಲ್ ಬ್ಲಾಸ್ಟಿಂಗ್‌ಗೆ ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಪುಟ 2



## ಆಶಾ ಕಾರ್ಯಕರ್ತೆಯರ ಬ್ಯಾಂಕ್ ಖಾತೆಗೆ 7,000 ರೂ. ವರ್ಗಾವಣೆ

# ದಿನೇಶ್ ಭರವಸೆ



**ಬೆಂಗಳೂರು:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸುತ್ತಿರುವ ಆಶಾ ಕಾರ್ಯಕರ್ತೆಯರನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಭೇಟಿ ಮಾಡಿ ಅಹವಾಲು ಆಲಿಸಿದರು. ಆಶಾ ಕಾರ್ಯಕರ್ತೆಯರ ಬ್ಯಾಂಕ್ ಖಾತೆಗಳಿಗೆ ಈಗಿರುವ 5,000 ರೂ.ಗೆ ಬದಲಾಗಿ 7,000 ರೂ. ವರ್ಗಾವಣೆ ಮಾಡಲು ಕ್ರಮಕ್ಕೈಗೊಳ್ಳಲಾಗುವುದು. ಹೀಗಾಗಿ ಪ್ರತಿಭಟನೆ ಹಿಂಪಡೆಯಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಪುಟ 2

# ಡಿಕೆಶಿ, ಮಧು ಬಂಗಾರಪ್ಪ ವಿರುದ್ಧ ದೂರು

**ಬೆಂಗಳೂರು:** ಡಿಸಿಎಂ ಡಿಕೆ ಶಿವಕುಮಾರ್, ಸಚಿವ ಮಧು ಬಂಗಾರಪ್ಪ ವಿರುದ್ಧ ಮುಖ್ಯ ಚುನಾವಣಾ ಅಧಿಕಾರಿಗಳಿಗೆ ಜೆಡಿಎಸ್ ದೂರು ನೀಡಿದೆ. ರಾಮನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ಬೆಂಗಳೂರು ನಗರ ಜಿಲ್ಲೆ ಡಿಡಿಪಿಐ, ಬಿಇಒಗಳ ಜೊತೆ ಸಭೆ ಸೇರಿಸಿ ಪ್ರಚಾರ ಮಾಡುತ್ತಿರುವ ಕುರಿತು ದೂರು ಸಲ್ಲಿಸಿದ್ದಾರೆ. ಅಧಿಕಾರ ದುರುಪಯೋಗ ಮಾಡಿಕೊಂಡು ತಮ್ಮ ಪಕ್ಷದ ಅಭ್ಯರ್ಥಿ ಪರ ಮತ ಚಲಾಯಿಸುವಂತೆ ಪ್ರಭಾವ ಬೀರುತ್ತಿದ್ದಾರೆ ಎಂದು ಮುಖ್ಯ ಚುನಾವಣಾ ಅಧಿಕಾರಿಗಳಿಗೆ ಜೆಡಿಎಸ್ ದೂರು ನೀಡಿದೆ. ಕೆಲ ದಿನಗಳ ಹಿಂದೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಬಿಜೆಪಿ ಹಿರಿಯ ನಾಯಕರ ಫೋಟೋ ಬಳಸಿ ಕರ್ನಾಟಕ ಕಾಂಗ್ರೆಸ್ ಫೇಸ್‌ಬುಕ್ ಪೇಜ್‌ನಲ್ಲಿ ಪೋಸ್ಟ್ ಮಾಡಿದ್ದ ಹಿನ್ನೆಲೆ ಉಪ ಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಹಾಗೂ ಕೆಪಿಸಿಸಿ ಫೇಸ್‌ಬುಕ್ ಹ್ಯಾಂಡ್ಲರ್ ವಿರುದ್ಧ ಕೋರ್ಟ್‌ನಲ್ಲಿ ದೂರು ದಾಖಲು ಮಾಡಲಾಗಿತ್ತು. ಬಿಜೆಪಿ ರಾಜ್ಯ ಕಾನೂನು ಪ್ರಕೋಷ್ಠದಿಂದ ಐಪಿಸಿ ಸೆಕ್ಷನ್ 153ಎ, 464, 504 ಮತ್ತು 505(ಬಿ)ರಡಿ ಬೆಂಗಳೂರಿನ ವಿಶೇಷ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ದೂರು ದಾಖಲಿಸಲಾಗಿತ್ತು.

# ಮುಸ್ಲಿಮರಿಗೆ ಉಡುಗೊರೆ, ರೈತರಿಗೆ ಗಾಯದ ಮೇಲೆ ಬರೆ

**ಬೆಂಗಳೂರು:** ಸರ್ಕಾರ, ವಕ್ಫ್ ಆಸ್ತಿಗಳಿಗೆ ಕಾಂಪೌಂಡ್ ಕಟ್ಟಿಸಿಕೊಡಲು 31 ಕೋಟಿ ರೂಪಾಯಿ ಉಡುಗೊರೆ ನೀಡಲು ಮುಂದಾಗಿದೆ ಎಂದು ಪ್ರತಿಪಕ್ಷದ ನಾಯಕ ಆರ್ ಅಶೋಕ್ ಸಾಮಾಜಿಕ ಜಾಲತಾಣದಲ್ಲಿ ಕಿಡಿಕಾರಿದ್ದಾರೆ.

**ಪೋಸ್ಟ್‌ನಲ್ಲಿ ಏನಿದೆ :** ಬರದಿಂದ ಹೈರಾಣಾಗಿರುವ ರೈತರಿಗೆ ನೆರವು ನೀಡಲು ಹಣವಿಲ್ಲ ಎಂದು ಗಾಯದ ಮೇಲೆ ಬರೆ ಎಳೆಯುತ್ತಿರುವ ಸಿಎಂ ಸಿದ್ದರಾಮಯ್ಯ ಸರ್ಕಾರ, ವಕ್ಫ್ ಆಸ್ತಿಗಳಿಗೆ ಕಾಂಪೌಂಡ್ ಕಟ್ಟಿಸಿಕೊಡಲು 31 ಕೋಟಿ ರೂಪಾಯಿ ಉಡುಗೊರೆ ನೀಡಲು ಮುಂದಾಗಿದೆ. ಲಜ್ಜೆಗೆಟ್ಟ ಕಾಂಗ್ರೆಸ್ ಸರ್ಕಾರಕ್ಕೆ ನಾಡಿಗೆ ಅನ್ನ ನೀಡುವ ರೈತರ ಹಿತರಕ್ಷಣೆಗಿಂತ ಮುಸ್ಲಿಮರ ಓಲೈಕೆ ಮಾಡಿ ತಮ್ಮ ವೋಟ್ ಬ್ಯಾಂಕ್ ರಕ್ಷಣೆ ಮಾಡಿಕೊಳ್ಳುವುದೇ ಆದ್ಯತೆಯಾಗಿದೆ. ಕರ್ನಾಟಕದಲ್ಲಿರುವುದು ಮುಸ್ಲಿಂ ಪರ ಸರ್ಕಾರ, ಕಾಂಗ್ರೆಸ್ ಅಧಿಕಾರಕ್ಕೆ ಬಂದಿರುವುದೇ ಮುಸ್ಲಿಮರ ಮತದಿಂದ ಅಂತ ಹೇಳಿದ್ದೀರಲ್ಲ ಡಿಸಿಎಂ ಡಿಕೆ ಶಿವಕುಮಾರ್ ಅವರೇ ನಾಡಿನ ರೈತರು ಲೋಕಸಭೆ ಚುನಾವಣೆಯಲ್ಲಿ ತಮಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರ ಹಲವು ಷರತ್ತುಗಳನ್ನು ವಿಧಿಸಿ ರಾಜ್ಯದ ಒಟ್ಟು 416 ವಕ್ಫ್ ಆಸ್ತಿಗಳ ಸಂರಕ್ಷಣೆಗಾಗಿ ಕಾಂಪೌಂಡ್ ಗೋಡೆ ನಿರ್ಮಾಣ ಮಾಡಲು 31.84 ಕೋಟಿ ರೂ. ಹಣವನ್ನು ಬಿಡುಗಡೆ ಮಾಡಿದೆ.

## 1.45 ಕೋಟಿ ಮೌಲ್ಯದ ನಿಕೋಟಿನ್ ಜಪ್ತಿ

# 9 ಜನರ ಬಂಧನ




**ಬೆಂಗಳೂರು:** ಬೆಂಗಳೂರು ನಗರ ಪೊಲೀಸರು ಡ್ರಗ್ಸ್ ಪೆಡ್ಲರ್‌ಗಳ ವಿರುದ್ಧ ಸಮರ ಸಾರಿದ್ದಾರೆ. ಡ್ರಗ್ಸ್ ಮುಕ್ತ ನಗರವನ್ನಾಗಿ ಮಾಡಲು ಪಣ ತೊಟ್ಟಿದ್ದಾರೆ. ನಗರದ ಚಾಮರಾಜಪೇಟೆ, ಮಹದೇವಪುರ, ರಾಮಮೂರ್ತಿನಗರದಲ್ಲಿ ಸಂಗ್ರಹಿಸಿದ್ದ 1.45 ಕೋಟಿ ರೂ. ಮೌಲ್ಯದ ನಿಷೇಧಿತ ಹುಕ್ಕಾ, ನಿಕೋಟಿನ್ ಉತ್ಪನ್ನವನ್ನು ಸಿಸಿಬಿ ಮಹಿಳಾ ಸಂರಕ್ಷಣಾ ದಳ ವಶಪಡಿಸಿಕೊಂಡಿದೆ. ಮತ್ತು ಅಕ್ರಮವಾಗಿ ನಿಕೋಟಿನ್ ಉತ್ಪನ್ನ ಮಾರುತ್ತಿದ್ದ ಒಂಬತ್ತು ಜನರನ್ನು ಬಂಧಿಸಿದೆ. ಬಂಧಿತರಿಂದ 1.10 ಲಕ್ಷ ನಗದು, ಟಾಟಾ ಏಸ್, 11 ಮೊಬೈಲ್ ವಶಪಡಿಸಿಕೊಳ್ಳಲಾಗಿದೆ.

**1 ಕೋಟಿಗೂ ಅಧಿಕ ಮೌಲ್ಯದ ಡ್ರಗ್ಸ್ ಜಪ್ತಿ:** ಕಳೆದ ತಿಂಗಳ ಅಂತ್ಯದಲ್ಲಿ ಸಿಸಿಬಿ ಅಧಿಕಾರಿಗಳು ನಗರದಲ್ಲಿ ಒಂದು ಕೋಟಿಗೂ ಅಧಿಕ ಮೌಲ್ಯದ ಡ್ರಗ್ಸ್ ಜಪ್ತಿ ಮಾಡಿಕೊಂಡಿದ್ದು, ಏಳು ಜನ ಡ್ರಗ್ಸ್ ಪೆಡ್ಲರ್‌ಗಳನ್ನು ಬಂಧಿಸಿದ್ದರು. ಪುಲಿಕೇಶಿನಗರ, ಬಾಣಸವಾಡಿ, ಹುಳಿಮಾವು ಪೊಲೀಸ್ ಠಾಣೆ ವ್ಯಾಪ್ತಿ ಸೇರಿದಂತೆ ನಗರದ ಹಲವೆಡೆ ಆರೋಪಿಗಳು ಡ್ರಗ್ಸ್ ಮಾರುತ್ತಿದ್ದರು. 219 ಎಕ್ಸ್‌ಟೆಸಿ ಪಿಲ್ಸ್, 505 ಗ್ರಾಂ ಎಂಡಿಎಂಎ ಕ್ರಿಸ್ಟಲ್, 130 ಗ್ರಾಂ ತೂಕದ ಚರಸ್, ಕೊಕೇನ್ ಒಟ್ಟು 1 ಕೋಟಿ 52 ಲಕ್ಷದ 50 ಸಾವಿರ ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡಿದ್ದರು.

**21 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ:** ಹೊಸ ವರ್ಷಕ್ಕೆಂದು ಮಾರಾಟಕ್ಕೆ 21 ಕೋಟಿ ಮೌಲ್ಯದ ಡ್ರಗ್ಸ್ ತಂದಿದ್ದ ಆಫ್ರಿಕಾ ಮೂಲದ ಆರೋಪಿಯನ್ನು ಸಿಸಿಬಿ ಪೊಲೀಸರು ಬಂಧಿಸಿದ್ದರು. ಲಿಯೋನಾರ್ಡ್ ಓಕ್ವುಡಿಲಿ ಬಂಧಿತ ಆರೋಪಿ. ಬಂಧಿತನಿಂದ 21 ಕೋಟಿ ಮೌಲ್ಯದ 16 ಕೆಜಿ ಎಂಡಿಎಂಎ, 500 ಗ್ರಾಂ ಕೊಕೇನ್ ಜಪ್ತಿ ಮಾಡಲಾಗಿತ್ತು.

ಬ್ಯುಸಿನೆಸ್ ವೀಸಾ ಪಡೆದುಕೊಂಡು ಆರೋಪಿ ಲಿಯೋನಾರ್ಡ್ ಬೆಂಗಳೂರಿಗೆ ಬಂದು ರಾಮಮೂರ್ತಿನಗರದಲ್ಲಿ ನೆಲೆಸಿದ್ದನು. ಈ ಹೊಸ ವರ್ಷಕ್ಕೆ ಮತ್ತೇರಿಸಲು ಅಪಾರ ಪ್ರಮಾಣದ ಡ್ರಗ್ಸ್ ತಂದಿದ್ದನು. ಸಿಸಿಬಿ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿ ಡ್ರಗ್ಸ್ ವಶಕ್ಕೆ ಪಡೆದಿದ್ದರು. ಆರೋಪಿಯು ಬೆಡ್‌ಶೀಟ್ ಕವರ್, ಸೋಪ್ ಬಾಕ್ಸ್ ಹಾಗೂ ಚಾಕೊಲೇಟ್ ಬಾಕ್ಸ್‌ನಲ್ಲಿ ಡ್ರಗ್ಸ್ ಸಾಗಾಟ ಮಾಡುತ್ತಿದ್ದನು. ಹೊಸ ವರ್ಷಕ್ಕೆ ರೇವ್ ಪಾರ್ಟಿಗೆ ಡ್ರಗ್ಸ್ ಸಾಗಿಸಲು ಮುಂದಾಗಿದ್ದ ವೇಳೆ ಆರೋಪಿ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದನು. ರಾಮಮೂರ್ತಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

# ಸ್ಕೈವಾಕ್ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಿ

**ಬೆಂಗಳೂರು:** ಕೈ ಸರ್ಕಾರದಿಂದ ನಗರದ ಅಭಿವೃದ್ಧಿಗಾಗಿ ದುಡ್ಡು ಬಿಡುಗಡೆ ಮಾಡುವಂತೆ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಡಿಸಿಎಂ ಡಿಕೆ.ಶಿವಕುಮರ್‌ಗೆ ಪತ್ರ ಬರೆದಿದ್ದಾರೆ.

ಕಾಂಗ್ರೆಸ್ ಸರ್ಕಾರದಲ್ಲಿ ಬೆಂಗಳೂರು ಅಭಿವೃದ್ಧಿಗೆ ದುಡ್ಡು ಬಿಡುಗಡೆ ಮಾಡುವಂತೆ ಬಿಜೆಪಿ ನಾಯಕರು ಒತ್ತಡ ನೀಡುತ್ತಿದ್ದಾರೆ. ಈ ಹಿಂದೆ ಇದೇ ವಿಚಾರವಾಗಿ ಶಾಸಕ ಮುನಿರತ್ನ ಮನವಿ ಮಾಡಿದ್ದರು. ಈಗ ತೇಜಸ್ವಿ ಸೂರ್ಯ ಡಿಕೆಶಿಗೆ ಪತ್ರ ಬರೆದಿದ್ದಾರೆ.

ನಗರದ ಸಂಚಾರ ದೃಷಿಯಿಂದ ಬಹುಮುಖ್ಯ ಪ್ರದೇಶವಾಗಿರುವ ಬನಶಂಕರಿಯಲ್ಲಿ ಬಿಎಂಟಿಸಿ ಬಸ್ ನಿಲ್ದಾಣ ಮತ್ತು ಮೆಟ್ರೋ ನಿಲ್ದಾಣಗಳ ನಡುವೆ ಸಾರ್ವಜನಿಕರ ಸಂಚಾರಕ್ಕೆ ಬಹಳ ತೊಂದರೆಯಾಗುತ್ತಿದೆ. ಇವುಗಳ ಮಧ್ಯೆ ದಿನನಿತ್ಯ ಸಂಚಾರ ಮಾಡುವ ಜನರಿಗಾಗಿ ಸ್ಕೈವಾಕ್ ನಿರ್ಮಾಣ ಮಾಡಬೇಕು. ಸ್ಕೈವಾಕ್ ನಿರ್ಮಾಣಕ್ಕೆ ಸರ್ಕಾರದಿಂದ ದುಡ್ಡು ಬಿಡುಗಡೆ ಮಾಡುವಂತೆ ಆಗ್ರಹಿಸಿದ್ದಾರೆ.

# ಕೇಂದ್ರ ಸರ್ಕಾರ ಪ್ರಚಾರಕ್ಕೋಸ್ಕರ ರೈಸ್ ಕೊಡ್ತಿದೆ






**ಬೆಂಗಳೂರು:** ಭಾರತ್ ಅಕ್ಕಿಯನ್ನು ಕೇಂದ್ರ ಸರ್ಕಾರ ಪ್ರಚಾರಕ್ಕೋಸ್ಕರ ನೀಡುತ್ತಿದೆ ಎಂದು ಆಹಾರ ಮತ್ತು ನಾಗರೀಕ ಸಚಿವ ಮುನಿಯಪ್ಪ ಕಿಡಿಕಾರಿದ್ದಾರೆ.

ವಿಧಾನ ಪರಿಷತ್ ಶೂನ್ಯ ವೇಳೆಯಲ್ಲಿ ಬಿಜೆಪಿಯ ರವಿಕುಮಾರ್ ಅವರು ಜನರು ಹಸಿವಿನಿಂದ ಬಳಲುತ್ತಿದ್ದಾರೆ ಅಂತ ಪ್ರಸ್ತಾಪ ಮಾಡಿದ್ದರು. ಇದಕ್ಕೆ ಮುನಿಯಪ್ಪನವರು ಉತ್ತರಿಸಿ, ನಾವು ಅಕ್ಕಿ ಕೇಳಿದ್ದಾಗ ಕೇಂದ್ರ ಸರ್ಕಾರ ಕೊಡಲಿಲ್ಲ. ಈಗ ಭಾರತ್ ಅಕ್ಕಿ ಹೆಸರಿನಲ್ಲಿ 1 ಕೆಜಿಗೆ 29 ರೂ.ಗೆ ನಷ್ಟ ಮಾಡಿಕೊಂಡು ಅಕ್ಕಿ ಕೊಡ್ತಿದೆ. ಪ್ರಚಾರಕ್ಕಾಗಿ ಕೇಂದ್ರ ಅಕ್ಕಿ ಕೊಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಾವು ಅನ್ನಭಾಗ್ಯ ಯೋಜನೆಗೆ ಅಕ್ಕಿ ಕೊಡಿ ಎಂದು ಕೇಳಿದಾಗ ನಮಗೆ ಅಕ್ಕಿ ಕೊಡಲಿಲ್ಲ. ನಾವು 34 ರೂಪಾಯಿಗೆ ಕೊಡ್ತೀವಿ ಅಂದರೂ ಕೊಡಲಿಲ್ಲ. ನಾವು ಬೇರೆ ರಾಜ್ಯದಿಂದ ಅಕ್ಕಿ ತರುವ ಪ್ರಯತ್ನ ಮಾಡಿದ್ರು, ಆಗಲಿಲ್ಲ. ಹಾಗಾಗಿ ನಾವು 34 ರೂಪಾಯಿ ಹಣವನ್ನು ಫಲಾನುಭವಿಗಳಿಗೆ ನೀಡುತಿದ್ದೇವೆ. ಕೇಂದ್ರ ಸರ್ಕಾರ ಭಾರತ್ ರೈಸ್ ಅಂತ ಪ್ರಚಾರಕ್ಕಾಗಿ ಕೋಟ್ಯಂತರ ರೂಪಾಯಿ ನಷ್ಟ ಮಾಡಿಕೊಂಡು ಅಕ್ಕಿ ಕೊಡುತ್ತಿದೆ ಎಂದು ದೂರಿದರು. ನಮಗೆ ಅಕ್ಕಿ ಕೊಟ್ಟಿದ್ರೆ 34 ರೂ.ಗೆ ಕೊಡುತ್ತಿದ್ದೆವು. ರಾಜಕೀಯಕ್ಕಾಗಿ ಅವರು ನಮಗೆ ಅಕ್ಕಿ ಕೊಡಲಿಲ್ಲ. ಈಗ ನಷ್ಟ ಮಾಡಿಕೊಂಡು ಆರ್ಥಿಕ ವ್ಯವಸ್ಥೆ ಹಾಳು ಮಾಡುತ್ತಿದೆ ಎಂದು ಮುನಿಯಪ್ಪ ಕಿಡಿಕಾರಿದರು.

# ಕೇಂದ್ರ ಸರ್ಕಾರ ಬರ ಪರಿಹಾರಕ್ಕೆ ಹಣ ಬಿಡುಗಡೆ ಮಾಡುತ್ತಿಲ್ಲ

**ಬೆಂಗಳೂರು:** ಕೇಂದ್ರ ಸರ್ಕಾರಕ್ಕೆ 15 ಪತ್ರ ಬರೆದರೂ ಬರ ಪರಿಹಾರಕ್ಕೆ ಇದೂವರೆಗೂ ಹಣ ಬಿಡುಗಡೆ ಮಾಡಿಲ್ಲ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದರು.



ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಜೆಡಿಎಸ್ ಶರವಣ ತೋಟಗಾರಿಕೆ ಬೆಲೆ ನಷ್ಟ ಮತ್ತು ಪರಿಹಾರದ ಬಗ್ಗೆ ಪ್ರಶ್ನೆ ಕೇಳಿದರು. ಇದಕ್ಕೆ ಉತ್ತರ ನೀಡಿದ ಚೆಲುವರಾಯಸ್ವಾಮಿ, ರಾಜ್ಯದಲ್ಲಿ ತೀವ್ರ ಬರಗಾಲದಿಂದ 5,11,208 ಹೆಕ್ಟೇರ್ ತೋಟಗಾರಿಕೆ ಬೆಳೆ ನಷ್ಟವಾಗಿದೆ. ಕೇಂದ್ರಕ್ಕೆ ಪರಿಹಾರಕ್ಕಾಗಿ ಪತ್ರ ಬರೆದು 5 ತಿಂಗಳು ಆಗಿದೆ. ಈವರೆಗೂ ಕೇಂದ್ರ ಸರ್ಕಾರ ಪರಿಹಾರ ಹಣ ಬಿಡುಗಡೆ ಮಾಡಿಲ್ಲ. ಈವರೆಗೂ 15 ಪತ್ರ ಕೇಂದ್ರಕ್ಕೆ ಬರೆಯಲಾಗಿದೆ. ಸಿಎಂ ಅವರು ಪ್ರಧಾನಿ, ಅಮಿತ್ ಶಾ ಅವರಿಗೆ ಮನವಿ ಮಾಡಿದರೂ ಹಣ ಬಿಡುಗಡೆ ಮಾಡಿಲ್ಲ. ಕೇಂದ್ರ ಸಚಿವ ಅಮಿತ್ ಶಾ ಸಭೆ ಮಾಡುತ್ತೇನೆ ಎಂದರೂ ಸಭೆ ಮಾಡಿಲ್ಲ. ಕೇಂದ್ರದ ಬರ ಅಧ್ಯಯನ ತಂಡವೇ ವರದಿ ಕೊಟ್ಟರೂ ಕೇಂದ್ರ ಪರಿಹಾರ ಬಿಡುಗಡೆ ಮಾಡಿಲ್ಲ ಎಂದು ಕಿಡಿಕಾರಿದರು. ನಾವು ಗ್ಯಾರಂಟಿ ಯೋಜನೆಗಳಿಂದ ಹಣ ಇಲ್ಲ ಎಂದು ಎಲ್ಲೂ ಹೇಳಿಲ್ಲ.ಕೇಂದ್ರ ಸರ್ಕಾರ ಪರಿಹಾರ ಕೊಡದೇ ಹೋದರೂ ರಾಜ್ಯ ಸರ್ಕಾರ 2 ಸಾವಿರ ಪರಿಹಾರ ಹಣ ಕೊಡಲಾಗುತ್ತಿದೆ. ಇಲ್ಲಿಯವರೆಗೆ 30,24,795 ರೈತರಿಗೆ 573.28 ಕೋಟಿ ಪರಿಹಾರ ನೀಡಲಾಗಿದೆ. ಕೇಂದ್ರ ಸರ್ಕಾರದ ನಿರೀಕ್ಷೆಯಲ್ಲಿ ಇದ್ದೇವೆ.ಪರಿಹಾರ ಬಂದ ಕೂಡಲೇ ರೈತರಿಗೆ ಪರಿಹಾರ ಬಿಡುಗಡೆ ಮಾಡ್ತೀವಿ ಅಂತ ತಿಳಿಸಿದರು.

# ಕೋಲಾರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಾರಾಮಾರಿ

**ಕೋಲಾರ:** ಕೋಲಾರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗಲಾಟೆ-ಗದ್ದಲ ನಡೆದಿದೆ. ಕಚೇರಿಯಲ್ಲಿ ಹಾಕಲಾಗಿದ್ದ ಬ್ಯಾನರ್ ನಲ್ಲಿ ರಮೇಶ್ ಕುಮಾರ್ , ಕೊತ್ತೂರು ಮಂಜುನಾಥ್, ನಸೀರ್ ಅಹ್ಮದ್ ಫೋಟೋ ಇಲ್ಲದ ಹಿನ್ನಲೆ ಗಲಾಟೆ ನಡೆದಿದ್ದು ಕಾರ್ಯಕರ್ತರು ಮತ್ತು ಮುಖಂಡರ ಮಧ್ಯೆ ಹೊಡೆದಾಟ ನಡೆದಿದೆ. ಶಾಸಕ ಕೊತ್ತೂರು ಮಂಜುನಾಥ್ ಬೆಂಬಲಿಗರು ಮತ್ತು ಕೆ.ಹೆಚ್.ಮುನಿಯಪ್ಪ ಬೆಂಬಲಿಗರ ನಡುವೆ ಮಾರಾಮಾರಿಯಾಗಿದೆ. ಕೆಪಿಸಿಸಿ ಕಾರ್ಯದರ್ಶಿ ರಮೇಶ್ ಮತ್ತು ರಾಜಕುಮಾರ್ ಸಮ್ಮುಖದಲ್ಲಿ ಪರಸ್ಪರ ಬಡಿದಾಟ ನಡೆದಿದೆ. ಶಾಸಕ ಕೊತ್ತೂರು ಮಂಜುನಾಥ್ ಅವರ ಬೆಂಬಲಿಗರಿಂದ ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಊರುಬಾಗಿಲು ಶ್ರೀನಿವಾಸ್ ಮೇಲೆ ಏಕಾಏಕಿ ದಾಳಿ ನಡೆದಿದೆ. ಇಂದು ಕಾಂಗ್ರೆಸ್ ಕಚೇರಿಯಲ್ಲಿ ಕರೆಯಲಾಗಿದ್ದ ಬೂತ್ ಮಟ್ಟದ ಏಜೆಂಟರ್ ಸಭೆಯಲ್ಲಿ ಕಾರ್ಯಕರ್ತರು ಮತ್ತು ಮುಖಂಡರ ನಡುವೆ ಹೊಡೆದಾಟ ನಡೆದಿದೆ. ಸಭೆಯಿಂದ ಹೊರ ನಡೆದ ಮುನಿಯಪ್ಪ ಬೆಂಬಲಿಗ ಕಾರ್ಯಾಧ್ಯಕ್ಷ ಊರುಬಾಗಲು ಶ್ರೀನಿವಾಸ ಮೇಲೆ ಹಲ್ಲೆ ನಡೆಸಲಾಗಿದೆ. ಕಾಂಗ್ರೆಸ್ ವೀಕ್ಷಕರಾದ ರಾಜ್ ಕುಮಾರ್ ನೇತೃತ್ವದಲ್ಲಿ ಇಂದು ಜಿಲ್ಲಾ ಕಚೇರಿಯಲ್ಲಿ ಬೂತ್ ಮಟ್ಟದ ಏಜೆಂಟರನ್ನ ನೇಮಿಸುವ ಸಲುವಾಗಿ ಸಭೆ ಕರೆಯಲಾಗಿತ್ತು.

# ರೀಲ್ಸ್ ಮಾಡಿದ ಮಹಿಳೆ

ಇತ್ತೀಚಿನ ದಿನಗಳಲ್ಲಿ, ಜನರು ಸಾಮಾಜಿಕ ಮಾಧ್ಯಮದಲ್ಲಿ ಪ್ರಸಿದ್ಧರಾಗಲು ಯಾವ ಮಟ್ಟಕ್ಕೂ ಬೇಕಾದರೂ ಇಳಿಯುತ್ತಾರೆ ಎಂಬುದಕ್ಕೆ ಇದು ಉತ್ತಮ ನಿದರ್ಶನ. ಮಾಧುರಿ ದೀಕ್ಷಿತ್, ಸಂಜಯ್ ದತ್ ಮತ್ತು ಜಾಕಿ ಶ್ರಾಫ್ ನಟಿಸಿದ 1993 ರ ಸೂಪರ್ ಹಿಟ್ ಚಲನಚಿತ್ರ ''ಖಲ್ನಾಯಕ್'' ಹಾಡಿನ ''ಆಜಾ ಸಜನ್ ಆಜಾ'' ನಲ್ಲಿ ಮಹಿಳೆ ನೃತ್ಯ ಮಾಡುವುದನ್ನು ವೀಡಿಯೊದಲ್ಲಿ ಕಾಣಬಹುದು.. ಹಾಡು ಪ್ಲೇ ಆಗುತ್ತಿದ್ದಂತೆ ಮಹಿಳೆ ಪ್ರಧಾನಿ ಮೋದಿಯವರ ಕಟೌಟ್‌ನತ್ತ ಓಡಿ ಅದನ್ನು ತಬ್ಬಿಕೊಳ್ಳುವುದರೊಂದಿಗೆ ವೀಡಿಯೊ ಪ್ರಾರಂಭವಾಗುತ್ತದೆ. ನಂತರ ತನ್ನ ಅರೆಬರೆ ಮೈಯನ್ನು ಪ್ರದರ್ಶಿಸುತ್ತಾ ನೃತ್ಯ ಮಾಡುತ್ತಿರುವುದು ವಿಡಿಯೋದಲ್ಲಿ ಸೆರೆಯಾಗಿದೆ.

ಈ ವಿಡಿಯೋ ಹಂಚಿಕೊಂಡ ಸುಮಾರು 15 ಸೆಕೆಂಡ್‌ಗಳಲ್ಲಿ ಲಕ್ಷಾಂತರ ವೀಕ್ಷಣೆಯನ್ನು ಪಡೆದುಕೊಂಡಿದೆ. ವೀಡಿಯೊದ ಸಮಯ ಮತ್ತು ಸ್ಥಳವನ್ನು ಇನ್ನೂ ಖಚಿತಪಡಿಸಲಾಗಿಲ್ಲ.

''ವೀಡಿಯೊ ಅಸಭ್ಯವಾಗಿದೆ ಮತ್ತು ಜನರು ಸಾಮಾಜಿಕ ಮಾಧ್ಯಮದಲ್ಲಿ ವೀಕ್ಷಣೆಗಳು ಮತ್ತು ಇಷ್ಟಗಳನ್ನು ಗಳಿಸಲು ಇಂತಹ ಕೃತ್ಯಗಳನ್ನು ಮಾಡುವುದನ್ನು ತಡೆಯಬೇಕು. ದೇಶದಲ್ಲಿ ಅಂತಹ ಉನ್ನತ ಸ್ಥಾನದಲ್ಲಿರುವ ವ್ಯಕ್ತಿಗೆ ಗೌರವ ಮತ್ತು ಅವರ ಸ್ಥಾನವನ್ನು ದೇಶದ ಪ್ರತಿಯೊಬ್ಬ ನಾಗರಿಕರು ಗೌರವಿಸಬೇಕು'' ಎಂದು ಸಾಕಷ್ಟು ನೆಟ್ಟಿಗರು ಕಾಮೆಂಟ್ ಮೂಲಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಆಸ್ತಿ ತೆರಿಗೆ ಬಾಕಿ

ನಿವೇಶನಗಳನ್ನು ಸೀಲ್ ಮಾಡಿದರೂ ತೆರಿಗೆ ಪಾವತಿಸದ ಪ್ರಕರಣಕ್ಕೆ ಸಂಬಂಧಿಸಿದ 7,203 ಆಸ್ತಿಗಳನ್ನು ಜಪ್ತಿ ಮಾಡಿದ್ದಾರೆ.

ಮಂಗಳವಾರ (ಫೆ.13) ರಂದು ಕಾರುಗಳು ಮತ್ತು ಶಾಲಾ ಬಸ್‌ಗಳಂತಹ ಚರ ಆಸ್ತಿಗಳನ್ನು ಮೊದಲ ಬಾರಿಗೆ ಬಿಬಿಎಂಪಿ ಜಪ್ತಿ ಮಾಡಿತ್ತು. ಬಿಬಿಎಂಪಿಯ ಯಲಹಂಕ ವಿಭಾಗದಲ್ಲಿ ನಾಲ್ಕು ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದರು.

**ಮಂತ್ರಿ ಮಾಲ್‌ಗೂ ಬೀಗ:** 2023ರ ಡಿಸೆಂಬರ್ ನಲ್ಲಿ ಬಿಬಿಎಂಪಿ 51 ಕೋಟಿ ರೂ. ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿದ್ದ ಮಂತ್ರಿ ಸ್ಕ್ವೇರ್ ಮಾಲ್ ಗೆ ಬೀಗಮುದ್ರೆ ಹಾಕಿತ್ತು. 2019-20ರ ವರೆಗಿನ ಆಸ್ತಿ ತೆರಿಗೆ ಬಾಕಿಯಿದ್ದ ಹಿನ್ನೆಲೆಯಲ್ಲಿ ಬೀಗ ಹಾಕಲಾಗಿತ್ತು. ಮಂತ್ರಿ ಮಾಲ್ ಮಾಲಿಕ 2020ರ ಆಗಸ್ಟ್ ನಲ್ಲಿ ಬಿಬಿಎಂಪಿಗೆ 10 ಕೋಟಿ ರೂ. ಮೊತ್ತದ ಚೆಕ್ ನೀಡಿದ್ದರು. ಆದರೆ ಆ ಚೆಕ್ ಬೌನ್ಸ್ ಆಗಿತ್ತು. ಮತ್ತೆ ಮತ್ತೆ ನೋಟಿಸ್ ನೀಡಿದ್ದರು ಕೂಡ ಮಾಲ್ ನ ಆಡಳಿತ ಮಂಡಳಿ ತೆರಿಗೆ ಪಾವತಿಸಿರಲಿಲ್ಲ, ಹೀಗಾಗಿ ಕಳೆದ ವರ್ಷ ಬೀಗ ಹಾಕಿತ್ತು.

**10,603 ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳಿಗೆ ಬೀಗಮುದ್ರೆ:** ಕಳೆದ ಆರು ತಿಂಗಳಲ್ಲಿ ಬಿಬಿಎಂಪಿ 10,603 ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳನ್ನು ಸೀಲ್ ಮಾಡಿದೆ. ಆದರೆ, ವಶಪಡಿಸಿಕೊಂಡ ವಾಹನಗಳನ್ನು ಇಡಲು ಸೂಕ್ತ ಸ್ಥಳಾವಕಾಶ ಇಲ್ಲದ ಕಾರಣ ಚರಾಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿಲ್ಲ. ಬಿಬಿಎಂಪಿ ಕಾಯ್ದೆಯಡಿ, ಸ್ಥಿರ ಮತ್ತು ಚರಾಸ್ತಿಗಳನ್ನು ವಶಪಡಿಸಿಕೊಳ್ಳಲು ಅವಕಾಶವಿದೆ.

**ಇದೇ ಮೊದಲ ಬಾರಿ ಬೃಹತ್ ಕಾರ್ಯಾಚರಣೆ:** ಒಟ್ಟು 500 ಕೋಟಿ ರೂ.ಗೂ ಹೆಚ್ಚು ಬಾಕಿ ಉಳಿಸಿಕೊಂಡಿರುವ ಆಸ್ತಿ ತೆರಿಗೆ ಸುಸ್ತಿದಾರರ ವಿರುದ್ಧ ಬಿಬಿಎಂಪಿ ಇದೇ ಮೊದಲ ಬಾರಿಗೆ ದೊಡ್ಡ ಮಟ್ಟದ ಕ್ರಮ ಕೈಗೊಂಡಿದೆ. ಸುಸ್ತಿದಾರರ ಹಿಂದೆ ಹೋಗುವುದರ ಜೊತೆಗೆ, ಸ್ವ-ಮೌಲ್ಯಮಾಪನ ಯೋಜನೆ (ಎಸ್ ಎಎಸ್) ಅಡಿಯಲ್ಲಿ ಸಲ್ಲಿಸಿದ ದಾಖಲೆಗಳು ಮತ್ತು ಆಸ್ತಿಯನ್ನು ಮರು ಪರಿಶೀಲಿಸಲು ನಾಗರಿಕ ಸಂಸ್ಥೆಯು ಆಸ್ತಿಗಳನ್ನು ಮರುಪರಿಶೀಲಿಸಲು ಪ್ರಾರಂಭಿಸಿದೆ.

# ಉದ್ಘಾಟಿಸಲಿದ್ದಾರೆ ಮೋದಿ

ಪ್ರಧಾನಿ ಮೋದಿ ಮಾತು ನಾನು ಇಲ್ಲಿಗೆ 7ನೇ ಬಾರಿಗೆ ಭೇಟಿ ನೀಡುತ್ತಿದ್ದೇನೆ, ಯಾವಾಗ ಯುಎಇಗೆ ಬಂದರೂ ನನ್ನ ಕುಟುಂಬದವರೊಂದಿಗೆ ಇದ್ದೇನೆ ಎಂದು ಅನಿಸುತ್ತದೆ. ಒಂದು ಬಾರಿ ಮನವಿ ಮಾಡಿದ್ದಷ್ಟೇ 27 ಎಕರೆ ಪ್ರದೇಶವನ್ನು ದೇವಸ್ಥಾನಕ್ಕಾಗಿ ಬಿಟ್ಟುಕೊಟ್ಟರು ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಯುಎಇಯಲ್ಲಿ ಹಿಂದೂ ದೇವಾಲಯವನ್ನು ಎಲ್ಲಿ ನಿರ್ಮಿಸಲಾಗಿದೆ ಯುಎಇಯ ರಾಜಧಾನಿ ಅಬುಧಾಬಿಯಲ್ಲಿರುವ 'ಅಲ್ ವಕ್ಬಾ' ಎಂಬ ಸ್ಥಳದಲ್ಲಿ ಈ ದೇವಾಲಯವನ್ನು ನಿರ್ಮಿಸಲಾಗಿದೆ. ಈ ಧಾರ್ಮಿಕ ಸ್ಥಳವು 20,000 ಚದರ ಮೀಟರ್ ಪ್ರದೇಶದಲ್ಲಿ ಹರಡಿದೆ. ಹೆದ್ದಾರಿಯ ಪಕ್ಕದಲ್ಲಿರುವ ಅಲ್ ವಕ್ಬಾ ಎಂಬ ಸ್ಥಳವು ಅಬುಧಾಬಿಯಿಂದ ಸುಮಾರು 30 ನಿಮಿಷಗಳ ದೂರದಲ್ಲಿದೆ.

ಇಲ್ಲಿನ ಪ್ರಾರ್ಥನಾ ಮಂದಿರದಲ್ಲಿ 3 ಸಾವಿರ ಮಂದಿ ಕುಳಿತುಕೊಳ್ಳುವ ಸಾಮರ್ಥ್ಯವಿದೆ, ಒಂದು ಸಮುದಾಯ ಕೇಂದ್ರ, ಒಂದು ಗ್ರಂಥಾಲಯ ಮತ್ತು ಮಕ್ಕಳ ಉದ್ಯಾನ ಒಳಗೊಂಡಿದೆ. ದೇವಾಲಯದ ಮುಂಭಾಗ ಅಮೃತಶಿಲೆಯ ಕೆತ್ತನೆಯನ್ನು ಹೊಂದಿದ್ದು, ರಾಜಸ್ಥಾನ ಮತ್ತು ಗುಜರಾತ್ ನ ನುರಿತ ಕುಶಲಕರ್ಮಿಗಳಿಂದ ಕೆತ್ತನೆ ಕಾರ್ಯ ನಡೆದಿದ್ದು ಇದಕ್ಕಾಗಿ 25,000 ಕಲ್ಲುಗಳನ್ನು ಬಳಸಲಾಗಿದೆ. ಅಯೋಧ್ಯೆಯ ರಾಮ

## ಮೊದಲ ಪುಟದಿಂದ...

ಮಂದಿರ ರೀತಿಯಲ್ಲೇ ಇಲ್ಲಿ ದೇವಾಲಯವನ್ನು ನಿರ್ಮಾಣ ಮಾಡಲಾಗಿದೆ.

# ಚಾಲಕ ರಹಿತ ರೈಲು

ಜನವರಿ 24 ರಂದು ಶಾಂಘೈ ಬಂದರಿನಿಂದ ಸಮುದ್ರ ಮಾರ್ಗವಾಗಿ ಕಳುಹಿಸಲಾದ ಮೆಟ್ರೋ ಟ್ರೈನ್ ಫೆಬ್ರವರಿ 6 ರಂದು ಚೀನಾದಿಂದ ಚೆನ್ನೈ ಬಂದರಿಗೆ ಬಂದು ತಲುಪಿತ್ತು. ಬಳಿಕ ಕಸ್ಟಮ್ಸ್ ಕ್ಲಿಯರೆನ್ಸ್ ನಂತರ, ಈ ರೈಲನ್ನು ರಸ್ತೆ ಮೂಲಕ ಬೆಂಗಳೂರಿನ ಹೆಬ್ಬಗೋಡಿ ಡಿಪೋಗೆ ತರಲಾಗಿದೆ. ಚೀನಾ-ಮಾಲೀಕತ್ವದ ಸಿಆರ್‌ಆರ್‌ಸಿ ನಾನ್‌ಜಿಂಗ್ ಪುಜೆನ್ ಕಂ. ಲಿಮಿಟೆಡ್‌ನಿಂದ ತಯಾರಿಸಲ್ಪಟ್ಟ ಈ ರೈಲು, ಆರ್‌ವಿ ರಸ್ತೆ-ಬೊಮ್ಮಸಂದ್ರ ಲೈನ್‌ಗೆ ಪ್ರಾಯೋಗಿಕ ಸಂಚಾರ ನಡೆಸುತ್ತದೆ.

ಚಾಲಕ ಇಲ್ಲದಿದ್ದರೂ ಈಗಾಗಲೇ ಅಳವಡಿಸಲಾದ ಪ್ರೋಗ್ರಾಂ ಆಧಾರದ ಮೇಲೆ ರೈಲು ಸಂಚರಿಸಲಿದೆ. ರೈಲಿನ ಸಂಚಾರವನ್ನು ಕಂಟ್ರೋಲ್ ರೂಮ್ ನಲ್ಲಿ ನಿಗಾ ವಹಿಸಲಾಗುತ್ತದೆ. ಚಾಲಕ ಇಲ್ಲದೇ ಈ ಮೆಟ್ರೋ ಗಂಟೆಗೆ 80 ಕಿ.ಮೀ. ವೇಗದಲ್ಲಿ ಚಲಿಸಲಿದೆ. 25 ಕೆವಿ ಸಾಮರ್ಥ್ಯದ ವಿದ್ಯುತ್ ಸಹಾಯದಿಂದ ಸಂಚರಿಸುತ್ತದೆ. ಸಿಸಿಟಿವಿ ಕ್ಯಾಮೆರಾಗಳನ್ನೂ ಬೋಗಿಗಳಲ್ಲಿ ಅಳವಡಿಸಲಾಗಿದೆ. ಇನ್ನು ಸಂಚಾರದಲ್ಲಿ ಸಮಸ್ಯೆ ಉಂಟಾದರೆ ತಕ್ಷಣ ಓಸಿಸಿಗೆ ಸಂದೇಶ ರವಾನೆ ಆಗಲಿದೆ. ಆಗ ತಕ್ಷಣ ರೈಲಿನ ಸಂಚಾರವನ್ನು ನಿಲ್ಲಿಸಲಾಗುತ್ತೆ.

# ದೂರು ದಾಖಲು

**ಪದ್ಮರಾಜ್ ಪೊಲೀಸ್ ವಶಕ್ಕೆ:** ಶಾಸಕ ಕೆ ಗೋಪಾಲಯ್ಯಗೆ ಜೀವ ಬೆದರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಕಾರ್ಪೊರೇಟರ್ ಪದ್ಮರಾಜ್ ನನ್ನು ಪೊಲೀಸ್ ವಶಕ್ಕೆ ಪಡೆಯಲಾಗಿದೆ. ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರಿಂದ ಪದ್ಮರಾಜ್ ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಪದ್ಮರಾಜ್ ಬಳಿಯಿದ್ದ ಮೊಬೈಲ್ ಅನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ವಿಧಾನಪರಿಷತ್ ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪಚುನಾವಣೆಗೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪರ ಮತಯಾಚಿಸಿದ್ದನ್ನು ಯಶವಂತಪುರ ಬಿಜೆಪಿ ಶಾಸಕ ಎಸ್ .ಟಿ.ಸೋಮಶೇಖರ್ ಸಮರ್ಥನೆ ಮಾಡಿಕೊಂಡಿದ್ದಾರೆ. ನನ್ನ ಕಚೇರಿಗೆ ಅವರು ಬಂದು ಮನವಿ ಮಾಡಿದ್ದರಲ್ಲಿ ತಪ್ಪೇನಿಲ್ಲ. ಬಿಜೆಪಿಯರು ಪಕ್ಷ ವಿರೋಧಿ ಅಂತಾ ಪರಿಗಣಿಸಿದ್ರೆ ಪರಿಗಣಿಸಲಿ ಎಂದು ಅವರು ಹೇಳಿದ್ದಾರೆ.

ಪಕ್ಷಕ್ಕೆ ದ್ರೋಹ ಮಾಡಿದವರನ್ನೇ ಸೇರ್ಪಡೆ ಮಾಡಿಕೊಳ್ಳುತ್ತಿದ್ದಾರೆ. ರಾಜ ಮಜಿದೆ ಕೊಟ್ಟು ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳುತ್ತಿದ್ದಾರೆ. ನನ್ನನ್ನು ಪಕ್ಷದಿಂದ ಸಸ್ಪೆಂಡ್ ಮಾಡುವುದಾದರೆ ಮಾಡಲಿ. ನಾನು ಅದಕ್ಕೆಲ್ಲ ತಲೆಕೆಡಿಸಿಕೊಳ್ಳುವುದಿಲ್ಲ, ಜೆಡಿಎಸ್ ಅಭ್ಯರ್ಥಿ ಪರ ನಾನು ಯಾವ ಕಾರಣಕ್ಕೂ ಮತ ಕೇಳುವುದಿಲ್ಲ ಎಂದು 'ಟಿವಿ9'ಗೆ ಬಿಜೆಪಿ ಶಾಸಕ ಎಸ್ .ಟಿ.ಸೋಮಶೇಖರ್ ಪ್ರತಿಕ್ರಿಯೆ ನೀಡಿದ್ದಾರೆ.

ವಿಧಾನಸಭಾ ಚುನಾವಣೆಯ ಬಳಿಕ ನಿರಂತರವಾಗಿ ಬಿಜೆಪಿಯಿಂದ ಅಂತರ ಕಾಯ್ದುಕೊಂಡಿದ್ದ ಸೋಮಶೇಖರ್ ಅವರು ಮಂಗಳವಾರ ಪಕ್ಷಕ್ಕೆ ಮತ್ತೊಂದು ಆಘಾತ ನೀಡಿದ್ದರು. ವಿಧಾನ ಪರಿಷತ್ ನ ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪಚುನಾವಣೆಗೆ ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿ ಅಭ್ಯರ್ಥಿ ಬಿಟ್ಟು ಕಾಂಗ್ರೆಸ್ ಅಭ್ಯರ್ಥಿಗೆ ಮತ ನೀಡುವಂತೆ ಅವರು ಕೇಳಿಕೊಂಡಿದ್ದರು.

# ದಿನೇಶ್ ಭರವಸೆ

ಆದರೆ, ಪಟ್ಟು ಬಿಡದ ಆಶಾ ಕಾರ್ಯಕರ್ತೆಯರು ಮುಖ್ಯಮಂತ್ರಿಗಳು ಮಧ್ಯಸ್ಥಿಕೆ ವಹಿಸುವಂತೆ ಆಗ್ರಹಿಸಿ ಪ್ರತಿಭಟನೆ ಮುಂದುವರಿಸಲು ನಿರ್ಧರಿಸಿದ್ದಾರೆ. ರಾಜ್ಯದಲ್ಲಿ ಶೇ 50 ರಷ್ಟು ಆಶಾ ಕಾರ್ಯಕರ್ತೆಯರಿಗೆ ಅವರು ಮಾಡಿದ ಕೆಲಸಕ್ಕೆ ತಕ್ಕ ವೇತನ ಸಿಗುತ್ತಿಲ್ಲ ಎಂದು ಅವರು ಆರೋಪಿಸಿದ್ದಾರೆ. ಅಲ್ಲದೆ, ರಿಪ್ರೊಡಕ್ಟಿವ್ ಆ ಯಂಡ್ ಚೈಲ್ಡ್ ಹೆಲ್ತ್ (ಆರ್‌ಸಿಎಚ್) ಪೋರ್ಟಲ್ ಅನ್ನು ಪಾವತಿ ಪ್ರಕ್ರಿಯೆಯಿಂದ ಡಿಲಿಂಕ್ ಮಾಡಿ, 15,000 ರೂ. ನಿಗದಿತ ಗೌರವಧನವಾಗಿ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

7,000 (ಅಸ್ತಿತ್ವದಲ್ಲಿರುವ 5,000 ರೂ. ಗೌರವಧನ ಮತ್ತು 2,000 ರೂ. ನಾನ್-ಎಂಸಿಟಿಎಸ್ ಒಟ್ಟಿಗೆ ಸೇರಿಸಿ) ನೇರವಾಗಿ ವರ್ಗಾವಣೆ ಮಾಡುವುದಾಗಿ ಸಚಿವರು ಭರವಸೆ ನೀಡಿದ್ದಾರೆ. ಆಶಾ ಕಾರ್ಯಕರ್ತೆಯರಿಗೆ ತಮ್ಮ ಚಟುವಟಿಕೆಗಳನ್ನು ಅಪ್ ಲೋಡ್ ಮಾಡಲು ಮತ್ತು ಟ್ರ್ಯಾಕ್ ಮಾಡಲು ಸಹಾಯ ಮಾಡುವ ಸಾಫ್ಟ್‌ವೇರ್ ಅನ್ನು ಸರ್ಕಾರ ಅಭಿವೃದ್ಧಿಪಡಿಸುತ್ತಿದೆ ಎಂದು ಹೇಳಿದ್ದಾರೆ.

ನೂತನ ಸಾಫ್ಟ್ ವೇರ್ ಪಾವತಿ ವ್ಯವಸ್ಥೆಯನ್ನು ಹೆಚ್ಚು ಪಾರದರ್ಶಕಗೊಳಿಸುತ್ತದೆ ಎಂದು ಅವರು ಹೇಳಿದ್ದಾರೆ. ಅಲ್ಲದೆ, ಆಶಾ ಕಾರ್ಯಕರ್ತೆಯರಿಗೆ ನಿಗದಿತ ಗೌರವಧನವನ್ನು ಒದಗಿಸುವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುವುದಾಗಿ ಭರವಸೆ ನೀಡಿದ್ದಾರೆ.

ಆರೋಗ್ಯ ಸಚಿವರ ಭರವಸೆಗಳು ಬೇಡಿಕೆಗಳನ್ನು ಪೂರ್ತಿಯಾಗಿ ಈಡೇರಿಸುವಂತಿಲ್ಲದ ಕಾರಣ ಕಾರ್ಯಕರ್ತೆಯರು ಪ್ರತಿಭಟನೆಯನ್ನು ಮುಂದುವರೆಸಲು ನಿರ್ಧರಿಸಿದ್ದಾರೆ. ಆಶಾ ಕಾರ್ಯಕರ್ತೆಯರನ್ನು ಕಾರ್ಮಿಕರೆಂದು ಪರಿಗಣಿಸಿ ಕನಿಷ್ಠ ವೇತನ, ಪಿಎಫ್, ಇಎಸ್‌ಐ, ಗ್ರಾಚ್ಯುಟಿ ಸೌಲಭ್ಯಗಳನ್ನು ನೀಡಬೇಕು. ನಗರಗಳಲ್ಲಿ ಕೆಲಸ ಮಾಡುವ ಕಾರ್ಯಕರ್ತೆಯರಿಗೆ 2,000 ರೂ ಗೌರವಧನ ಹೆಚ್ಚಿಸುವುದು ಇತ್ಯಾದಿಗಳು ಅವರ ಇತರ ಬೇಡಿಕೆಗಳಾಗಿವೆ.

ಹಲವು ಬೇಡಿಕೆಗಳನ್ನು ಮುಂದಿಟ್ಟುಕೊಂಡು ಸಾವಿರಾರು ಅಂಗನವಾಡಿ, ಆಶಾ ಕಾರ್ಯಕರ್ತೆಯರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ಮಂಗಳವಾರ ಬೆಳಗ್ಗೆ 11 ಗಂಟೆಗೆ ಆಶಾ ಕಾರ್ಯಕರ್ತೆಯರ ಪ್ರತಿಭಟನೆ ಆರಂಭವಾಗಿತ್ತು.

# ಸರ್ಕಾರದ ತಯಾರಿ

ಕೆಆರ್ ಎಸ್ ಅಣೆಕಟ್ಟೆಗೆ ಹಾನಿಯಾಗಬಹುದು ಎಂಬ ಕಾರಣದಿಂದ ಬೇಬಿ ಬೆಟ್ಟದಲ್ಲಿ ಗಣಿಗಾರಿಕೆ ನಿಷೇಧಿಸಲಾಗಿತ್ತು. ಈ ಹಿಂದಿನ ಬಿಜೆಪಿ ಸರ್ಕಾರ ಗಣಿಗಾರಿಕೆ ನಿಷೇಧಿಸಿ ಆದೇಶ ಹೊರಡಿಸಿತ್ತು. ಡ್ಯಾಂ ಸುತ್ತಮುತ್ತ 20 ಕಿಮೀ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಿಷೇಧಿಸಿ ಇತ್ತೀಚೆಗಷ್ಟೆ ಹೈಕೋರ್ಟ್ ಸಹ ಆದೇಶ ನೀಡಿತ್ತು. ಕೆಆರ್ ಎಸ್ ಅಣೆಕಟ್ಟೆಯ ಸುತ್ತಮುತ್ತ ಗಣಿಗಾರಿಕೆಗೆ ನಿರ್ಬಂಧ ಹೇರಿ ಕರ್ನಾಟಕ ಹೈಕೋರ್ಟ್ ಜನವರಿ 8ರಂದು ಆದೇಶ ನೀಡಿತ್ತು. ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಿ ವರಾಳೆ, ನ್ಯಾಯಮೂರ್ತಿ ಕೃಷ್ಣ ದೀಕ್ಷಿತ್ ಅವರಿದ್ದ ಪೀಠ ಆದೇಶ ನೀಡಿತ್ತು. ಈಗ ಕಾಂಗ್ರೆಸ್ ಸರ್ಕಾರದಿಂದ ಮತ್ತೆ ಟ್ರಯಲ್ ಬ್ಲಾಸ್ಟಿಂಗ್ ಗ್ರೀನ್ ಸಿಗ್ನಲ್ ನೀಡಲಾಗಿದೆ.

ಮುಂದಿನ ತಿಂಗಳು ತಜ್ಞರ ತಂಡದಿಂದ ಬೇಬಿ ಬೆಟ್ಟ ಹಾಗೂ ಸುತ್ತಮುತ್ತ ಟ್ರಯಲ್ ಬ್ಲಾಸ್ಟ್ ನಡೆಯಲಿದೆ. ಟ್ರಯಲ್ ಬ್ಲಾಸ್ಟ್ ನಂತರ ಸಿದ್ದಪಡಿಸುವ ವರದಿ ಆಧರಿಸಿ ಗಣಿಗಾರಿಕೆಗೆ ಅವಕಾಶ ನೀಡಲು ಸರ್ಕಾರ ಚಿಂತನೆ ನಡೆಸಿದೆ ಎನ್ನಲಾಗಿದೆ. ಟ್ರಯಲ್ ಬ್ಲಾಸ್ಟ್ ಬಗ್ಗೆ ಸ್ವತಃ ಶಾಸಕ ದರ್ಶನ್ ಪುಟ್ಟಣ್ಣಯ್ಯ ಮಾಹಿತಿ ನೀಡಿದ್ದಾರೆ.

ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಟ್ರಯಲ್ ಬ್ಲಾಸ್ಟಿಂಗ್ ಪರ ವಹಿಸಿರುವುದು ಅವರು ಗಣಿ ಮಾಲೀಕರ ಪ್ರಭಾವಕ್ಕೆ ಮಣಿದರೇ ಎಂಬ ಪ್ರಶ್ನೆ ಹುಟ್ಟುಹಾಕಿದೆ. ಬೇಬಿ ಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಲು ಮೇಲುಕೋಟೆ ಶಾಸಕ ದರ್ಶನ್ ಪೂರ್ಣ ಬೆಂಬಲ ನೀಡಿದ್ದಾರೆ. ಇದಕ್ಕೆ ರಾಜ್ಯ ರೈತಸಂಘ ಅಸಮಾಧಾನ ವ್ಯಕ್ತಪಡಿಸಿದೆ. ಟ್ರಯಲ್ ಬ್ಲಾಸ್ಟಿಂಗ್ ಗೆ ರೈತ ಸಂಘದ ವಿರೋಧ ಇದೆ. ಬಿಜೆಪಿ ಸರ್ಕಾರದ ಅವಧಿಯಲ್ಲೂ ಟ್ರಯಲ್ ಬ್ಲಾಸ್ಟ್ ಗೆ ನಿರ್ಧರಿಸಲಾಗಿತ್ತು. ಆಗ ರೈತ ಸಂಘದಿಂದ ಗೋಬ್ಯಾಕ್ ಚಳುವಳಿ ಮೂಲಕ ಟ್ರಯಲ್ ಬ್ಲಾಸ್ಟ್ ತಡೆಯುವಂತೆ ಮಾಡಲಾಗಿತ್ತು. ಸರ್ಕಾರ ಬದಲಾದರೂ ನಮ್ಮ ನಿಲುವಿನಲ್ಲಿ ಬದಲಾವಣೆ ಇಲ್ಲ ಎಂದು ರೈತ ಸಂಘ ಹೇಳಿದೆ.

ಶಾಸಕ ದರ್ಶನ್ ಪುಟ್ಟಣ್ಣಯ್ಯಗೂ ರೈತಸಂಘಕ್ಕೂ ಸಂಬಂಧ ಇಲ್ಲ, ಯಾವುದೇ ಕಾರಣಕ್ಕೂ ಟ್ರಯಲ್ ಬ್ಲಾಸ್ಟ್ ನಡೆಸಲು ಬಿಡುವುದಿಲ್ಲ ಎಂದು ರೈತಸಂಘದ ಜಿಲ್ಲಾಧ್ಯಕ್ಷ ಕೆಂಪೂಗೌಡ ಹೇಳಿದ್ದಾರೆ.

# ನಿವೃತ್ತ ಶಿಕ್ಷಕ ಹತ್ಯೆ !

ತಕ್ಷಣ ಅಲರ್ಟ್ ಆದ ಚೇತನ್ ತಮ್ಮ ಸಿಬ್ಬಂದಿ ಜೊತೆ ಶವ ಪತ್ತೆಯಾದ ಸ್ಥಳಕ್ಕೆ ದೌಡಾಯಿಸಿದ್ದಾರೆ. ಶವ ನೋಡುತ್ತಿದ್ದಂತೆ ಇದೊಂದು ಕೊಲೆ ಪ್ರಕರಣ ಅನ್ನೋದು ಚೇತನ್ ಅವರಿಗೆ ಗೊತ್ತಾಗಿದೆ. ಸುಮಾರು 60 ವರ್ಷದ ವೃದ್ಧನನ್ನು ಯಾರೋ ಕೊಲೆ ಮಾಡಿ ತಂದು ಇಲ್ಲಿ ಹಾಕಿದ್ದರು. ಮೈ ಮೇಲೆ ರಕ್ತದ ಕಲೆಗಳಿದ್ದವು. ತಕ್ಷಣ ಚೇತನ್ ತಮ್ಮ ಮೇಲಧಿಕಾರಿಗಳಿಗೆ ವಿಚಾರ ತಿಳಿಸಿ ಶವದ ಗುರುತು ಪತ್ತೆಗೆ ಮುಂದಾಗಿದ್ದಾರೆ.

ತನಿಖೆ ಆರಂಭಿಸಿದ ಚೇತನ್ ಅವರು ಅತ್ಯಂತ ಸಮರ್ಪಕವಾಗಿ ಇದರ ಜಾಡು ಹಿಡಿದು ಸಾಗಿದ ಕಾರಣ ಮೃತರ ಗುರುತು ಸುಲಭವಾಗಿ ಪತ್ತೆಯಾಗಿದೆ. ಅಲ್ಲಿ ಸಾವನ್ನಪ್ಪಿದ್ದವರು ನಾಗರಾಜ್. ನಾಗರಾಜ್ ನಿವೃತ್ತ ಶಿಕ್ಷಕರಾಗಿದ್ದರು. ವಯಸ್ಸು 70. ಮೂಲತಃ ಚಾಮರಾಜನಗರ ತಾಲ್ಲೂಕು ದೇವಲಪುರದವರು. ಹಾಲಿ ನಂಜನಗೂಡಿನಲ್ಲಿ ಪತ್ನಿ, ಮಗ ಮತ್ತು ಮಗಳ ಜೊತೆ ವಾಸವಾಗಿದ್ದರು.

ಪತ್ನಿ ಗೃಹಿಣಿ ಮಗ ಹಾಗೂ ಮಗಳು ಸಾಫ್ಟ್‌ವೇರ್ ಇಂಜಿನಿಯರ್ ಆಗಿದ್ದರು. ನಾಗರಾಜ್ ತುಂಬಾ ಶಾಂತ ಸ್ವಭಾವದವರು. ಯಾರ ಜೊತೆಯೂ ಜಗಳ ಮಾಡಿಕೊಂಡವರಲ್ಲ, ತಾವಾಯ್ತು ತಮ್ಮ ಕುಟುಂಬವಾಯ್ತು ಅಂತಾ ಇದ್ದವರು. ಆಸ್ತಿ ವಿಚಾರವಾಗಲಿ ಅಥವಾ ಹಣಕಾಸು ವಿಚಾರವಾಗಲಿ ನಾಗರಾಜು ಅವರಿಗೆ ಯಾವುದೇ ವ್ಯಾಜ್ಯಗಳಿರಲಿಲ್ಲ.

ಹೀಗಾಗಿ ಅವರ ಕೊಲೆ ಯಾರು ಮಾಡಿರಬಹುದೆಂಬುದನ್ನು ಪತ್ತೆ ಹಚ್ಚುವುದು ಪೊಲೀಸರಿಗೆ ಸವಾಲಾಗಿತ್ತು. ಈ ಘಟನೆ ನಡೆದಿದ್ದು ಜುಲೈ 2023ರಲ್ಲಿ, ಸುಮಾರು 6 ತಿಂಗಳ ಸತತ ಪರಿಶ್ರಮದ ನಂತರ ನಾಗರಾಜು ಅವರನ್ನು ಕೊಲೆ ಮಾಡಿದ ಆರೋಪಿಯನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾದರು. ಆರೋಪಿ ಏಕೆ ಹೇಗೆ ಕೊಲೆ ಮಾಡಿದ ಅನ್ನೋ ರೋಚಕ ಕಥೆಯನ್ನು ಹೇಳುವ ಮುನ್ನ ಪೊಲೀಸರಿಗೆ ಇದು ಏಕೆ ಸವಾಲಿನದ್ದಾಗಿತ್ತು ಅನ್ನೋದನ್ನು ನೀವು ತಿಳಿಯಬೇಕು.

ನಾಗರಾಜ ಅವರನ್ನು ಕೊಲೆ ಮಾಡಿದವನು ಒಬ್ಬ ಪೊಲೀಸ್ ಆಗಿದ್ದ! ಅಚ್ಚರಿಯಾದ್ರೂ ಇದು ಸತ್ಯ. ಜೊತೆಗೆ ಆತ ಕೊಲೆಯಾದ ನಾಗರಾಜು ಅವರ ನಿಕಟ ಸಂಬಂಧಿಯಾಗಿದ್ದ. ಕೊಲೆಗೂ ಮುನ್ನ ಕೊಲೆಯಾದ ನಂತರವೂ ಆತ ನಾಗರಾಜು ಕುಟುಂಬದ ಜೊತೆಗಿದ್ದ. ಕೊಲೆಯಾದ ನಂತರ ಆತನೇ ನಿಂತು ಪೊಲೀಸ್ ಠಾಣೆಗೆ ದೂರು ಕೊಡಿಸಿದ್ದ, ಪೊಲೀಸರ ಪ್ರತಿ ತನಿಖೆಗೂ ಸಾಥ್ ನೀಡಿದ್ದ.

6 ತಿಂಗಳು ಕಾಲ ಈತ ಪೊಲೀಸರ ಜೊತೆಯಲ್ಲಿ ಓಡಾಡಿಕೊಂಡಿದ್ದರೂ ಸಹ ಈತನೇ ಕೊಲೆಗಾರ ಅಂತಾ ಪೊಲೀಸರಿಗೆ ಸಣ್ಣ ಅನುಮಾನ ಕೂಡ ಬಂದಿರಲಿಲ್ಲ, ಇದಕ್ಕೆ ಕಾರಣ ಕೊಲೆ, ಕೊಲೆ ಮಾಡಿದ ನಂತರ ಶವವನ್ನು ಸಾಗಿಸುವುದು, ನಂತರದ ಎಲ್ಲಾ ಹಂತಗಳಲ್ಲೂ ತಪ್ಪಿಸಿಕೊಳ್ಳಲು ಪೊಲೀಸ್ ಶೈಲಿಯಲ್ಲೇ ಎಲ್ಲವನ್ನೂ ಪ್ಲ್ಯಾನ್ ಮಾಡಿದ್ದ. ಕೊಲೆ ಮಾಡಿದ ಸ್ಥಳದಲ್ಲಿ ಎಲ್ಲೂ ಮೊಬೈಲ್ ಬಳಕೆ ಮಾಡಿರಲಿಲ್ಲ. ಈ ಸಂದರ್ಭದಲ್ಲಿ ಎಲ್ಲಾ ಕಡೆಗೂ ಇಂಟರನೆಟ್ ಕಾಲ್ ಮಾಡಿದ್ದ. ಕೊಲೆ ಮಾಡಿದ ಸ್ಥಳದಲ್ಲಿ ಯಾವುದೇ ಕುರುಹು ಸಹ ಬಿಟ್ಟಿರಲಿಲ್ಲ, ಆದರೂ ಆತ ಚಾಪೆ ಕೆಳಗೆ ನುಸುಳಿದ್ರೆ, ತನಿಖೆ ಮಾಡಿದ ಪೊಲೀಸರು ರಂಗೋಲಿ ಕೆಳಗೆ ನುಗ್ಗಿ ಆರೋಪಿಯನ್ನು ಬಂಧಿಸಿದ್ದಾರೆ.

ನಿವೃತ್ತ ಶಿಕ್ಷಕ ನಾಗರಾಜ್ ಅವರನ್ನು ಕೊಲೆ ಮಾಡಿದ್ದು ನಾಗರಾಜ್ ಅವರ ಪತ್ನಿಯ ಅಕ್ಕನ ಮಗಳ ಗಂಡ ಮಹೇಶ್. ಮಹೇಶ್ ಡಿಎಆರ್ ಪೊಲೀಸ್. ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಸಿಬ್ಬಂದಿ. ಮಹೇಶ್ ಮೂಲತಃ ಗುಂಡ್ಲುಪೇಟೆ ತಾಲ್ಲೂಕಿನ ಹಸುಗುಲಿ ಗ್ರಾಮದವನು. ಈತ 8 ವರ್ಷದ ಹಿಂದೆ ಕೊಲೆಯಾದ ನಾಗರಾಜ್ ಅವರ ಪತ್ನಿಯ ಸಹೋದರಿ ಮಗಳನ್ನು ಮದುವೆಯಾಗಿದ್ದ.

ಮದುವೆಯ ದಿನವೇ ಮಹೇಶ್‌ಗೆ ಕೊಲೆಯಾದ ನಾಗರಾಜ್ ಅವರ ಸಾಫ್ಟ್‌ವೇರ್ ಇಂಜಿನಿಯರ್ ಮಗಳ ಮೇಲೆ ಕ್ರಷ್ ಆಗಿದೆ. ಅಂದಿನಿಂದ ಆತ ನಾಗರಾಜ್ ಅವರ ಮಗಳ ಹಿಂದೆ ಬಿದ್ದಿದ್ದ. ಮದುವೆಯಾಗಿ ಮಗುವಾದರೂ ಮಹೇಶನ ಕ್ರಷ್ ಕಡಿಮೆಯಾಗಿರಲಿಲ್ಲ, ಮಹೇಶ್ ಈ ವಿಚಾರದಲ್ಲಿ ಎಷ್ಟರಮಟ್ಟಿಗೆ ಕ್ರಷ್ ಆಗಿದ್ದ ಅಂದ್ರೆ, ಹೇಗಾದರೂ ಮಾಡಿ ಆಕೆಯನ್ನು ತನ್ನವಳನ್ನಾಗಿ ಮಾಡಿಕೊಳ್ಳಬೇಕೆಂದು ವಶೀಕರಣ ಪೂಜೆ ಸಹಾ ಮಾಡಿಸಿದ್ದ!

ಒಂದು ಕಡೆಯಲ್ಲ ಹಲವು ಕಡೆ ವಶೀಕರಣ ಪೂಜೆ ಮಾಡಿಸಿದ್ದ. ಅದು ಇಲ್ಲಿಂದ ಸಾವಿರಾರು ಕಿಲೋ ಮೀಟರ್ ದೂರದ ಅಸ್ಸಾಂ ಗುವಾಹಟಿಯ ಕಾಮಾಕ್ಯ ದೇಗುಲದಲ್ಲಿ ಹಾಗೂ ಶಿರಾದ ಸಾಗದಾಟು ಗ್ರಾಮದ ಭೂತಪ್ಪ ದೇಗುಲದಲ್ಲಿ ವಶೀಕರಣ ಪೂಜೆ ಮಾಡಿಸಿದ್ದ. ಒಟ್ಟು 108 ದಿನ ಪೂಜೆ ಮಾಡಿಸಿದ್ರೆ, ಆಕೆ ಶಾಶ್ವತವಾಗಿ ತನ್ನವಳಾಗುತ್ತಾಳೆ ಅನ್ನೋದು ಮಹೇಶ್ ನಂಬಿಕೆಯಾಗಿತ್ತು.

ಅದಕ್ಕಾಗಿ ಕುದುರೆ ರಕ್ತವನ್ನೆಲ್ಲಾ ತರಿಸಿದ್ದಾನೆ. ಆದ್ರೆ, ಪೂಜೆ ಮುಗಿಯುತ್ತಾ ಬಂದರೂ ಆತ ಅಂದುಕೊಂಡಂತೆ ಏನೂ ಆಗಿರಲಿಲ್ಲ, ಮತ್ತೊಂದು ಕಡೆ ಈತನ ಪೂಜೆ ಮುಗಿಯುವ ಮುನ್ನವೇ ಸಾಫ್ಟ್‌ವೇರ್ ಇಂಜಿನಿಯರ್ ಆಗಿದ್ದ ಆಕೆ ಜರ್ಮನಿಗೆ ಹೋಗಲು ಸಿದ್ದವಾಗಿದ್ದಳು. ಈ ವಿಚಾರ ಮಹೇಶನ ತಲೆ ಕೆಡುವಂತೆ ಮಾಡಿದೆ. ಹೇಗಾದರೂ ಮಾಡಿ ಆಕೆಯನ್ನು ಜರ್ಮನಿಗೆ ಹೋಗದಂತೆ ತಡೆಯಬೇಕೆಂದು ಯೋಚಿಸತೊಡಗಿದ್ದಾನೆ.

**ಮಗಳ ವಿದೇಶ ಪ್ರವಾಸ ನಿಲ್ಲಿಸಲು ಅಪ್ಪನ ಕೊಲೆ! :** ಹೇಳಿ ಕೇಳಿ ಮಹೇಶ್ ಪೊಲೀಸ್. ಹೀಗಾಗಿ ಆತ ತನ್ನದೇ ಧಾಟಿಯಲ್ಲಿ ಪ್ಲ್ಯಾನ್ ಮಾಡಿದ್ದಾನೆ. ಮಗಳು ಜರ್ಮನಿಗೆ ಹೋಗುವುದನ್ನು ತಡೆಯುವುದು ಅವರ ತಂದೆಯ ಸಾವಿನಿಂದ ಮಾತ್ರವೇ ಸಾಧ್ಯ ಅಂತಾ ಅರ್ಥ ಮಾಡಿಕೊಂಡ ಮಹೇಶ್ ಆಕೆಗಾಗಿ ಅವರ ಅಪ್ಪನನ್ನೇ ಮುಗಿಸಲು ಸಿದ್ದವಾಗಿದ್ದಾನೆ. ಹೀಗೆ ನಿರ್ಧರಿಸಿದವನೇ ನಾಗರಾಜ್ ಅವರ ಚಲನವಲನದ ಮೇಲೆ ಕಣ್ಣಿಟ್ಟಿದ್ದಾನೆ.

ಅದೊಂದು ದಿನ ನಾಗರಾಜ್ ಒಬ್ಬರೇ ಇರುವಾಗ ತನ್ನ ಸ್ನೇಹಿತ ಇಸ್ಮಾಯಿಲ್ ಜೊತೆ ನಾಗರಾಜ್ ಅವರನ್ನು ಕಾರಿನಲ್ಲಿ ಕರೆದುಕೊಂಡು ಹೋಗಿದ್ದಾನೆ. ಕಾರಿನಲ್ಲೇ ಕುತ್ತಿಗೆಗೆ ಹಗ್ಗ ಬಿಗಿದು ಕುತ್ತಿಗೆ ಕೊಯ್ದು ನಾಗರಾಜ್ ಕೊಲೆ ಮಾಡಿ ವರುಣ ಪೊಲೀಸ್ ಠಾಣಾ ವ್ಯಾಪ್ತಿಯ ದೇವಲಾಪುರ ಬಳಿ ಮೃತದೇಹ ಬಿಸಾಕಿ ಹೋಗಿದ್ದಾನೆ. ಇತ್ತ ಕೊಲೆ ಮಾಡಿ ಮನೆಗೆ ಹೋಗಿ ಆರಾಮಾಗಿದ್ದಾನೆ. ಅಷ್ಟೇ ಅಲ್ಲ ತಾನೇ ಮುಂದೆ ನಿಂತು ಪೊಲೀಸರಿಗೂ ದೂರು ಕೊಡಿಸಿದ್ದಾನೆ. ಪೊಲೀಸರ ಜೊತೆ ತನಿಖೆಯ ಭಾಗವಾಗಿದ್ದಾನೆ.

**ಕುದುರೆ ರಕ್ತ ವಾಮಾಚಾರದ ಫೋಟೋದಿಂದ ಸಿಕ್ಕಿ ಬಿದ್ದ ಪಾಪಿ:** ಪ್ರಕರಣವನ್ನು ಗಂಭೀರವಾಗಿ ಸ್ವೀಕರಿಸಿದ ಮೈಸೂರು ಜಿಲ್ಲಾ ಎಸ್ ಪಿ ಸೀಮಾ ಲಾಟ್ಕರ್ ಒಟ್ಟು ನಾಲ್ಕು ತಂಡವನ್ನು ರಚಿಸಿದರು. ವರುಣ ಪೊಲೀಸ್ ಠಾಣೆಯ ಸಬ್ ಇನ್ಸಪೆಕ್ಟರ್ ಚೇತನ್, ಸೆನ್ ಇನ್ಸಪೆಕ್ಟರ್ ಪುರುಷೋತ್ತಮ, ಇನ್ಸಪೆಕ್ಟರ್‌ಗಳಾದ ಸ್ವರ್ಣ ಶಿವನಂಜ ಶೆಟ್ಟಿ ಹಾಗೂ ಟೆಕ್ನಿಕಲ್ ವಿಭಾಗದ ಎಎಸ್.ಐ ವಸಂತಕುಮಾರ್ ಒಳಗೊಂಡ ರಚನೆಯಾಗುತ್ತದೆ.

ತನಿಖೆ ಆರಂಭಿಸಿದ ವೇಳೆ ಮಹೇಶ್ ಸಹಾ ತಾನು ಸಹಾಯ ಮಾಡುವುದಾಗಿ ಹೇಳಿ ತಂಡವನ್ನು ಸೇರಿಕೊಳ್ಳುತ್ತಾನೆ. ಈ ಮೂಲಕ ಪೊಲೀಸರ ತನಿಖೆಯ ಪ್ರತಿ ಹಂತದ ಮಾಹಿತಿ ಕಲೆ ಹಾಕುತ್ತಾನೆ. ಪೊಲೀಸರ ಸಾಕ್ಷ್ಯವನ್ನು ಒಂದೊಂದೆ ನಾಶ ಮಾಡುತ್ತಿರುತ್ತಾನೆ. ಎಲ್ಲಾ ಆಯಾಮದಲ್ಲೂ ತನಿಖೆ ನಡೆಸಿದ ಪೊಲೀಸರು ಕೊನೆಗೆ ಮಹೇಶ್ ಹೆಗಲ ಮೇಲೆ ಕೈ ಹಾಕುತ್ತಾರೆ. ಆದರೆ ಮಹೇಶ್ ಸಾರಾಸಗಟಾಗಿ ತನ್ನ ಮೇಲಿನ ಆರೋಪವನ್ನು ನಿರಾಕರಿಸುತ್ತಾನೆ. ಯಾವಾಗ ಪೊಲೀಸರು ತಮ್ಮ ಭಾಷೆಯಲ್ಲಿ ವಿಚಾರಿಸಿದರೋ ತಪ್ಪು ಒಪ್ಪಿಕೊಂಡಿದ್ದಾನೆ. ಎಲ್ಲಾ ವಿಚಾರಗಳನ್ನು ಬಾಯಿ ಬಿಟ್ಟಿದ್ದಾನೆ.

# ಬಿಡುಗಡೆ

ಫೆಬ್ರವರಿ 27ರಂದು ರಾಜ್ಯಸಭಾ ಚುನಾವಣೆ ನಡೆಯಲಿದೆ. ಫೆಬ್ರವರಿ 15 ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕವಾಗಿದೆ.

ಫೆ.27ರಂದು ಬೆಳಗ್ಗೆ 9ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದ್ದು, ಸಂಜೆ 5 ಗಂಟೆಗೆ ಮತ ಎಣಿಕೆ ಆರಂಭವಾಗಲಿದೆ. 230 ಸದಸ್ಯ ಬಲದ ಮಧ್ಯಪ್ರದೇಶ ವಿಧಾನಸಭೆಯಲ್ಲಿ ಪಕ್ಷದ ಸ್ಥಾನಮಾನದ ಪ್ರಕಾರ ಕಾಂಗ್ರೆಸ್ ಒಬ್ಬ ಸದಸ್ಯರನ್ನು ರಾಜ್ಯಸಭೆಗೆ ಕಳುಹಿಸುವ ಸ್ಥಿತಿಯಲ್ಲಿದೆ. ವಿಧಾನಸಭೆಯಲ್ಲಿ ಕಾಂಗ್ರೆಸ್ ಶಾಸಕರ ಸಂಖ್ಯೆ 66 ಆಗಿದೆ. 2019 ರಲ್ಲಿ ಬಿಜೆಡಿ ಸಹಾಯದಿಂದ ವೈಷ್ಣವ್ ರಾಜ್ಯಸಭೆಗೆ ಆಯ್ಕೆಯಾಗಿದ್ದರು. ವೈಷ್ಣವ್ ರಾಜ್ಯಸಭೆಗೆ ಮರು ಆಯ್ಕೆಯಾಗುತ್ತಾರೆ ಮತ್ತು ಬಿಜೆಡಿ ಬೆಂಬಲಿಸಬಹುದು ಎಂದು ಅಂದಾಜಿಸಲಾಗಿದೆ.

ಖಾಲಿ ಇರುವ ಮೂರು ರಾಜ್ಯಸಭಾ ಸ್ಥಾನಗಳನ್ನು ಗೆಲ್ಲಲು ಬಿಜೆಪಿಗೆ ಅಗತ್ಯವಿರುವ ಬಲವಿದೆ ಆದರೆ ಒಡಿಶಾ ವಿಧಾನಸಭೆಯಲ್ಲಿ ಬಿಜೆಪಿ ಕೇವಲ 22 ಶಾಸಕರನ್ನು ಹೊಂದಿರುವುದರಿಂದ ಬಿಜೆಪಿಗೆ ಬಿಜೆಡಿಯ ಬೆಂಬಲದ ಅಗತ್ಯವಿದೆ. ಒಡಿಶಾದಲ್ಲಿ ಒಂದು ರಾಜ್ಯಸಭಾ ಸ್ಥಾನವನ್ನು ಗೆಲ್ಲಲು ಅಭ್ಯರ್ಥಿಗೆ ಕನಿಷ್ಠ 37 ಮತಗಳು ಬೇಕಾಗುತ್ತವೆ. ಅಶ್ವಿನಿ ವೈಷ್ಣವ್ ರಾಜಸ್ಥಾನದವರಾಗಿದ್ದಾರೆ ಆದರೆ 2010 ರಲ್ಲಿ ತಮ್ಮ ಖಚಿತ ಹುದ್ದೆಯನ್ನು ತ್ಯಜಿಸುವ ಮೊದಲು ಖಚಿತ ಅಧಿಕಾರಿಯಾಗಿ ಒಡಿಶಾದಲ್ಲಿ ಸೇವೆ ಸಲ್ಲಿಸಿದರು.

ಒಡಿಶಾದಿಂದ ರಾಜ್ಯಸಭಾ ಸದಸ್ಯರಾಗಿರುವ ವೈಷ್ಣವ್ ಅವರ ಅಧಿಕಾರಾವಧಿ ಈ ವರ್ಷದ ಏಪ್ರಿಲ್‌ನಲ್ಲಿ ಕೊನೆಗೊಳ್ಳಲಿದೆ. ಅವರು ಬಿಜೆಪಿಗೆ ಸೇರಿದವರಾಗಿದ್ದರೂ, ವೈಷ್ಣವ್ ಅವರು 2019 ರಲ್ಲಿ ಬಿಜೆಡಿ ಬೆಂಬಲದ ಮೇಲೆ ಒಡಿಶಾದಿಂದ ಸಂಸತ್ತಿನ ಮೇಲ್ಮನೆಗೆ ಆಯ್ಕೆಯಾದರು.

ಬಿಜೆಡಿ ಅಧ್ಯಕ್ಷ ಮತ್ತು ಒಡಿಶಾ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ಅವರು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಅವರ ಮನವಿಯ ನಂತರ ವೈಷ್ಣವ್‌ಗೆ ತಮ್ಮ ಪಕ್ಷದ ಬೆಂಬಲವನ್ನು ಘೋಷಿಸಿದರು. ಎರಡನೇ ಪಟ್ಟಿಯಲ್ಲಿ ಬಿಜೆಪಿ ಮಧ್ಯಪ್ರದೇಶ ಮತ್ತು ಒಡಿಶಾ ಅಭ್ಯರ್ಥಿಗಳನ್ನು ಘೋಷಿಸಿದೆ.

ಈ ಹಿಂದೆ ಬಿಜೆಪಿ ರಾಜ್ಯಸಭಾ ಚುನಾವಣೆಗೆ 14 ಹೆಸರುಗಳನ್ನು ಪ್ರಕಟಿಸಿತ್ತು.

ಒಡಿಶಾ: ಅಶ್ವಿನಿ ವೈಷ್ಣವ್ ಬಿಹಾರ: ಡಾ ಧರ್ಮಶೀಲಾ ಗುಪ್ತಾ, ಡಾ ಭೀಮ್ ಸಿಂಗ್ ಛತ್ತೀಸ್‌ಗಢ: ರಾಜಾ ದೇವೇಂದ್ರ ಪ್ರತಾಪ್ ಸಿಂಗ್ ಹರಿಯಾಣ: ಸುಭಾಷ್ ಬರಾಲಾ

ಕರ್ನಾಟಕ: ನಾರಾಯಣ ಕೃಷ್ಣಾಸ ಭಾಂಡಗೆ ಉತ್ತರ ಪ್ರದೇಶ: ಸುಧಾಂಶು ತ್ರಿವೇದಿ, ಆರ್‌ಪಿಎನ್ ಸಿಂಗ್, ಚೌಧರಿ ತೇಜ್‌ವೀರ್ ಸಿಂಗ್, ಸಾಧನಾ ಸಿಂಗ್, ಅಮರ್‌ಪಾಲ್ ಮೌರ್ಯ, ಸಂಗೀತಾ ಬಲ್ವಂತ್, ನವೀನ್ ಜೈನ್ ಉತ್ತರಾಖಂಡ: ಮಹೇಂದ್ರ ಭಟ್ ಪಶ್ಚಿಮ ಬಂಗಾಳ: ಸಾಮಿಕ್ ಭಟ್ಟಾಚಾರ್ಯ

# ಕಹಿ ನೆನಪು

ಢಿಕ್ಕಿ ಹೊಡೆದ ಪರಿಣಾಮ ಜಮ್ಮು ಮತ್ತು ಕಾಶ್ಮೀರದಲ್ಲಿ 40 ಸಿಆರ್‌ಪಿಎಫ್ ಯೋಧರು ಪ್ರಯಾಣಿಸುತ್ತಿದ್ದ ಎರಡು ಬಸ್ ಗಳು ಹೊತ್ತು ಉರಿದಿತ್ತು. ಈ ದಾಳಿಯಿಂದಾಗಿ 40 ಯೋಧರು ಕೊನೆಯುಸಿರೆಳೆದು ಕೊಂಡಿದ್ದು, ಕೆಲ ಸೈನಿಕರಿಗೆ ಗಂಭೀರ ಗಾಯಗಳಾಗಿತ್ತು. ಪುಲ್ವಾಮ ದಾಳಿಯ ಬಳಿಕ ಜೈಶ್-ಇ-ಮೊಹಮ್ಮದ್ ಸಂಘಟನೆ ವೀಡಿಯೋವೊಂದನ್ನು ಬಿಡುಗಡೆ ಮಾಡಿತ್ತು. ಈ ದಾಳಿಯ ಪರಿಣಾಮವಾಗಿ ಭಾರತಕ್ಕೆ ಪಾಕ್ ಗೆ ಪ್ರತ್ಯುತ್ತರವನ್ನು ನೀಡಿತ್ತು. ಹನ್ನೆರಡು ದಿನಗಳ ಬಳಿಕ ಭಾರತೀಯ ವಾಯುಪಡೆಯ ಜೆಟ್‌ಗಳು ಪಾಕಿಸ್ತಾನದ ಖೈಬರ್ ಪಖ್ತುನ್ ಖ್ವಾದಲ್ಲಿರುವ ಬಾಲಾಕೋಟ್‌ನಲ್ಲಿರುವ ಜೆಇಎಂ ಶಿಬಿರದ ಮೇಲೆ ಬಾಂಬ್ ದಾಳಿ ನಡೆಸಿತು. ಭಾರತವು ನಡೆಸಿದ ಈ ದಾಳಿಯಲ್ಲಿ 250 ಪಾಕ್ ಉಗ್ರರು ಬಲಿಪಡೆದು ಪ್ರತ್ಯುತ್ತರವನ್ನು ನೀಡಿತ್ತು.

ಟ್ವೀಟ್ ನಲ್ಲಿ ಹುತಾತ್ಮರಿಗೆ ಶ್ರದ್ಧಾಂಜಲಿ ಸಲ್ಲಿಸಿದ ಪ್ರಧಾನಿ ಮೋದಿ

ಫೆಬ್ರವರಿ 14, 2024 ರ, ಈ ಕರಾಳದಿನದಂದು ಪಿಎಂ ನರೇಂದ್ರ, ಮೋದಿ ಅವರು ಟ್ವೀಟ್ ಮಾಡಿ ಹುತಾತ್ಮರಿಗೆ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ತಮ್ಮ ಟ್ವೀಟ್ ನಲ್ಲಿ ''ಪುಲ್ವಾಮಾದಲ್ಲಿ ಹುತಾತ್ಮರಾದ ವೀರ ವೀರರಿಗೆ ನಾನು ಗೌರವ ಸಲ್ಲಿಸುತ್ತೇನೆ. ನಮ್ಮ ದೇಶಕ್ಕಾಗಿ ಅವರ ಸೇವೆ ಮತ್ತು ತ್ಯಾಗ ಯಾವಾಗಲೂ ನೆನಪಿಸಿಕೊಳ್ಳಲಾಗುತ್ತದೆ.'' ಎಂದು ಬರೆದುಕೊಂಡಿದ್ದಾರೆ.

**ಪ್ರಾಣ ತ್ಯಾಗ ಮಾಡಿದ ವೀರ ಯೋಧರಿಗೆ ಸಂದೇಶಗಳು**

- ಪುಲ್ವಾಮ ದಾಳಿಗೆ ಹುತಾತ್ಮರಾದ ವೀರ ಯೋಧರಿಗೆ ಭಾವಪೂರ್ಣ ಶ್ರದ್ಧಾಂಜಲಿ.
- ಈ ದಿನವನ್ನ ನಾವು ಯಾವತ್ತೂ ಮರೆಯುವುದಿಲ್ಲ, ನಮ್ಮ ಸೈನಿಕರ ತ್ಯಾಗ ಬಲಿದಾನ ಎಲ್ಲದಕ್ಕಿಂತ ದೊಡ್ಡದು. ಪುಲ್ವಾಮಾ ದಾಳಿಯಲ್ಲಿ ವೀರಮರಣ ಹೊಂದಿದ ನಮ್ಮ ವೀರ ಯೋಧರಿಗೆ ಕೋಟಿ ಕೋಟಿ ನಮನಗಳು.
- ಪುಲ್ವಾಮಾದಲ್ಲಿ ದೇಶಕ್ಕಾಗಿ ಹುತಾತ್ಮರಾದ ಕರ್ತವ್ಯ ನಿರತ ಕೇಂದ್ರೀಯ ಮೀಸಲು ಪೊಲೀಸ್ ಪಡೆಯ 40 ಜನ ಹುತಾತ್ಮ ಯೋಧರಿಗೆ ಪ್ರಣಾಮಗಳು. ನಿಮ್ಮ ತ್ಯಾಗ, ಬಲಿದಾನಗಳನ್ನು ದೇಶ ಎಂದಿಗೂ ಮರೆಯುವುದಿಲ್ಲ.

# ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹ

**ಚನ್ನಪಟ್ಟಣ:** ಕಾವೇರಿ ಕುಡಿಯುವ ನೀರಿಗೂ ಅಭಾವ ಉಂಟಾಗುವ ಬಗ್ಗೆ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರು 4 ತಿಂಗಳ ಹಿಂದೆಯೇ ಎಚ್ಚರಿಕೆ ನೀಡಿ ಹೋರಾಟ ಆರಂಬಿಸಿದ್ದರು. ಇದೀಗ ಅವರ ಮುಂದಾಲೋಚನೆಯ ಭವಿಷ್ಯ ನಿಜವಾಗಿದೆ ಎಂದು ಕಕಜ ವೇದಿಕೆಯ ರಾಜ್ಯ ಉಪಾಧ್ಯಕ್ಷ ಬೆಂಕಿ ಶ್ರೀಧರ್ ಅಭಿಪ್ರಾಯಿಸಿದರು.



ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಮಂಗಳವಾರ ನಡೆದ 132 ನೇ ದಿನದ ಹೋರಾಟದಲ್ಲಿ ಭಾಗವಹಿಸಿ ಮಾತನಾಡಿದ ಅವರು ಕಾವೇರಿ ನದಿ ನೀರನ್ನು ತಮಿಳುನಾಡಿಗೆ ಬಿಡುವ ವಿಚಾರದಲ್ಲಿ ಸಂಕಷ್ಟ ಸೂತ್ರ ರಚಿಸಿ ಮಳೆ ಆಧಾರದಲ್ಲಿ ತಮಿಳುನಾಡಿಗೆ ನೀರು ಬಿಡುವಂತೆ ನಮ್ಮ ವೇದಿಕೆ ರಾಜ್ಯಾಧ್ಯಕ್ಷರು 4 ತಿಂಗಳ ಹಿಂದೆಯೇ ಹೋರಾಟ ಆರಂಭಿಸಿ ನಿರಂತರವಾಗಿ ಹೋರಾಟ ಮಾಡುತ್ತಾ ಜನತೆ ಮತ್ತು ಸರ್ಕಾರವನ್ನು ಎಚ್ಚರಿಸುವ ಕೆಲಸ ಮಾಡುತ್ತಾ ಬಂದಿದ್ದಾರೆ.

ಆದರೆ ಸರ್ಕಾರ ಎಚ್ಚರ ವಹಿಸದೆ ತಮಿಳುನಾಡಿಗೆ ನೀರನ್ನು ಹರಿಸುತ್ತಾ ಜಲಾಶಯದಲ್ಲಿ ನೀರು ಖಾಲಿಯಾಗುತ್ತಿದ್ದು ಇದೀಗ ಕುಡಿಯಲೂ ಸಹ ನೀರಿಲ್ಲ. ಜೊತೆಗೆ ನಮ್ಮ ಹೋರಾಟದ ಬಗ್ಗೆ ಪಟ್ಟಣದ ಜನತೆಯೂ ಸಹ ಕಿವಿಗೊಡದೆ ಏನೋ ಮಾಡುತ್ತಿದ್ದಾರೆ ಎಂದು ಹೋರಾಟ ನೋಡಿಯೂ ನೋಡದಂತೆ ಹೋಗಿದ್ದರು. ಆದರೆ ಇದೀಗ ನೀರಿನ ಅಭಾವದ ಬಗ್ಗೆ ಕಾವೇರಿ ನೀರು ಸರಬರಾಜು ಮಂಡಳಿ ಮತ್ತು ನಗರಸಭೆಯಿಂದ ಪಟ್ಟಣದಲ್ಲಿ ಆಟೋಗಳ ಮೂಲಕ 5 ದಿನಗಳಿಗೆ ಒಮ್ಮೆ ಕಾವೇರಿ ನೀರನ್ನು ಬಿಡುತ್ತೇವೆ ಎಂದು ಪ್ರಚಾರ ಮಾಡುತ್ತಿದ್ದರೆ. ಈ ನಿಟ್ಟಿನಲ್ಲಿ ಇಂದು ಜನರಿಗೆ ನಮ್ಮ ಹೋರಾಟದ ಕಾಳಜಿ ಅರ್ಥವಾಗುತ್ತಿದೆ. ಇಂದು ನೀರಿಲ್ಲವಂತೆ ನೀರು ಬಿಡುವುದಿಲ್ಲವಂತೆ ಎಂದು ಆತಂಕ ವ್ಯಕ್ತಪಡಿಸುತ್ತಿದ್ದಾರೆ. ರಮೇಶ್‌ಗೌಡರು ಯಾವುದೇ ಹೋರಾಟವನ್ನು ಮುಂದಾಲೋಚನೆ ಇಲ್ಲದೆ ರೂಪಿಸುವುದಿಲ್ಲ. ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಇಂತಹ ಪರಿಸ್ಥಿತಿ ನಿರ್ಮಾಣ ಆಗದಂತೆ ಮೇಕೆದಾಟು ಯೋಜನೆ ನಿರ್ಮಾಣ ಮಾಡಲು ಜನತೆ ಹೋರಾಟಕ್ಕೆ ಬೆಂಬಲ ನೀಡಬೇಕು ಎಂದು ಅಭಿಪ್ರಾಯಿಸಿದರು.

ನಿವೃತ್ತ ಪ್ರಾಂಶುಪಾಲರಾದ ನಿಂಗೇಗೌಡರು (ಎನ್‌ಜಿ) ಮಾತನಾಡಿ, ಕಕಜವೇದಿಕೆಯ ರಮೇಶ್‌ಗೌಡರು 131 ದಿನಗಳಿಂದ ಪ್ರತಿನಿತ್ಯ ಕಾವೇರಿ ನೀರನ್ನು ಉಳಿಸಿಕೊಳ್ಳುವ ಬಗ್ಗೆ ಸರ್ಕಾರಕ್ಕೆ ಮನವಿ ಮಾಡುತ್ತಾ ಬಂದಿದ್ದರು. ಈ ಬಗ್ಗೆ ಜನತೆ ಬೆಂಬಲ ನೀಡದೆ ತಮ್ಮ ಪಾಡಿಗೆ ತಾವು ಇದ್ದರು. ಆದರೆ ಇಂದು ಮನೆಗಳಿಗೆ ಕಾವೇರಿ ನೀರನ್ನು 5 ದಿನಕ್ಕೆ ಒಮ್ಮೆ ಬಿಡುವ ಬಗ್ಗೆ ನಗರಸಭೆ ಮತ್ತು ಕಾವೇರಿ ಜಲ ಮಂಡಳಿ ಪ್ರಚಾರ ಮಾಡಿದ್ದು ಜೊತೆಗೆ ಒಂದು ದಿನ ಬಿಡುವ ನೀರಿನಲ್ಲಿ ಇಷ್ಟೇ ನೀರನ್ನು ಬಿಡುತ್ತಾರೆ ಎಂಬ ನಿರ್ಧಿಷ್ಟ ಮಾಹಿತಿ ಇಲ್ಲ. ನೀರು ಬಿಡಬೇಕು ಎಂದು ಐದತ್ತು ನಿಮಿಷ ನೀರು ಬಿಟ್ಟು ನಿಲ್ಲಿಸಿದರೂ ಅಚ್ಚರಿ ಇಲ್ಲ. ಈ ನಿಟ್ಟಿನಲ್ಲಿ ಮುಂದಿನ ಪೀಳಿಗೆ ನೀರಿಗಾಗಿ ಹೋರಾಟ ಮಾಡುವ ಪರಿಸ್ಥಿತಿ ನಿರ್ಮಾಣ ಆಗದಂತೆ ಮೇಕೆದಾಟು ಯೋಜನೆ ನಿರ್ಮಾಣ ಮಾಡಲು ಪ್ರತಿಯೊಬ್ಬರು ಹೋರಾಟಕ್ಕೆ ಕೈ ಜೋಡಿಸಬೇಕು ಎಂದು ಆಗ್ರಹಿಸಿದರು.

ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡ ಮಾತನಾಡಿ, ಇಂದು ಕಾವೇರಿ ನೀರು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ಉನ್ನತ ಅಧಿಕಾರಿಗಳನ್ನು ನೇಮಕ ಮಾಡಿ ವಾದ ಮಾಡುವಲ್ಲಿ ವಿಫಲವಾದ ಕಾರಣ ಇಂದು ಜಲಾಶಯಗಳಲ್ಲಿ ನಮಗೆ ಕುಡಿಯಲು ಸಹ ನೀರಿಲ್ಲದಂತೆ ಆಗಿದೆ. ಇದು ಈಗಿರುವ ಸರ್ಕಾರ ಒಂದರ ತಪ್ಪಲ್ಲಾ. ಪ್ರತಿ ವರ್ಷ ಈ ಸಮಸ್ಯೆ ಬರುತ್ತಿದ್ದು, ಯಾವುದೇ ಪಕ್ಷದ ಸರ್ಕಾರ ಅಧಿಕಾರದಲ್ಲಿದ್ದರೂ ಈ ಸಮಸ್ಯೆ ಬರುತ್ತಲೇ ಇದೆ. ಈ ನಿಟ್ಟಿನಲ್ಲಿ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕಿ, ಕೊಡಗಿನ ಮಳೆ ಆಧಾರದಲ್ಲಿ ನೀರು ಹಂಚಿಕೆಗೆ ಸಂಕಷ್ಟ ಸೂತ್ರ ರಚಿಸಲು ಜನಪ್ರತಿನಿಧಿಗಳು ಪಕ್ಷಾತೀತವಾಗಿ ಕೇಂದ್ರದ ಗಮನ ಸೆಳೆಯಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೀಶ್‌ಗೌಡ, ತಾಲೂಕು ಗೌರವಾಧ್ಯಕ್ಷ ಚಿಕ್ಕಣ್ಣಪ್ಪ, ಹನುಮಂತನಗರ ವೆಂಕಟರಮಣ, ಹೋಟೆಲ್ ಪುಷ್ಪಲತಾ, ನಿವೃತ್ತ ಶಿಕ್ಷಕ ಪುಟ್ಟಪ್ಪಾಜಿ, ಮದ್ದೂರಿನ ಪುಟ್ಟಸ್ವಾಮಿ, ನಿವೃತ್ತ ಸರ್ಕಾರಿ ನೌಕರ ತಿಮ್ಮಯ್ಯ ಉ|| ರಾಜಣ್ಣ, ನಿವೃತ್ತ ಶಿಕ್ಷಕ ಜಯರಾಮು, ರ‍್ಯಾಂಬೋ ಸೂರಿ, ಆಟೋ ಸೀನ, ಮನು, ಇತರರು ಇದ್ದರು.

## ಸಂವಿಧಾನದ ಮಹತ ಹಾಗೂ ಆಶೋತ್ತರಗಳನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳಿ:

**ಮೈಸೂರು:** ಸಂವಿಧಾನದ ಮಹತ್ವ ಹಾಗೂ ಆಶೋತ್ತರಗಳನ್ನು ಪ್ರತಿಯೊಬ್ಬರು ತಿಳಿದುಕೊಂಡು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಕೆ.ವಿ. ರಾಜೇಂದ್ರ ಅವರು ತಿಳಿಸಿದರು. ಇಂದು ನಗರದ ಟೌನ್ ಹಾಲ್ ಬಳಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಸಂವಿಧಾನ ಜಾಗೃತಿ ಜಾಥಾ ಅಂಗವಾಗಿ ಏರ್ಪಡಿಸಿದ್ದ ಬೈಕ್ ರ‍್ಯಾಲಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಮಹಾತ್ಮರು ಯಾವ ಉದ್ದೇಶವನ್ನು ಇಟ್ಟುಕೊಂಡು ಸಂವಿಧಾನವನ್ನು ರಚನೆ ಮಾಡಿದ್ದರು ಎಂಬುದನ್ನು ಸಂವಿಧಾನದ ಪೂರ್ವ ಪೀಠಿಕೆಯಲ್ಲಿ ಬರೆದಿದ್ದಾರೆ. ಸಂವಿಧಾನದ ಮಹತ್ವವನ್ನು ತಿಳಿಯಲು ಪೀಠಿಕೆಯನ್ನು ಪ್ರತಿಯೊಬ್ಬರಿಗೂ ತಲುಪಿಸಬೇಕು ಎಂಬ ಉದ್ದೇಶದಿಂದ ಸಂವಿಧಾನದ ಜಾಗೃತಿ ಜಾಥಾವನ್ನು ಎಲ್ಲಾ ಕಡೆ ಹಮ್ಮಿಕೊಳ್ಳಲಾಗಿದೆ. ಇಂದು ನೂರಕ್ಕೂ ಹೆಚ್ಚು ಜನರು ಬೈಕ್ ರ‍್ಯಾಲಿ ಮಾಡಿ ಸಂವಿಧಾನದ ಪೀಠಿಕೆ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮೊದಲು ಡಾ. ಬಿ.ಆರ್. ಅಂಬೇಡ್ಕರ್ ರವರ ಪ್ರತಿಮೆಗೆ ಪುಷ್ಪಾರ್ಚನೆ ನೆರವೇರಿಸಿದರು. ನಂತರ ಸಂವಿಧಾನ ಪೀಠಿಕೆಯನ್ನು ಬೋಧನೆ ಮಾಡಿದರು. ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ರಂಗೇಗೌಡ ವಿವಿಧ ಇಲಾಖೆಗಳ ಅಧಿಕಾರಿ ಉಪಸ್ಥಿತರಿದ್ದರು.



# ಪುರಂದರ ದಾಸರ ಆರಾಧನಾ ಮಹೋತ್ಸವ



**ಬೆಂಗಳೂರು:** ದಾಸ ಸಾಹಿತ್ಯ ಪ್ರಚಾರ ಮಾಧ್ಯಮ - ಶ್ರೀನಿವಾಸ ಉತ್ಸವ ಬಳಗದಿಂದ ಶ್ರೀ ಉತ್ತರಾದಿ ಮಠಾಧೀಶರಾದ ಪೂಜ್ಯ ಶ್ರೀ ಸತ್ಯಾತ್ಮತೀರ್ಥ ಶ್ರೀಪಾದರ ಅನುಗ್ರಹದೊಂದಿಗೆ ದಾಸಸಾಹಿತ್ಯದ ಪಿತಾಮಹ ಶ್ರೀಪುರಂದರದಾಸರ ಬೃಹತ್ ಏಕಶಿಲಾ ವಿಗ್ರಹವನ್ನು ಬೆಂಗಳೂರು ನಗರದ ಬಸವನಗುಡಿಯ ನ್ಯಾಷನಲ್ ಕಾಲೇಜು ಎದುರಿನ ಶ್ರೀಮದ್ ಉತ್ತರಾದಿಮಠದ ಶ್ರೀ ದಿಗ್ವಿಜಯ ಲಕ್ಷ್ಮೀನರಸಿಂಹ ದೇವಸ್ಥಾನದ ಆವರಣದಲ್ಲಿ ಪ್ರತಿಷ್ಠಾಪಿಸಲಾಗಿದೆ. ಇದೀಗ ಪ್ರತಿಷ್ಠಾಪನೆಯ ನಾಲ್ಕನೇ ವರ್ಷದ ಸಂಭ್ರಮದಲ್ಲಿ ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಲಬುರ್ಗಿಯ ದಾಸ ಸೌರಭ, ಶ್ರೀಮದ್ವಾದಿರಾಜ ಆರಾಧನಾ ಟ್ರಸ್ಟ್; ನಾದವೈಭವ ಸಂಗೀತ ವಿದ್ಯಾಲಯ, ಶಿವಮೊಗ್ಗದ ಶ್ರೀ ಗುರುಗುಹ ಸಂಗೀತ ಮಹವಿದ್ಯಾಲಯ ಮತ್ತು ಅನುಗ್ರಹ ಸಂಗೀತ ಮಹಾವಿದ್ಯಾಲಯದ ಸಹಯೋಗದಲ್ಲಿ 'ಪುರಂದರದಾಸರ ಆರಾಧನಾ ಮಹೋತ್ಸವ'ವನ್ನು ಗಾನ-ಜ್ಞಾನ ಯಜ್ಞದೊಂದಿಗೆ ಆಚರಿಸಲಾಯಿತು.

ವಿದ್ವಾನ್ ಆರ್.ಕೆ.ಪದ್ಮನಾಭ ಮತ್ತು ಶಿಷ್ಯವೃಂದದಿಂದ ಪುರಂದರದಾಸರ ಕೃತಿಗಳ ಗೋಷ್ಠಿ ಗಾಯನದೊಂದಿಗೆ ಪುರಂದರ ದಾಸರ ಬೃಹತ್ ಶಿಲಾ ವಿಗ್ರಹಕ್ಕೆ ವಿಶೇಷ ಅಭಿಷೇಕದೊಂದಿಗೆ ಚಾಲನೆ ದೊರೆಯಿತು.

ಪೂಜ್ಯ ಶ್ರೀ ಸುವಿದ್ಯೇಂದ್ರ ತೀರ್ಥ ಶ್ರೀಪಾದರು ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ ಖ್ಯಾತ ವಿದ್ವಾಂಸ, ಶ್ರೀ ೀವ್ಯಾಸ ಮಧ್ವ ಸೇವಾ ಪ್ರತಿಷ್ಠಾನದ ನಿರ್ದೇಶಕ ಡಾ. ವ್ಯಾಸನಕೆರೆ ಪ್ರಭಂಜನಾಚಾರ್ಯರವರಿಗೆ ಪ್ರತಿಷ್ಠಿತ ಮಧ್ವ ಪುರಂದರ ಪ್ರಶಸ್ತಿಯನ್ನು ನೀಡಿ ಗೌರವಿಸಿ ಅನುಗ್ರಹ ಸಂದೇಶ ನೀಡುತ್ತ ದೇಶದ ಉದ್ದಗಲದಲ್ಲಿ ನಿರಂತರವಾಗಿ ಸಂಚರಿಸುತ್ತ ವಿದ್ವತ್ಪೂರ್ಣವಾದ ಪ್ರವಚನಗಳ ಮೂಲಕ ಏಕಾದಶೀ ಉಪವಾಸ-ಚಾತುರ್ಮಾಸ್ಯ ಆಚರಣೆ-ಅನುಷ್ಠಾನಗಳ ಬಗ್ಗೆ ಜಾಗೃತಿಯನ್ನು ಮೂಡಿಸಿ ಜನರು ಸನ್ಮಾರ್ಗದಲ್ಲಿ ನಡೆಯುವಂತೆ ಮಾಡಿದ ಕಾರ್ಯ ಅತ್ಯಂತ ಪ್ರಶಂಸನಾರ್ಹವಾಗಿದೆ ತಿಳಿಸಿದರು. ಸಮಾರಂಭದ ಮುಖ್ಯ ಅತಿಥಿಗಳಾಗಿ ಜಯತೀರ್ಥ ವಿದ್ಯಾಪೀಠದ ಕುಲಪತಿ ಪಂ.ಗುತ್ತಲ್ ರಂಗಾಚಾರ್, , ಶ್ರೀವಾರಿ ಫೌಂಡೇಷನ್‌ನ ಎಸ್. ವೆಂಕಟೇಶಮೂರ್ತಿ ಮತ್ತು ಖ್ಯಾತ ಗಾಯಕ ಗಾನಕಲಾಭೂಷಣ ವಿದ್ವಾನ್ ಆರ್. ಕೆ.ಪದ್ಮನಾಭರವರು ಭಾಗವಹಿಸಿದ್ದರು.

ಆಧ್ಯಾತ್ಮಿಕ ಮತ್ತು ಸಮಾಜಸೇವೆಗಾಗಿ ವಟ್ಟಂಗಾಡ್ ಕೃಷ್ಣಾಚಾರ್ಯ; ಪತ್ರಿಕೋದ್ಯಮ-ಹಿರಿಯ ಪತ್ರಕರ್ತ ಶೇಷಚಂದ್ರಿಕ ಮತ್ತು ದಾಸಸಾಹಿತ್ಯ ಪ್ರಸರಣ-ತಂತ್ರಜ್ಞ ದಂಡಿನ್ ಅನಂತರಾವ್ ರವರಿಗೆ ಹರಿದಾಸ ಅನುಗ್ರಹ ಪ್ರಶಸ್ತಿ ನೀಡಿ ಪುರಸ್ಕರಿಸಲಾಯಿತು. ಖ್ಯಾತ ಹಿಂದೂಸ್ತಾನಿ ಗಾಯಕ ನಿವೃತ್ತ ಐಎಎಸ್ ಅಧಿಕಾರಿ ಡಾ. ಪಂ. ಮುದ್ದುಮೋಹನ್‌ರವರಿಂದ ದಾಸವಾಣಿ ನಡೆಯಿತು.

ಮಧ್ಯಾರಾಧನಾ ಮಹೋತ್ಸವದ ಅಂಗವಾಗಿ ಪುರಂದರದಾಸರ ಕುರಿತು ವಿಶೇಷ ಉಪನ್ಯಾಸ ಖ್ಯಾತ ವಾಗ್ಮಿ ಮತ್ತು ಆಧ್ಯಾತ್ಮ ಚಿಂತಕ ಡಾ. ಪಂ. ಆತನೂರು ಭೀಮಸೇನಾಚಾರ್ಯ ನಡೆಸಿಕೊಟ್ಟರು ಮತ್ತು ಖ್ಯಾತ ಗಾಯಕ ಡಾ. ರಾಯಚೂರು ಶೇಷಗಿರಿದಾಸ್‌ರವರಿಂದ ದಾಸರ ಪದಗಳ ಗಾಯನ ಆಯೋಜಿಸಿತ್ತು.

ಸಂಜೆ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಭಾಗವಹಿಸಿ. ಖ್ಯಾತ ಹಿಂದೂಸ್ತಾನಿ ಗಾಯಕ ಡಾ. ಪಂ. ನಾಗರಾಜರಾವ್ ಹವಾಲ್ದಾರ್ ಅವರಿಗೆ 'ಪುರಂದರ ಸಂಗೀತ ರತ್ನ' ಪ್ರಶಸ್ತಿ ನೀಡಿ ಗೌರವಿಸಿ ಮಾತನಾಡುತ್ತ ಹೃದಯವನ್ನು ಅರಳಿಸುವ ಸಾಹಿತ್ಯವನ್ನು ತಮ್ಮ ಜೀವನದ ಉಸಿರಾಗಿಸಿಕೊಂಡು, ಕಳೆದ ಹನ್ನೆರೆಡು ವರ್ಷಗಳಿಂದ 'ಶ್ರೀ ಶ್ರೀನಿವಾಸ ಉತ್ಸವ ಬಳಗ (ರಿ) ದಾಸಸಾಹಿತ್ಯ ಪ್ರಚಾರ ಮಾಧ್ಯಮ ಸಂಘಟನೆಯ ಮೂಲಕ 'ಶ್ರೀ ಪುರಂದರದಾಸರ ಆರಾಧನಾ ಮಹೋತ್ಸವ'ವನ್ನು ಮಾಡುತ್ತ ಜನಹಿತಕಾರ್ಯ ಮಾಡುತ್ತಿರುವುದು ತುಂಬಾ ಶ್ಲಾಘನೀಯ ವಿಚಾರ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಗುಲಬರ್ಗಾದ ಸಂಶೋಧಕರಾದ ಶ್ರೀಮತಿ ಸುಮಿತ್ರ ಜಯತೀರ್ಥ ಪ್ರತಿನಿಧಿ, ಅಂಕಣಕಾರ ಶ್ರೀಧರ ರಾಯಸಂ ಮತ್ತು ಹಾರ್ಮೋನಿಯಂ ವಾದಕ ಪಂ. ಕೃಷ್ಣ ಹುನಗುಂದರವರಿಗೆ ಹರಿದಾಸ ಅನುಗ್ರಹ ಪ್ರಶಸ್ತಿ ನೀಡಿ ಪುರಸ್ಕರಿಸಲಾಯಿತು.

# ಸಂವಿಧಾನ ಎಲ್ಲರೂ ಸಹಬಾಳ್ವೆಯಿಂದ ಬದುಕಲು ಅವಕಾಶ ಮಾಡಿಕೊಟ್ಟಿದೆ

**ಮೈಸೂರು:** ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನೀಡಿದಂತಹ ಸಂವಿಧಾನ ಎಲ್ಲ ಜಾತಿ ಜನಾಂಗದವರು ಸಹಬಾಳ್ವೆಯಿಂದ ಬದುಕಲು ಅವಕಾಶ ಮಾಡಿಕೊಟ್ಟಿದೆ ಎಂದು ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರು ಹಾಗೂ ಗ್ರಾಮದ ಮುಖಂಡರಾದ ಚಂದ್ರಶೇಖರ್ ರವರು ಹೇಳಿದರು.

ತಿ. ನರಸೀಪುರ ತಾಲೂಕು ಕಲಿಯೂರು ಗ್ರಾಮ ಪಂಚಾಯಿತಿಯ ಆವರಣದಲ್ಲಿ ನಡೆದ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದ ಸ್ತಬ್ಧ ಚಿತ್ರವನ್ನು ಸ್ವಾಗತಿಸಿ ಮಾತನಾಡಿದ ಅವರು ಮಹಿಳೆಯರು ಈ ಸಮಾಜದಲ್ಲಿ ಪುರುಷರಿಗೆ ಸಮಾನವಾಗಿ ಬದುಕಲು ಸಂವಿದಾನ ಅವಕಾಶ ಮಾಡಿಕೊಟ್ಟಿದೆ ಹಾಗೂ ಸಂವಿಧಾನದ ಪ್ರತಿಯೊಂದು ಪುಟವು ಅಮೂಲ್ಯ ರತ್ನಗಳಿದ್ದಂತೆ ಎಂದರು. ಗ್ರಾಮ ಪಂಚಾಯಿತಿ ಅಧ್ಯಕ್ಷರಾದ



ರಾಣಿ, ಉಪಾಧ್ಯಕ್ಷರಾದ ಪ್ರದೀಪ್, ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಕಲಿಯೂರು ಗ್ರಾಮದ ನಾಗರಿಕ ಪ್ರೌಢಶಾಲೆ ಮತ್ತು ಪ್ರಾಥಮಿಕ ಶಾಲೆ ಶಿಕ್ಷಕರು ಶಾಲೆ ಮಕ್ಕಳು ವಿಶೇಷ ನೃತ್ಯ ಮತ್ತು ಸೈಕಲ್ ಜಾಥದೊಂದಿಗೆ ಅದ್ದೂರಿಯಾಗಿ ಸ್ಥಬ್ಧ ಚಿತ್ರವನ್ನು ಪುಷ್ಪಾರ್ಚನೆಯ ಮೂಲಕ ಸ್ವಾಗತಿಸಿದರು. ಸಂಭ್ರಮ ಕಲಾತಂಡದವರು ಅಸ್ಪೃಶ್ಯತೆ ನಿವಾರಣೆ ಬಗ್ಗೆ ನಾಟಕ ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಪಂಚಾಯತಿಯ ಪಿಡಿಒ ಶೈಲಜಾ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ಎಇಇ 01 ಸರಣಿ ಮುಖ್ಯ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ

**ಮೈಸೂರು:** ಜನವರಿಯಲ್ಲಿ ನಡೆದ ಎಇಇ 01 ಸರಣಿಯ ಮುಖ್ಯ ಪರೀಕ್ಷೆಯ ಫಲಿತಾಂಶವೂ 12 - 02 - 2024 ರಂದು ಪ್ರಕಟಗೊಂಡಿದ್ದು ಇದರಲ್ಲಿ ನಾರಾಯಣ ಶಿಕ್ಷಣ ಸಂಸ್ಥೆಯು ಉತ್ತಮ ಫಲಿತಾಂಶವನ್ನು ನೀಡಿದೆ.

ಭಾರತದಾದ್ಯಂತ 8 ಮಂದಿ ವಿದ್ಯಾರ್ಥಿಗಳು 100 ಪರ್ಸೆಂಟೈಲ್ ಗಳಿಸಿರುವುದು ಸಂಸ್ಥೆಗೆ ಹೆಮ್ಮೆಯ ವಿಷಯವಾಗಿದೆ. ಈ ಕಾರ್ಯವು ನುರಿತ ಹಾಗೂ ಪಾಂಡಿತ್ಯಪೂರ್ಣ ಸಿಬ್ಬಂದಿ ವರ್ಗ ಜೊತೆಗೆ ಉತ್ತಮ ಕಾರ್ಯ ಯೋಜನೆಗಳ ಶಿಸ್ತಿನ .ನಿರ್ವಹಣೆಯಿಂದ ಕೂಡಿರುವ ನಾರಾಯಣ ಶಿಕ್ಷಣ ಸಂಸ್ಥೆಯಿಂದಲೇ ಮಾತ್ರ ಸಾಧ್ಯವಾಗುವುದು ಎಂದರೆ ಅದು ಅತಿಶಯೋಕ್ತಿಯಲ್ಲ ಎಂಬುದಾಗಿ ಸಂಸ್ಥೆಯ ನಿರ್ದೇಶಕಿಯಾದ ಶ್ರೀಮತಿ ಸಿಂಧು ಅವರು ತಿಳಿಸಿದ್ದಾರೆ.

ಮೈಸೂರಿನಲ್ಲಿ ಚೈತ್ರ ಶಿಕ್ಷಣ ಸಂಸ್ಥೆಯ ಸಹಯೋಗದೊಂದಿಗೆ ಪ್ರಾರಂಭವಾದ ನಾರಾಯಣ ಸಂಸ್ಥೆಯು ಈ ಬಾರಿಯ ಎಇಇ 01 ಈ ಸರಣಿಯಲ್ಲಿ ಕಾಲೇಜಿನ 11 ಮಂದಿ ವಿದ್ಯಾರ್ಥಿಗಳು 90 ಪರ್ಸೆಂಟೈಲ್ ಗಿಂತಲೂ 98.94



ಹೆಚ್ಚು ಅಂಕ ಗಳಿಸಿದ್ದಾರೆ ಎಂಬುದಾಗಿ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ರಾಜರಾವ್ ರವರು ತಿಳಿಸಿದ್ದು ಈ ಬಗ್ಗೆ ಕೋರ್ ಡೀನ್ ಸುರೇಂದ್ರನಾಥ ರೆಡ್ಡಿ ಅವರು ಮತ್ತು ಮೈಸೂರು ವಿಭಾಗದ ಂಉಖಿಒ ಶ್ರೀ ಕಾಳೇಶ್ ರವರು ಸಂತಸ ವ್ಯಕ್ತಪಡಿಸಿ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

ಈ ಫಲಿತಾಂಶ ಕುರಿತು ನಾರಾಯಣ ಸಂಸ್ಥೆಯ ಸಂಸ್ಥಾಪಕರಾದ ಶ್ರೀ ಪೊಂಗೂರು ನಾರಾಯಣ ರವರು ವಿದ್ಯಾರ್ಥಿಗಳನ್ನು , ಪೋಷಕರನ್ನು , ಸಿಬ್ಬಂದಿ ವರ್ಗದವರನ್ನು ಅಭಿನಂದಿಸಿ ಮುಂದಿನ ಎರಡನೇ ಸರಣಿಯಲ್ಲೂ ಸಹ ಈ ರೀತಿಯ ಉತ್ತಮ ಫಲಿತಾಂಶ ಪಡೆಯುವಂತೆ ಪ್ರತಿಯೊಬ್ಬರನ್ನು ಹುರಿದುಂಬಿಸಿ ಪ್ರೋತ್ಸಾಹದಾಯಕ ಮಾತುಗಳನ್ನು ಆಡಿದ್ದಾರೆ.

# ಸಾಧಕರಿಗೆ ಕಲಾ ಕೌಸ್ತುಭ ಪ್ರಶಸ್ತಿ ಪ್ರದಾನ



**ಮೈಸೂರು:** ಸುತ್ತೂರು ಜಾತ್ರೆಯಲ್ಲಿ ನಡೆದ ಕುರುಕ್ಷೇತ್ರ ನಾಟಕದಲ್ಲಿ ನಂಜನಗೂಡಿನ ಶ್ರೀ ಶನೇಶ್ವರ ಸ್ವಾಮಿ ಕಲಾ ಸಂಘ (ರಿ) ರವರು

ಕುರುಕ್ಷೇತ್ರ ಪೌರಾಣಿಕ ನಾಟಕದಲ್ಲಿ ನಿರ್ದೇಶಕರಾದ ಬೀರಿಹುಂಡಿ ಗೋವಿಂದರಾಜು, ಅವರಿಗೆ ಹಾಗೂ ನಾಟಕದಲ್ಲಿ ಅಭಿನಯಿಸಿದ ದುರ್ಯೋಧನ ಪಾತ್ರಧಾರಿ ಬಿಜೆಪಿ ಮುಖಂಡರಾದ ಲೋಹಿತ್ ದೊರೆಸ್ವಾಮಿ, ರವರಿಗೆ ಹಾಗೂ ಹೊಸಕೋಟೆ ಪ್ರಭುಸ್ವಾಮಿ,ರವರಿಗೆ ಹಲವಾರು ವರ್ಷಗಳಿಂದ ವಿಭಿನ್ನವಾದ ಪಾತ್ರಗಳನ್ನು ನಿರ್ವಹಿಸಿ ಹಾಗೂ ರಂಗಭೂಮಿಯಲ್ಲಿ ಸೇವೆ ಸಲ್ಲಿಸಿದ ಇವರನ್ನು ಗುರುತಿಸಿ

ಕಲಾ ಕೌಸ್ತುಭ ಪ್ರಶಸ್ತಿಯನ್ನು ನೀಡುವ ಮೂಲಕ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಹರವೆ ವಿರಕ್ತಮಠದ ಶ್ರೀಗಳು ಹಾಗು ಸಂಘದ ಅಧ್ಯಕ್ಷರಾದ ಹೊನ್ನಪ್ಪನವರು ಉಪಾಧ್ಯಕ್ಷರಾದ, ಮೂಕಳ್ಳಿ ಮಹೇಶ್, ಬಸವಟ್ಟಿಗೆ ಪ್ರಭುಸ್ವಾಮಿ, ಆಗಿನವಾಳು ಮಾದೇವಮೂರ್ತಿ, ಕೆರೆಹಳ್ಳಿ ದೊರೆಸ್ವಾಮಿ, ಮಸಂಭಾಯನಹಳ್ಳಿ ಪಾಪಣ್ಣ, ಹಾಗೂ ಮುಂತಾದವರು ಉಪಸ್ಥಿತರಿದ್ದರು,

## 17 ಸ್ಕ್ವ್ಯಾಡ್ ನಾಟಕ ಪ್ರದರ್ಶನ

**ಮೈಸೂರು:** ಮೈಸೂರಿನ ರಾಮಕೃಷ್ಣ ನಗರದಲ್ಲಿನ ರಮಾಗೋವಿಂದ ಸಭಾಂಗಣದಲ್ಲಿ ಬೆಂಗಳೂರಿನ ಫೋರ್ಥ್ ವಾಲ್ ಥಿಯೇಟರ್ ಸಂಸ್ಥೆ ವತಿಯಿಂದ ಫೆ.17ರಂದು ಸಂಜೆ 4 ಮತ್ತು 7 ಗಂಟೆಗೆ ಸ್ಕ್ವ್ಯಾಡ್ ನಾಟಕ ಪ್ರದರ್ಶನ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಕಲಾವಿದ ಗಂಧರ್ವ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ಕೊಲೆಯ ಸುತ್ತ ನಾಟಕ ಸಾಗುತ್ತದೆ. ಲೇಖಕಿಯ ಪತಿಯಾಗಿದ್ದ ಇನ್‌ಸ್ಪೆಕ್ಟರ್ ಸಾವನ್ನಪ್ಪಿದ ಬಳಿಕ ನಡೆಯುವ ಬಗೆ ಬಗೆಯ ಸಂಗತಿ, ನಿಗೂಢತೆ ನಾಟಕದಲ್ಲಿದೆ. ನಾಟಕವೂ ಸುಮಾರು 1.40 ಗಂಟೆ ಅವಧಿಯ ನಾಟಕವಾಗಿದ್ದು, ಪ್ರವೇಶದರ 200 ರೂ.,ಗಳಾಗಿದ್ದು, ಬೆಂಗಳೂರಿನಲ್ಲಿ ಇದುವರೆಗೆ ಕಂಡ ಪ್ರದರ್ಶನ ಭಾರೀ ಯಶಸ್ಸನ್ನು ಗಳಿಸಿವೆ ಎಂದರು. ಸುದ್ದಿಗೋಷ್ಠಿಯಲ್ಲಿ ತಂಡದ ಸುಪ್ರಜಾ, ಸೌಮ್ಯ, ಅಪೇಕ್ಷಾ, ಮಣಿಕಂಠ ಉಪಸ್ಥಿತರಿದ್ದರು.



## ಗೃಹಿಣಿ ನೇಣು ಬಿಗಿದು ಆತ್ಮಹತ್ಯೆ

**ಬೆಂಗಳೂರು:** ಗೃಹಿಣಿಯೊಬ್ಬರಯ ಆತ್ಮಹತ್ಯೆಗೆ ಶರಣಾದ ಘಟನೆ ಬೆಂಗಳೂರಿನ ರಾಜಗೋಪಾಲನಗರದಲ್ಲಿ ನಡೆದಿದೆ. ಕಾವ್ಯ ಮೃತ ಗೃಹಿಣಿ. ಮಗಳು ನೇಣಿಗೆ ಶರಣಾಗಲು ಪತಿಯ ಅಕ್ರಮ ಸಂಬಂಧವೇ ಕಾರಣ ಎಂದು ಕಾವ್ಯ ಪೋಷಕರು ಆರೋಪಿಸಿದ್ದಾರೆ. ಪತಿ ಪ್ರವೀಣ್ ಸೇರಿ ನಾಲ್ವರ ವಿರುದ್ಧ ದೂರು ನೀಡಿರುವ ಪೋಷಕರು ಅಳಿಯನನ್ನ ನಮಗೆ ಒಪ್ಪಿಸುವಂತೆ ಪೊಲೀಸರ ಜೊತೆ ವಾಗ್ವಾದ ನಡೆಸಿದ್ದಾರೆ.

**ಪೋಷಕರು ಹೇಳಿದ್ದು ಏನು:** ಎರಡು ವರ್ಷದ ಹಿಂದೆ ಅರ್ಧಕೆಜಿ ಚಿನ್ನಕೊಟ್ಟು, 50 ಲಕ್ಷ ಖರ್ಚು ಮಾಡಿ ಬೆಂಗಳೂರಿನಲ್ಲಿ ಅದ್ದೂರಿಯಾಗಿ ಮದುವೆ ಮಾಡಿಕೊಟ್ಟಿದ್ದೆವು. ಇತ್ತಿಚೇಗೆ ಮೊಮ್ಮಗನ ಹುಟ್ಟುಹಬ್ಬ ನಡೆದಿತ್ತು. ಮೃತ ಕಾವ್ಯಳ ಪತಿ ಪ್ರವೀಣ್, ವೃತ್ತಿಯಲ್ಲಿ ಎಂಜಿನಿಯರ್ ಆಗಿದ್ದ. ಆದರೆ ಎಲ್ಲಿಯೂ ಕೆಲಸಕ್ಕೆ ಹೋಗುತ್ತಿರಲಿಲ್ಲ. ಆದರೆ ಅಳಿಯನ ಜೊತೆ ಹುಡುಗಿಯೊಬ್ಬಳ ಅಕ್ರಮ ಸಂಬಂಧವಿತ್ತು. ಹೆಂಡತಿ, ಮಗುವಿಗಿಂತ ಅವಳೇ ಅಳಿಯನಿಗೆ ಹೆಚ್ಚಾಗಿದ್ದಳು. ಈ ಬಗ್ಗೆ ಪ್ರಶ್ನೆ ಮಾಡಿದರೆ ತಂಗಿ ಎಂದು ಹೇಳಿದ್ದ. ಕುಟುಂಬಸ್ಥರೇ ಮೃತದೇಹವನ್ನು ಕೆಳಗಿಳಿಸಿದ್ದಾರೆ ಎಂದು ಆರೋಪಿಸಿದ್ದಾರೆ.

## ಮೋದಿ ಪ್ರಧಾನಿಯಾಗುವುದನ್ನು ತಡೆಯಲಾಗದು: ಎಚ್‌ಡಿಕೆ

**ಹಾಸನ:** ನರೇಂದ್ರ ಮೋದಿ ಅವರು 3ನೇ ಬಾರಿ ಪ್ರಧಾನಿ ಆಗುವುದನ್ನು ಯಾರಿಂದಲೂ ತಪ್ಪಿಸಲು ಆಗದು ಎಂದು ಜೆಡಿಎಸ್ ನಾಯಕ ಹೆಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ. ಹಾಸನ ತಾಲ್ಲೂಕಿನ ಚನ್ನಂಗಿಹಳ್ಳಿ ಗ್ರಾಮದಲ್ಲಿ ದೇವಾಲಯ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಬಿಜೆಪಿ ಜೆಡಿಎಸ್ ಮೈತ್ರಿ ಸೀಟು ಹಂಚಿಕೆಯ ಬಗ್ಗೆ ಸಮಸ್ಯೆ ಇಲ್ಲ. ಹಾಸನ ಜಿಲ್ಲೆಯಲ್ಲೂ ಜೆಡಿಎಸ್ ಅಭ್ಯರ್ಥಿ ಗೆಲ್ಲಬೇಕು. ಸಣ್ಣಪುಟ್ಟ ಸಮಸ್ಯೆಗಳಿವೆ, ಅದೆಲ್ಲವನ್ನೂ ಸರಿಪಡಿಸಿಕೊಳ್ಳುತ್ತೇವೆ. ಮಂಡ್ಯ ಜಿಲ್ಲೆಯ ಪ್ರತಿದಿನ ಒಂದು ಧಾರಾವಾಹಿ ಇರಲೇಬೇಕು. ನಿಖಿಲ್‌ನನ್ನು ರಾಜಕೀಯವಾಗಿ ಮುಗಿಸಲು ಯಾವ ರೀತಿ ಮಾಡಿದ್ದರು ಒಂದು ತಿಂಗಳಿನಿಂದ ಧಾರವಾಹಿ ನಡೆಯುತ್ತಿದೆ ಎಂದು ಹೇಳಿದರು.

# ಸಂತ ಸೇವಾಲಾಲ್‌ರವರ ಜೀವನವೇಯುವಕರಿಗೆ ಮಾದರಿ

**ತಿಪಟೂರು:** ತಾಲ್ಲೂಕಿನ ಹೊನ್ನವಳ್ಳಿ ಹೋಬಳಿಯ ಹಾಲೇನಹಳ್ಳಿ ಗೊಲ್ಲರಹಟ್ಟಿ ಗ್ರಾಮದ ಸರ್ಕಾರಿಕಿರಿಯ ಪ್ರಾಥಮಿಕ ಶಾಲೆಯಲ್ಲಿ ಲಂಬಾಣಿಜನಾಂಗದ ಸದ್ಗುರು ಸಂತ ಶ್ರೀ ಸೇವಾಲಾಲ್‌ರವರ 285 ನೇ ಜಯಂತೋತ್ಸವದ ಅಂಗವಾಗಿ ತಾಲ್ಲೂಕ್ಕಿ ಶ್ರೀ ಸಂತ ಸೇವಾಲಾಲ್ ಲಂಬಾಣಿ ಸಂಘದ ವತಿಯಿಂದಉಚಿತ ನೋಟ್ ಬುಕ್, ಶಬ್ದಕೋಶ ಮತ್ತು ಲೇಖನ ಸಾಮಗ್ರಿ ವಿತರಣಾಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಪ್ರಥಮದರ್ಜೆಅರಣ್ಯಗುತ್ತಿಗೆದಾರ ಬಿ.ಆರ್.ಶಶಿಧರ್, ಲಂಬಾಣಿಜನಾಂಗದ ಸದ್ಗುರುಎಂದೇ ಪ್ರಸಿದ್ದರಾಗಿರುವ ಶ್ರೀ ಸೇವಾಲಾಲ್ ರವರು ಸಮುದಾಯವನ್ನುಉದಯೋನ್ಮುಖಯುವಜನಾಂಗದ ವರಿಗೆದಾರಿದೀಪರಾಗಿದ್ದರುಅವರಜೀವನ, ಅವರ ವ್ಯಕ್ತಿತ್ವ, ತತ್ವ, ಆದರ್ಶಗಳು ಯುವಕರಿಗೆ ಮಾದರಿಎಂದು ತಿಳಿಸಿದರು.



ನಿವೃತ್ತ ಶಿಕ್ಷಕ ಹೆಚ್.ಎ.ಶಶಿಧರ್ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿ, ಸಂತಎನ್ನುವುದುಎಲ್ಲಾ ಲೌಕಿಕ ಜಗತ್ತಿನ ಜಂಜಾಟಗಳನ್ನು ದಾಟಿಜೀವನದ ಪರಮಗುರಿಯಾದ ಮೋಕ್ಷದಕಡೆ ನಡೆಯುವುದುಎಂದರ್ಥ. ಇಂತಹ ನಾಮಾಂಕಿತವನ್ನು ಪಡೆಯುವುದು ಕೆಲವೇ ಮಂದಿ. ಅಂತಹ ಸಂತರ ಸ್ಥಾನವನ್ನುಅಲಂಕರಿಸಿರುವುದು ಲಂಬಾಣಿ ಸಮುದಾಯದಒಂದುಕಿರೀಟವೆಂದುಗುಣದಾನಮಾಡಿದರು.

ಸಂಘಟನೆಯಅಧ್ಯಕ್ಷ ಮತ್ತುಆಯೋಜನ ಬಿ.ಟಿ.ಕುಮಾರ್ ಮಾತನಾಡಿ, ಸಂತ ಸೇವಾಲಾಲ್‌ರವರು ನಮ್ಮಜನಾಂಗದದಾರಿದೀಪದಂತೆಅದೆಷ್ಟೋ ಸಮುದಾಯಕ್ಕೆ ಬೆಳಕಾಗಿ, ಉತ್ತಮಜೀವನವನ್ನು ನಡೆಸಲು ಅವಕಾಶ ಕಲ್ಪಿಸಿದ್ದಾರೆ. ವಿದ್ಯಾಭ್ಯಾಸಎನ್ನುವುದು ಮರೀಚಿಕೆಯಾಗಿದ್ದ ಸಮುದಾಯಕ್ಕೆ ವಿದ್ಯಾಭ್ಯಾಸದ ಮಹತ್ವಎಂತದ್ದುಎನ್ನುವುದನ್ನು ತಿಳಿಸಿಕೊಟ್ಟ ಸಂತರಾಗಿದ್ದಾರೆಂದರು.

ಕಾರ್ಯಕ್ರಮದಲ್ಲಿಎಐಟಿಯುಸಿ ಕಾರ್ಮಿಕಮುಖಂಡಗೋವಿಂದರಾಜು,ಗ್ರಾಪಂಉಪಾಧ್ಯಕ್ಷೆ ಮೀನಾಕ್ಷಮ್ಮ, ಎಸ್.ಟಿ.ಎಂ.ಸಿಅಧ್ಯಕ್ಷ ಮರಿಯಪ್ಪ, ಮುಖ್ಯ ಶಿಕ್ಷಕ ಆರ್.ರಾಜನಾಯಕ್, ಗ್ರಾಪಂಮಾಜಿ ಸದಸ್ಯಅರುಣ್‌ಕುಮಾರ್, ಸಹಶಿಕ್ಷಕಿ ಸುನಿತ, ನಾಗರಾಜು ಮತ್ತು ಸಂಘಟನೆಯ ನಾಗರಾಜು ಸೇರಿದಂತೆ ವಿದ್ಯಾರ್ಥಿಗಳು, ಎಸ್‌ಡಿಎಂಸಿ ಪದಾಧಿಕಾರಿಗಳು, ಪೋಷಕರು ಭಾಗವಹಿಸಿದ್ದರು.ಕಾರ್ಯಕ್ರಮದಲ್ಲಿ ಬಾಗವಹಿಸಿದ ಎಲ್ಲರಿಗೂ ಸಿಹಿ ವಿತರಿಸಲಾಯಿತು.

# ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರ ಧಾರೆ ಸರ್ವರಿಗೂ ದಾರಿದೀಪ

**ಕಡೇನಂದಿಹಳ್ಳಿ:** ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯ. ಅಂತರಂಗ ಮತ್ತು ಬಹಿರಂಗ ಪರಿಶುದ್ಧಗೊಳಿಸುವ ಶಕ್ತಿ ಶ್ರೀ ಗುರುವಿಗೆ ಇದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ವಿಚಾರ ಧಾರೆ ಸರ್ವರಿಗೂ ದಾರಿದೀಪ ಎಂದು ಬಾಳೆಹೊನ್ನೂರು ಶ್ರೀ ೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಶಿಕಾರಿಪುರ ತಾಲೂಕ ಕಡೇನಂದಿಹಳ್ಳಿ ಕ್ಷೇತ್ರದ ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದಲ್ಲಿ ಜರುಗಿದ 36 ಅಡಿ ಎತ್ತರದ ಶ್ರೀ ಜಗದ್ಗುರು ರೇಣುಕಾಚಾರ್ಯರ ಪುತ್ಥಳಿ ಅನಾವರಣ ಮಹಾಮಸ್ತಕಾಭಿಷೇಕ ಪುಷ್ಪಾರ್ಚನೆ ನೆರವೇರಿಸಿದ ನಂತರ ಜರುಗಿದ ಧರ್ಮ ಸಂಸ್ಕೃತಿ ಪುನಶ್ಚೇತನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಂಸ್ಕಾರ ಸಂಸ್ಕೃತಿಗಳ ಮೂಲಕ ಅಂಗ ಅವಗುಣಗಳನ್ನು ದೂರ ಮಾಡಿ ಲಿಂಗ ಗುಣ ಬೆಳೆಸಲು ಶ್ರಮಿಸಿದವರು ರೇಣುಕಾಚಾರ್ಯರು. ಜೀವಾತ್ಮ ಪರಮಾತ್ಮನಾಗುವ ಅಂಗ ಲಿಂಗವಾಗುವ ಭವಿ ಭಕ್ತನಾಗುವ ಸಾಧನಾ ಮಾರ್ಗವನ್ನು ಬೋಧಿಸಿ ಜೀವನ ಉತ್ಕರ್ಷತೆಗೆ ಕಾರಣರಾದವರು ರೇಣುಕಾಚಾರ್ಯರು. ಗಂಡು ಹೆಣ್ಣು ಉಚ್ಚ ನೀಚ ಮತ್ತು ಬಡವ ಬಲ್ಲಿದ ಎನ್ನದೇ ಎಲ್ಲರ ಶ್ರೇಯಸ್ಸಿಗಾಗಿ ಶ್ರಮಿಸಿದ್ದನ್ನು



ಮರೆಯಲಾಗದು. ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಶಿವಜ್ಞಾನದ ಅರಿವು ಮೂಡಿಸುವುದು ಮುಖ್ಯವೆಂದು ಆರೋಗ್ಯ ಪೂರ್ಣ ಸಮಾಜಕ್ಕೆ ಶ್ರಮಿಸಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಇಂಥ ಭವ್ಯ ಸುಂದರ ಶ್ರೀ ಜಗದ್ಗುರು ರೇಣುಕಾಚಾರ್ಯರ ಪುತ್ಥಳಿ ನಿರ್ಮಿಸಿ ಲೋಕಾರ್ಪಣೆಗೈದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾಡಿದ ಸತ್ಕಾರ್ಯ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆಂದು ಹರುಷ ವ್ಯಕ್ತಪಡಿಸಿ ಶ್ರೀಗಳವರಿಗೆ '''ಶಿವ ಪೂಜಾ ತಪೋರತ್ನ'' ಪ್ರಶಸ್ತಿ ಚಿನ್ನದುಂಗುರ ಮತ್ತು ರೇಶ್ಮೆ ಮಡಿ ಹೊದಿಸಿ ಫಲ ಪುಷ್ಪವಿತ್ತು ಜಗದ್ಗುರುಗಳು ಶುಭ ಹಾರೈಸಿದರು.

ಇದೇ ಸಂದರ್ಭದಲ್ಲಿ ಶಿವಮೊಗ್ಗ ಕ್ಷೇತ್ರದ ಸಂಸದ ಬಿ.ವೈ.ರಾಘವೇಂದ್ರ, ಅವರಿಗೆ ''ಶ್ರೀ ೀ ರಂಭಾಪುರಿ ಜಗದ್ಗುರು ರೇವಣಸಿದ್ಧೇಶ್ವರ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮಾಡಿ ಶುಭ ಹಾರೈಸಿದರು. ಪ್ರಶಸ್ತಿ ಸ್ವೀಕರಿಸಿದ ಬಿ.ವೈ. ರಾಘವೇಂದ್ರ ಕೃತಜ್ಞತಾ ಪೂರ್ವಕ ಮಾತುಗಳನ್ನಾಡಿದರು.

ಕಾರ್ಕಳದ ಶಿಲ್ಪಿ ಕೃಷ್ಣಾ ಆಚಾರ್ಯ, ಶಿವಮೊಗ್ಗ ಶಿಲ್ಪಿ ಜೀವನ್ ಕಲಾಸನ್ನಿಧಿ, ಶಿಕಾರಿಪುರ ಪ್ರಥಮ ದರ್ಜೆ ಗುತ್ತಿಗೆದಾರ ದೇವೇಂದ್ರಪ್ಪ ಇವರಿಗೆ ಪ್ರಶಸ್ತಿ ಮತ್ತು ಗುರುರಕ್ಷೆಯಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಇದೇ ಸಂದರ್ಭದಲ್ಲಿ ಗೌರವಿಸಲಾಯಿತು. ಬಿ.ಜೆ.ಪಿ. ಧುರೀಣ ಕೆ.ಎಸ್. ಗುರುಮೂರ್ತಿ ಮತ್ತು ಹೆಚ್.ಬಿ. ಬಳಿಗಾರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ನೇತೃತ್ವ ವಹಿಸಿದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಸರ್ವರ ಸಹಕಾರ ಮತ್ತು ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದದಿಂದ ಎಲ್ಲಾ ಕಾರ್ಯಗಳು ಯಶಸ್ವಿಯಾಗಿ ಜರುಗಿದ್ದಕ್ಕೆ ಹರುಷ ವ್ಯಕ್ತಪಡಿಸಿದರು.

ಈ ಪವಿತ್ರ ಸಮಾರಂಭದಲ್ಲಿ, ಕನ್ನೂರು-ಸಿಂಧನೂರು ಸೋಮನಾಥ ಶ್ರೀ ೀ, ಚನ್ನಗಿರಿ ಕೇದಾರ ಶಿವಶಾಂತವೀರ ಶ್ರೀ, ಹಾರನಹಳ್ಳಿ ಶಿವಯೋಗಿ ಶ್ರೀ, ಕಾರ್ಜುವಳ್ಳಿ ಸದಾಶಿವ ಶ್ರೀ, ಸಂಗೊಳ್ಳಿ ಗುರುಲಿಂಗ ಶ್ರೀ ೀಗಳು, ಕಡೆನಂದಿಹಳ್ಳಿ ವೀರಭದ್ರ ಶ್ರೀಗಳು ಸೇರಿದಂತೆ ಹಲವಾರು ಮಠಾಧೀಶರು ಉಪಸ್ಥಿತರಿದ್ದರು. ಶಿಕ್ಷಕ ನಾಗರಾಜ ಹುಲ್ಲಿನಕೊಪ್ಪ ಸ್ವಾಗತಿಸಿದರು. ಸವಣೂರಿನ ಡಾ||ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.ಶಾಂತಾ ಅನಂದ ಇವರಿಂದ ಪ್ರಾರ್ಥನೆ ನಡೆಯಿತು.

ಕಾರ್ಯಕ್ರಮ ನಂತರ ಜ್ಞಾನೇಶ್ವರ ಬಳ್ಳಾರಿ, ಮೆಹಬೂಬ್ ಸಾಬ್ ಹರ್ಲಾಪುರ ಇವರಿಂದ ಸಾಂಸ್ಕೃತಿಕ ಸಂಗೀತ ಸೌರಭ ಜರುಗಿತು. ಕಾರ್ಯಕ್ರಮಕ್ಕೂ ಮುನ್ನ 36 ಅಡಿ ಎತ್ತರದ ಶ್ರೀ ಜಗದ್ಗುರು ರೇಣುಕಾಚಾರ್ಯರ ಮೂರ್ತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಲೋಕಾರ್ಪಣೆ ಮಾಡಿದರು. ನಂತರ ಪುಷ್ಪಾರ್ಚನೆ ಅದ್ದೂರಿಯಾಗಿ ಜರುಗಿತು.

# ವಿದ್ಯುತ್ ಮಾರ್ಗ ಹಾದು ಹೋಗುವ ಜಮೀನಿಗೆ ಪರಿಹಾರ



**ಕೋಲಾರ:** ನರಸಾಪುರ ಕೈಗಾರಿಕ ಪ್ರದೇಶದಲ್ಲಿ ಸರ್ಕಾರವು ಕೆ.ಐ.ಎ.ಡಿ.ಬಿ ವತಿಯಿಂದ 220/66/11 ಕೆ.ವಿ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸುತ್ತಿದ್ದು, ವಿದ್ಯುತ್ ಪ್ರಸರಣ ಮಾರ್ಗಗಳು ಹಾದು ಹೋಗುವ ಜಮೀನಿಗೆ ಒಂದು ಚದರ ಮೀಟರ್‌ಗೆ 4000 ರೂ.ಗಳ ಪರಿಹಾರ ಧನವನ್ನು ನೀಡಲಾವುದೆಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಕಛೇರಿಯಲ್ಲಿ ಜರುಗಿದ ಪರಿಹಾರ ಸಂಧಾನ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಕೋಲಾರ ಜಿಲ್ಲೆಯ ಮಾಲೂರು, ದೊಡ್ಡಸಬ್ಬೇನಹಳ್ಳಿ, ಅಗ್ರಹಾರ, ಶಿವಾರಪಟ್ಟಣ, ಮಿಂಡಹಳ್ಳಿ ಮತ್ತು ಕೋಲಾರ ತಾಲ್ಲೂಕಿನ ಬಂಕನಹಳ್ಳಿ, ಮೈಲಾಂಡಹಳ್ಳಿ ಗ್ರಾಮಗಳಲ್ಲಿ ಕೆ.ಪಿ.ಟಿ.ಸಿ.ಎಲ್. ನಿಂದ ವಿದ್ಯುತ್ ಪ್ರಸರಣ ಮಾರ್ಗಕ್ಕೆ ಈಗಾಗಲೇ ಸ್ಥಳ ಗುರುತಿಸಲಾಗಿದೆ. ವಿದ್ಯುತ್ ಪ್ರಸರಣ ಮಾರ್ಗ ಹಾದು ಹೋದ ಜಮೀನುಗಳ ಮಾಲೀಕರಿಗೆ ಮಾತ್ರ ಭೂ ಪರಿಹಾರವನ್ನು ನೀಡಲಾಗುವುದು ಎಂದರು. ಇತ್ತೀಚಿಗೆ ಕೋಲಾರ ಜಿಲ್ಲೆಯ ಜಮೀನಿನ ನೋಂದಣಿ ಮತ್ತು ಮುದ್ರಾಂಕ ಮೌಲ್ಯವನ್ನು (ಎಸ್. ಆರ್ ವ್ಯಾಲ್ಯು) ಹೆಚ್ಚಿಸಲಾಗಿದೆ. ಕೆ.ಪಿ.ಟಿ.ಸಿ.ಎಲ್ ಮುದ್ರಾಂಕ ಮೌಲ್ಯವನ್ನು ಆಧಾರವಾಗಿ ಇಟ್ಟುಕೊಂಡು ಪರಿಹಾರ ಧನವನ್ನು ನಿಗಧಿಪಡಿಸಲಾಗಿತ್ತು. ಆದರೆ ಜಿಲ್ಲಾಧಿಕಾರಿಗಳು 3600 ರೂ.ಗಳ ಚದರ ಮೀಟರ್ ನಿಗಧಿಗೊಳಿಸಿತ್ತು. ಆದರೆ ರೈತರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು 4000ರೂ.ಗಳಿಗೆ ದರ ನಿಗಧಿಗೊಳಿಸಲಾಗಿದೆ. ಮರಗಳು, ಮನೆ ಮತ್ತಿತರ ಆಸ್ತಿ-ಪಾಸ್ತಿ ನಷ್ಟಕ್ಕೂ ಪರಿಹಾರ ಕೊಡಿಸಲಾಗುವುದು ಎಂದರು.

ಇದು ಸರ್ಕಾರಿ ಯೋಜನೆಯಾಗಿದ್ದು, ಜಿಲ್ಲೆಯ ಅಭಿವೃದ್ಧಿಗೆ ಮತ್ತು ನಿರಂತರ ವಿದ್ಯುತ್ ಸರಬರಾಜಿಗಾಗಿ ಈ ಯೋಜನೆಯನ್ನು ಸಿದ್ಧಪಡಿಸಲಾಗಿದೆ. ಇದಕ್ಕಾಗಿ ರೈತ ಬಾಂಧವರು ತುಂಬ ಹೃದಯದಿಂದ ಸಹಕರಿಸಬೇಕೆಂದರು.

ಸಭೆಯಲ್ಲಿ ಕೆ.ಪಿ.ಟಿ.ಸಿ.ಎಲ್ ಕಾರ್ಯನಿರ್ವಾಹಕ ಇಂಜಿನಿಯರ್ ವೆಂಕಟೇಶಪ್ಪ, ಕೆ.ಐ.ಎ.ಡಿ.ಬಿ ಕಾರ್ಯನಿರ್ವಾಹಕಾಧಿಕಾರಿ ರೂಪೇಶ್ ಹಾಗೂ ಭೂ ಮಾಲೀಕರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಸಂತ ಸೇವಾಲಾಲ್ ಜಯಂತಿ

**ಕೋಲಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೋಲಾರ ಇವರ ಸಂಯುಕ್ತ ಆಶ್ರಯದಲ್ಲಿ ನಡೆಯಲಿರುವ ಶ್ರೀ ಸಂತ ಸೇವಾಲಾಲ್ 285ನೇ ಜಯಂತಿ ಕಾರ್ಯಕ್ರಮವನ್ನು ಫೆಬ್ರವರಿ 15 ರಂದು ಬೆಳಗ್ಗೆ 11.00 ಗಂಟೆಗೆ ಕೋಲಾರದ ಶ್ರೀ ಟಿ. ಚನ್ನಯ್ಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಸನ್ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎಸ್. ಸುರೇಶ್ ಅವರು ನೆರವೇರಿಸುವರು. ಅಧ್ಯಕ್ಷತೆಯನ್ನು ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ|| ಕೊತ್ತೂರು ಜಿ.ಮಂಜುನಾಥ್ ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರು ಮತ್ತು ಸನ್ಮಾನ್ಯ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹಮದ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಸ್.ಮುನಿಸ್ವಾಮಿ, ಬಂಗಾರಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಸ್.ಎನ್ ನಾರಾಯಣಸ್ವಾಮಿ ಕೆ.ಎಂ, ಮಾಲೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ವೈ.ನಂಜೇಗೌಡ, ಕೆ.ಜಿ.ಎಫ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ|| ರೂಪಕಲಾ ಎಂ.ಶಶಿಧರ್, ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಕೆ ವೆಂಕಟಶಿವಾರೆಡ್ಡಿ, ಮುಳಬಾಗಿಲು ವಿಧಾನಸಭಾ ಕ್ಷೇತ್ರದ ಶಾಸಕರಾದ ಸಮೃದ್ಧಿ ಮಂಜುನಾಥ್. ವಿಧಾನ ಪರಿಷತ್ ಶಾಸಕರಾದ ಡಾ|| ವೈ.ಎ ನಾರಾಯಣಸ್ವಾಮಿ, ಇಂಚರ ಗೋವಿಂದರಾಜು, ಚಿದಾನಂದ ಎಂ.ಗೌಡ, ಎಂ.ಎಲ್ ಅನಿಲ್ ಕುಮಾರ್, ಅವರು ಭಾಗವಹಿಸುವರು.

## ನೀರಿನ ಮಿತ ಬಳಕೆ, ನೀರಿನ ಸದ್ಬಳಕೆ ಮಾಡಬೇಕು

**ಮೈಸೂರು:** ನೀರು ಬಹಳ ಅತ್ಯಮೂಲ್ಯವಾದ ವಸ್ತು, ಸಕಲ ಜೀವಿರಾಶಿಗಳಿಗೂ ಅವಶ್ಯಕವಾದದ್ದು, ಹಾಗಾಗಿ ನೀರಿನಮಿತಬಳಕೆ, ನೀರಿನಸದ್ಬಳಕೆ ಮಾಡುವುದು ಬಹಳ ಮುಖ್ಯಎಂದು ಉಪಕೃಷಿನಿರ್ದೇಶಕರಾದ ಡಾ.ಧನಂಜಯಬಿ.ಎನ್.ಅವರು ರೈತರಿಗೆ ಕರೆ ನೀಡಿದರು. ನಾಗನಹಳ್ಳಿಯ ಕೃಷಿ ತರಬೇತಿಕೇಂದ್ರದಲ್ಲಿ ನಡೆದ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿಕೃಷಿಸಿಂಚಾಯಿಯೋಜನೆಯಡಿ''ತೆಂಗುಮತ್ತುಅಡಿಕೆಬೆಳೆಗಳಲ್ಲಿತಳಿಆಯ್ಕೆ,ಆಧುನಿಕಕೃಷಿ ಪದ್ಧತಿಗಳು, ಸೂಕ್ಷ್ಮನೀರಾವರಿಮತ್ತುರಸಾವರಿ ತಾಂತ್ರಿಕತೆಗಳ ಅಳವಡಿಕೆ ಮೂಲಕ ಅಧಿಕಲಾಭ'' ವಿಷಯ ಕುರಿತ ಮೂರು ದಿನಗಳ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದಅವರು, ಫಲವತ್ತಾದ ಮಣ್ಣು ಮತ್ತು ನೀರನ್ನು ನಮ್ಮಮುಂದಿನಪೀಳಿಗೆಗೆಬಿಟ್ಟು ಹೋಗುವುದು ನಮ್ಮೆಲ್ಲರ ಆದ್ಯಕ ರ್ತವ್ಯವಾಗಿದೆ,ವಾಡಿಕೆಗಿಂತ ಕಡಿಮೆಮಳೆ ಬಿದ್ದರೂಸಹಮಳೆ ನೀರಿನಸದ್ಬಳಕೆಯನ್ನು ಹನಿ/ತುಂತುರುನೀರಾವರಿ ಮುಖಾಂತರ ಮಾಡಬಹುದಾಗಿದೆ ಎಂದು ಸಲಹೆ ನೀಡಿದರು. ಇದುಮೂರು ದಿನಗಳ ತರಬೇತಿಕಾರ್ಯಕ್ರಮವಾಗಿದ್ದು,ತೆಂಗು,ಅಡಿಕೆಮತ್ತು ಇನ್ನಿತರ ತೋಟಗಾರಿಕೆ ಬೆಳೆಗಳವೈಜ್ಞಾನಿಕಬೇಸಾಯ, ರೋಗಮತ್ತುಕೀಟಗಳನಿ ಯಂತ್ರಣ,ಸೂಕ್ಷ್ಮನೀರಾವರಿ ಮತ್ತು ರಸಾವರಿ ಪದ್ಧತಿಗಳ ಅಳವವಡಿಕೆ ಬಗ್ಗೆತಿಳಿಸಿಕೊಡಲಾಗುವುದು ಎಂದರು. ಜೈನ್‌ಇರಿಗೇಷನ್ ಸಿಸ್ಟಮ್‌ನತಾಂತ್ರಿಕಸಲಹೆಗಾರರಾದ ನಿರಂಜನ್ ಮಾತನಾಡಿ ತೆಂಗು,ಅಡಿಕೆಮತ್ತುಇತರೆ ತೋಟಗಾರಿಕೆಬೆಳೆಗಳಲ್ಲಿಹನಿನೀರಾವರಿಪದ್ಧತಿಗಳಅಳವಡಿಕೆ, ನಿರ್ವಹಣೆ,ಹನಿನೀರಾವರಿ ಹಾಗೂ ರಸಾವರಿಪದ್ಧತಿ ಅಳವಡಿಕೆಬಗ್ಗೆ ತಿಳಿಸಿಕೊಟ್ಟರು.

## 25ರಂದು ಕಾನ್‌ಸ್ಟೇಬಲ್ ಪರೀಕ್ಷೆಗೆ ವಸ್ತ್ರಸಂಹಿತೆಜಾರಿ

**ಮೈಸೂರು:** ಕರ್ನಾಟಕರಾಜ್ಯಪೊಲೀಸ್ ಇಲಾಖೆಯಲ್ಲಿಖಾಲಿಇರುವಪೊಲೀಸ್‌ಕಾನ್ಸ್‌ಟೇಬಲ್ (ಸಿವಿಲ್) (ಪುರುಷಮತ್ತುಮಹಿಳಾ) (ತೃತೀಯಲಿಂಗಪುರುಷಮತ್ತುಮಹಿಳಾ)ಹಾಗೂಸೇವಾನಿರತಬ್ಯಾಕ್‌ಲಾಗ್-1137ಹುದ್ದೆಗಳಿಗೆಲಿಖಿತಪರೀಕ್ಷೆಯನ್ನುಫೆ.25ರಂದುಬೆಳಗ್ಗೆ11ರಿಂದ12:30ಗಂಟೆಯವರೆಗೆರಾಜ್ಯಾದ್ಯಂತ ನಡೆಸಲಾಗುತ್ತಿದ್ದು,ಅರ್ಹರಿರುವ ಅಭ್ಯರ್ಥಿಗಳಿಗೆಮುಂದಿನದಿನಗಳಲ್ಲಿಕರೆಪತ್ರದಬಗ್ಗೆಎಸ್‌ಎಂಎಸ್‌ಮೂಲಕಮಾಹಿತಿಯನ್ನುನೀಡಿಕರೆಪತ್ರದಲಿಂಕ್‌ಅನ್ನುಕಳುಹಿಸಲಾಗುವುದು. ಲಿಖಿತ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳುವಸ್ತ್ರಸಂಹಿತೆಯನ್ನುಜಾರಿಮಾಡಲಾಗಿದೆ. ಪುರುಷ ಮತ್ತು ತೃತೀಯಲಿಂಗಪುರುಷಅಭ್ಯರ್ಥಿಗಳುಅರ್ಧತೋಳಿನಶರ್ಟ್‌ಗಳನ್ನುಕಡ್ಡಾಯವಾಗಿಧರಿಸುವುದುಹಾಗೂಸಾಧ್ಯವಾದಷ್ಟುಕಾಲರ್‌ರಹಿತಶರ್ಟ್‌ಗಳನ್ನುಧರಿಸುವುದು.ಜಿಪ್‌ಪ್ಯಾಕೆಟ್‌ಗಳು,ದೊಡ್ಡಬಟನ್‌ಗಳುಇರುವಶರ್ಟ್‌ಗಳನ್ನು ಧರಿಸುವಂತಿಲ್ಲ. ಜೀನ್ಸ್‌ಪ್ಯಾಂಟ್‌ಮತ್ತುಹೆಚ್ಚಿನಜೇಬುಗಳಿರುವಪ್ಯಾಂಟ್‌ಗಳನ್ನುಧರಿಸುವಂತಿಲ್ಲ.ಪರೀಕ್ಷಾಕೇಂದ್ರದೊಳಗೆಶೂಗಳನ್ನುನಿಷೇಧಿಸಲಾಗಿದ್ದು,ಅಭ್ಯರ್ಥಿಗಳು ತೆಳುವಾದ ಅಡಿಭಾಗವಿರುವ ಪಾದರಕ್ಷೆಗಳನ್ನು ಧರಿಸ್ದುದು. ಕುತ್ತಿಗೆ ಸುತ್ತಾ ಯಾವುದೇ ಲೋಹದ ಆಭರಣಗಳು ಅಥವಾ ಉಂಗುರ ಮತ್ತು ಕಡಗಳನ್ನುಧರಿಸುವುದು ನಿಷೇಧಿಸಲಾಗಿದೆ. ಮಹಿಳಾ ಮತ್ತು ತೃತೀಯ ಲಿಂಗ ಮಹಿಳಾಅಭ್ಯರ್ಥಿಗಳು ವಿಸ್ತಾರವಾದ ಕಸೂತಿ,ಹೂಗಳು,ಬ್ರೂಚ್‌ಗಳು ಅಥವಾ ಬಟನ್‌ಗಳು ಹೊಂದಿರುವ ಬಟ್ಟೆಗಳನ್ನುಧರಿಸುವುದು ನಿಷೇಧಿಸಲಾಗಿದೆ. ಪೂರ್ಣತೋಳಿನ ಬಟ್ಟೆಗಳನ್ನುಹಾಗೂ ಜೀನ್ಸ್ ಪ್ಯಾಂಟ್ ಧರಿಸಬಾರದು, ಅರ್ಧತೋಳಿನ ಬಟ್ಟೆಗಳನ್ನುಅವರಿಗೆ ಮುಜುಗರವಾಗದಂತೆ ಅಭ್ಯರ್ಥಿಗಳು ಧರಿಸುವಂತೆ ನಿರ್ದೇಶಿಸಲಾಗಿದೆ ಎಂದುಪೊಲೀಸ್ ಅಧೀಕ್ಷಕರುಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಇಒ ಹೇಳುವುದನ್ನು ಕೇಳುವುದಕ್ಕೆ ಮಾತ್ರ ಗೂಗಲ್ ಮೀಟ್



ಗ್ರಾಪಂ ಸದಸ್ಯ ಪ್ರಶಾಂತ್ ಆರೋಪ

**ಹುಳಿಯಾರು:** ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹೇಳುವುದನ್ನು ಕೇಳುವುದಕ್ಕೆ ಮಾತ್ರ ಗೂಗಲ್ ಮೀಟ್ ಆಯೋಜಿಸಿದ್ದು ಗ್ರಾಪಂ ಸದಸ್ಯರು ತಮ್ಮ ಸಲಹೆ, ಸೂಚನೆ, ಬೇಡಿಕೆ, ದೂರು ಸಲ್ಲಿಸಲು ಅವಕಾಶ ಇಲ್ಲದ ಪ್ರಜಾಪ್ರಭುತ್ವ ವಿರೋಧಿಯಾಗಿದೆ ಎಂದು ದೊಡ್ಡಎಣ್ಣೇಗೆರೆ ಗ್ರಾಪಂ ಸದಸ್ಯ ಪ್ರಶಾಂತ್ ಆರೋಪಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು ವಿವಿಧ ಯೋಜನೆಗಳ ಕುರಿತು ಸಿಇಒ ಗೂಗಲ್ ಮೀಟ್ ಮೂಲಕ ಒಂದು ದಿನದ ಕಾರ್ಯಗಾರ ಫೆ.14 ರಂದು ಆಯೋಜಿಸಿದ್ದಾರೆ. ಈ ಹಿಂದೆ ನಡೆದ ಎಲ್ಲಾ ಗೂಗಲ್ ಮೀಟ್‌ನಲ್ಲೂ ಗ್ರಾಪಂ ಸದಸ್ಯರಿಗೆ ತಮ್ಮ ಅನಿಸಿಕೆ ಹಂಚಿಕೊಳ್ಳಲು ಅವಕಾಶ ಇಲ್ಲದೆ ಅವರು ಮಾತನಾಡುವುದನ್ನು ಕೇಳಿಸಿಕೊಳ್ಳಲು ಮಾತ್ರ ಸೀಮಿತವಾಗಿತ್ತು. ಇದರಿಂದ ಗ್ರಾಪಂ ಸದಸ್ಯರ ಒಂದು ದಿನದ ಸಮಯ ವ್ಯರ್ಥ ಬಿಟ್ಟರೆ ಗ್ರಾಮ ಅಭಿವೃದ್ಧಿಗೆ ದೃಷ್ಟಿಯಲ್ಲಿ ಯಾವುದೇ ಪ್ರಯೋಜವಿಲ್ಲ. ಹೀಗೆ ರಾಜ ದರ್ಭಾರ್ ರೀತಿ ಮೀಟಿಂಗ್ ಮಾಡುವುದ ಬಿಟ್ಟು ಸಿಇಒ ಹೇಳಬೇಕೆಂದಿರುವುದನ್ನು ರೆಕಾರ್ಡ್ ಸೋಷಿಯಲ್ ಮೀಡಿಯಾದಲ್ಲಿ ಹಾಕಿದರೆ ನಮಗೆ ಬಿಡುವಾದಾಗ ಕೇಳಿಸಿಕೊಳ್ಳುತ್ತೇವೆ. ಇದರಿಂದ ಎಲ್ಲರ ಅತ್ಯಮೂಲ್ಯ ಸಮಯವೂ ಉಳಿಯುತ್ತದೆ ಎಂದು ಸಲಹೆ ನೀಡಿದ್ದಾರೆ. ಎಲ್ಲಾ ಅಧಿಕಾರಿಗಳು ಜನಸ್ನೇಹಿಯಾಗಿರಲಿ ಎಂದು ಸರ್ಕಾರ ಹೇಳುತ್ತಿದ್ದರೂ ಸಹ ತುಮಕೂರು ಸಿಇಒ ಜನ ವಿರೋಧಿ ಆಗಿದ್ದಾರೆ. ಸಾಮಾನ್ಯ ಜನರಿರಲಿ ಗ್ರಾಪಂ ಸದಸ್ಯರೇ ದೂರವಾಣಿ ಕರೆ ಮಾಡಿದರೂ ಸ್ವೀಕರಿಸುವುದಿಲ್ಲ. ನಾವು ಕರೆ ಮಾಡಿದಾಗ ಬಿಝಿ ಇದ್ದರೆ ನಂತರವಾದರೂ ಕಾಲ್ ಮಾಡಿ ಸಮಸ್ಯೆ ಆಲಿಸಬಹುದಾದರೂ ಇವರು ಮಾತ್ರ ಸ್ಪಂಧಿಸುವುದಿಲ್ಲ. ಸೋಷಿಯಲ್ ಮೀಡಿಯ, ಪತ್ರಿಕೆಗಳಲ್ಲಿ ಗ್ರಾಪಂ ಸಮಸ್ಯೆ, ಅವ್ಯವಹಾರ ಬಗ್ಗೆ ದೂರು ಬಂದರೂ ಸಹ ಬಗೆಹರಿಸುವ ಗೋಜಿಗೆ ಹೋಗುವುದಿಲ್ಲ. ನರೇಗಾ ಕುಂಟುಂತ ಸಾಗಿದೆ, ಕುಡಿಯುವ ನೀರಿನ ಹಾಹಾಕಾರ ಹೆಚ್ಚಾಗಿದೆ. ಆದರೂ ಗ್ರಾಪಂಗಳಿಗೆ ಭೇಟಿ ಕೊಟ್ಟು ಸಮಸ್ಯೆ ಅರಿಯುವುದಿಲ್ಲ. ಎಲ್ಲೋ ಕುಳಿತು ಅಧಿಕಾರ ಮಾಡುವ ಇವರು ತಮ್ಮಲ್ಲಿರುವ ರಾಜಪ್ರಭುತ್ವ ಧೋರಣೆಯಿಂದ ಹೊರ ಬಂದು ಪ್ರಜಾಪ್ರಭುತ್ವದ ಗುಣ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

### ಅಧಿಕಾರಿಗಳಿಗೆ ಡಾ. ಹೆಚ್. ಎಲ್. ನಾಗರಾಜು ಸಲಹೆ

## ಆಹಾರದಲ್ಲಿ ವಿಷಕಾರಿ ಟೇಸ್ಟಿಂಗ್ ಪೌಡರ್, ಇನ್ನಿತರೆ ವಸ್ತು ಸೇರದಂತೆ ಎಚ್ಚರಿಕೆ ವಹಿಸಿ



**ಮಂಡ್ಯ:** ಆಹಾರ ಮಾರಾಟಗಾರರು ಹೆಚ್ಚಿನ ಲಾಭ ಅಥವಾ ಮಾರಾಟ ಮಾಡಬೇಕು ಎಂಬ ದುರಾಶೆಯಿಂದ ಆಹಾರದಲ್ಲಿ ವಿಷಕಾರಿ ಟೇಸ್ಟಿಂಗ್ ಪೌಡರ್, ಕಲರ್ ಏಜೆಂಟ್ಸ್ ಗಳನ್ನು ಬಳಸುತ್ತಿದ್ದಾರೆ. ಆಹಾರ ಸುರಕ್ಷತಾ ಕಚೇರಿ ಅಧಿಕಾರಿಗಳು ಅನಿರೀಕ್ಷಿತ ದಾಳಿ ನಡೆಸಿ ಕ್ರಮ ಕೈಗೊಳ್ಳುವಂತೆ ಡಾ. ಹೆಚ್. ಎಲ್. ನಾಗರಾಜು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದರು. ಜಿಲ್ಲೆಯಲ್ಲಿ ಕೆಲವು ಬೆಲ್ಲ ತಯಾರಿಕೆಯ ಆಲೆಮನೆಗಳಲ್ಲಿ ಹಾನಿಕಾರಕ ರಾಸಾಯನಿಕಗಳನ್ನು ಬಳಸುತ್ತಿದ್ದಾರೆ. ಬ್ಲಿಚಿಂಗ್ ಏಜೆಂಟ್ಸ್ ಸಫೋಲೆಟ್ ಸೋಡಿಯಂ ಬೈ ಕಾರ್ಬೋನೆಟ್, ಪಾಸ್ಪೋರಿಕ್ ಆಸೀಡ್, ಕ್ಯಾಲ್ಸಿಯಂ ಹೈಡ್ರಾಕ್ಸೈಡ್ ಕಲರಿಂಗ್ ಏಜೆಂಟ್ಸ್ ಬಳಸುವುದು ಕಂಡುಬರುತ್ತಿದೆ. ಇದನ್ನು ತಡೆಯಲು ಜಿಲ್ಲೆಯ ಎಲ್ಲಾ ಬೆಲ್ಲಾ ತಯಾರಿಕಾ ಘಟಕಗಳಿಗೆ ಕಾರ್ಯಾಗಾರ ಮಾಡಿ ಮಾಹಿತಿ ನೀಡಿ. ಇದರೊಂದಿಗೆ ದಾಳಿಗಳನ್ನು ಹೆಚ್ಚಿಸಿ ಕ್ರಮ ಕೈಗೊಳ್ಳಿ ಎಂದರು.

ಇತ್ತೀಚಿನ ದಿನಗಳಲ್ಲಿ ಆಹಾರಗಳು ಕಲುಷಿತಗೊಂಡು ವಿಷಕಾರಿ ಅಂಶಗಳಿಂದ ಕೂಡಿದ್ದು, ಜನಸಾಮಾನ್ಯರು ಹಲವಾರು ಅನಾರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಆಹಾರ ದೇಹದ ಶಕ್ತಿ ವೃದ್ದಿಸಬೇಕು ಆದರೆ ಇಂದು ಜನರು ಸುರಕ್ಷಿತವಲ್ಲದ ಆಹಾರ ಸೇವಿಸಿ ಕ್ಯಾನ್ಸರ್, ಮುಂತಾದ ರೋಗಗಳಿಂದ ಬಳಲುತ್ತಿದ್ದಾರೆ. ಆಸ್ಪತ್ರೆಗಳ ಮುಂದೆ ಚಿಕಿತ್ಸೆಗಾಗಿ ಜನರು ತುಂಬಿ ಹೋಗುತ್ತಿದ್ದಾರೆ ಎಂದರು

ಆಹಾರ ಪದಾರ್ಥ ಮಾರಾಟ ಮಾಡುವ ಬೀದಿಬದಿ ವ್ಯಾಪಾರಿಗಳ ಸಂಖ್ಯೆ ಹೆಚ್ಚಾಗಿದ್ದು, ಅವರ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯಡಿ ನೋಂದಣಿ ಮಾಡಿಕೊಳ್ಳಲು ಹಾಗೂ ಅದರ ನಿಯಮಗಳ ಬಗ್ಗೆ ತಿಳಿಸಬೇಕು ಎಂದರು ಆಹಾರ ಪದಾರ್ಥಗಳ ತಯಾರಿಕೆ/ವಿತರಣೆ/ ಶೇಖರಣೆ ಮಾಡುವ ಎಲ್ಲಾ ಆಹಾರ ವ್ಯಾಪಾರಸ್ಥರು (ಫುಡ್ ಬಿಸಿನೆಸ್ ಆಪರೇಟರ್) ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟತೆ (ಈಖಖ ಂಛಿಣ- 2006 ಸೆಕ್ಷನ್ - 31) ಕಾಯ್ದೆಯಡಿಯಲ್ಲಿ ಕಡ್ಡಾಯವಾಗಿ ಪರವಾನಗಿ/ನೋಂದಣಿಯನ್ನು ಪಡೆಯಬೇಕು. ಹಾಪ್ ಕಾಮ್ಸ್ ಅಂಗಡಿಗಳು ಕಡ್ಡಾಯವಾಗಿ ನೋಂದಣಿ ಮಾಡಿಸಬೇಕು ಎಂದರು.

ನ್ಯಾಯಬೆಲೆ ಅಂಗಡಿಗಳು, ಅಕ್ಷರ ದಾಸೋಹ ಕಾರ್ಯಕ್ರಮದಡಿ ಕಾರ್ಯನಿರ್ವಹಿಸುವ ಎಲ್ಲಾ ಶಾಲೆಗಳು, ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳು, ಎಲ್ಲಾ ಸರ್ಕಾರಿ ಅಥವಾ ಖಾಸಗಿ ಉಗ್ರಾಣಗಳು, ಹಣ್ಣಿನ ವಿತರಕರು, ಮಾರಾಟಗಾರರು ಹಾಗೂ ವ್ಯಾಪಾರಿಗಳು, ರಸ್ತೆ ಬದಿ ವ್ಯಾಪಾರಿಗಳು, ಮಾಂಸ ಮಾರಾಟಗಾರರು, ಹೋಟೆಲ್ಗಳು, ರೆಸ್ಟೋರೆಂಟ್, ಕ್ಯಾಟರಿಂಗ್ ಮಾಡುವವರು ಹಾಗೂ ಕ್ಯಾಂಟಿನ್‌ಗಳು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ-2006ರ ಕಾಯ್ದೆಯಡಿ ಕಡ್ಡಾಯವಾಗಿ ನೋಂದಣಿಯನ್ನು ಪಡೆಯಬೇಕು ಎಂದರು.

ನಗರಸಭೆ ಪೌರಾಯುಕ್ತರು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಅಧಿಕಾರಿಗಳು ತಮ್ಮ ಕಛೇರಿಯಿಂದ ಆಹಾರ ಉದ್ದಿಮೆಗಳಿಗೆ ಅನುಮತಿ ಉದ್ದಿಮೆ ಪರವಾನಗಿ ನೀಡುವ ಮೊದಲು ಈಖಖಂಖ ನೋಂದಣಿ ಕಡ್ಡಾಯಗೊಳಿಸಲು ಸೂಚಿಸಿದರು.

ಸಾರ್ವಜನಿಕ ಶಿಕ್ಷಣ ಇಲಾಖೆಯು ತಮ್ಮ ವ್ಯಾಪ್ತಿಯಲ್ಲಿ ಬರುವ ಹಾಸ್ಟೆಲ್ ಹಾಗೂ ಅಕ್ಷರ ದಾಸೋಹ ಶಾಲೆಗಳಿಗೆ ಹಾಗೂ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಂ.ಎಸ್.ಪಿ.ಸಿ, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಹಾಸ್ಟೆಲ್ ಹಾಗೂ ಶಾಲೆಗಳಿಗೆ, ಕಡ್ಡಾಯವಾಗಿ ನೋಂದಣಿ ಕಡ್ಡಾಯಗೊಳಿಸಬೇಕು ಎಂದರು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಇಲಾಖೆಯ ಕೃಷಿ ಉತ್ಪನ್ನ ಮಾರಾಟಗಾರರು, ಉಗ್ರಾಣಗಳು ಹಾಗೂ ಮತ್ತು ಸಹಾಯಕ ಔಷಧ ನಿಯಂತ್ರಕರ ವ್ಯಾಪ್ತಿಯಲ್ಲಿ ಬರುವ ಔಷದ ಅಂಗಡಿಗಳಿಗೆನೋಂದಣಿ ಮಾಡಿಸುವುದು ಕಡ್ಡಾಯ ಎಂದರು.

ಅನಧಿಕೃತ ಆಹಾರ ಘಟಕಗಳಿಗೆ ಅಂಕಿತ ಅಧಿಕಾರಿಗಳು ಮತ್ತು ಅವರ ತಂಡ ದಾಳಿ ನಡೆಸುವ ಸಂದರ್ಭದಲ್ಲಿ ಪೊಲೀಸ್ ಇಲಾಖೆಯ ಸಿಬ್ಬಂದಿಗಳ ಸಹಕಾರ ಮತ್ತು ರಕ್ಷಣೆ ನೀಡುವಂತೆ ಕುರಿತು ಚರ್ಚಿಸಿದರು. ಅನಧಿಕೃತ ಪ್ಯಾಕೇಜ್ಡ್ ಕುಡಿಯುವ ನೀರಿನ ತಯಾರಿಕೆ/ವಿತರಣೆ/ಮಾರಾಟವನ್ನು ರಾಜ್ಯ ಉಚ್ಚ ನ್ಯಾಯಾಲಯವು ನಿಷೇಧಿಸಿರುವ ಹಿನ್ನೆಲೆಯಲ್ಲಿ, ಪ್ಯಾಕೇಜ್ಡ್ ಕುಡಿಯುವ ನೀರಿನ ತಯಾರಿಕೆ/ ವಿತರಣೆ/ ಮಾರಾಟ ಮಾಡುವವರು ಕಡ್ಡಾಯವಾಗಿ ಃಖಖ ಸಂಸ್ಥೆಯಿಂದ ಇಸಿ ಪ್ರಮಾಣ ಪತ್ರವನ್ನು ಹಾಗೂ ಈಖಖಂಖ ನಿಂದ ಪರವಾನಗಿ ಪತ್ರವನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು ಎಂದರು.

ಮಂಡ್ಯ ಜಿಲ್ಲೆಯಲ್ಲಿ ಒಟ್ಟು 12 ಪ್ಯಾಕೇಜ್ಡ್ ಕುಡಿಯುವ ನೀರಿನ ಘಟಕಗಳು ಃಖಖ ಪ್ರಮಾಣ ಪತ್ರ ಹಾಗೂ ಈಖಖಂಖ ಪರವಾನಗಿ ಪಡೆದು ಕಾರ್ಯ ನಿರ್ವಹಿಸುತ್ತಿವೆ. 03 ಅನಧಿಕೃತ ಪ್ಯಾಕೇಜ್ಡ್ ಕುಡಿಯುವ ನೀರಿನ ಘಟಕಗಳನ್ನು ಮುಚ್ಚಿಸಲಾಗಿದೆ. 06 ಪ್ಯಾಕೇಜ್ಡ್ ಕುಡಿಯುವ ನೀರಿನ ಘಟಕಗಳು ಸ್ವಯಂ ಮುಚ್ಚಲ್ಪಟ್ಟಿವೆ ಎಂದು ಜಿಲ್ಲಾ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಧಿಕಾರಿ ಡಾ. ಕೆ. ಆರ್. ಶಶಿಧರ್ ಅವರು ತಿಳಿಸಿದರು.



ಯೋಗಸಾಧಕ ಯೋಗಿ ಶ್ರೀನಿವಾಸ ಅರ್ಕಗೆ ಅಭಿನಂದನೆ

ಅರ್ಕಧಾಮದಲ್ಲಿ ನೂತನವಾಗಿ ಅರ್ಕ ಮಹಾಗಣಪತಿ ದೇವಾಲಯದ ಪ್ರತಿಷ್ಠಾಪನೆ ನಡೆಯಿತು. ಈ ಸಂದರ್ಭದಲ್ಲಿ ಸ್ಥಾಪಕರಾದ ಅಂತರರಾಷ್ಟ್ರೀಯ ಯೋಗಸಾಧಕ ಯೋಗಿ ಶ್ರೀನಿವಾಸ ಅರ್ಕರವರನ್ನು ಅಭಿನಂದಿಸಲಾಯಿತು. ಚಿತ್ರದಲ್ಲಿ ರಾಘವೇಂದ್ರ ಪ್ರತಿಷ್ಠಾನದ ಅಧ್ಯಕ್ಷ ಎಸ್.ನಾಗರಾಜ, ವಕೀಲರಾದ ಬಾಲು, ಸಮಾಜ ಸೇವಕ ಸಿದ್ದೇಗೌಡ ಮತ್ತು ರಾಧಾಕೃಷ್ಣ ಅವರನ್ನು ಕಾಣಬಹುದು.



## ಸಂವಿಧಾನ ಜಾಗೃತಿ ಜಾಥಾ ಸಂಚಾರ ರಥಕ್ಕೆ ಸ್ವಾಗತ

**ರಾಮನಗರ:** ಮಾಗಡಿ ತಾಲೂಕಿನ ಸಾತನೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಸಂಚರಿಸುತ್ತಿರುವ ಸಂವಿಧಾನ ಜಾಗೃತಿ ಜಾಥವನ್ನು ಫೆ. 13ರ ಮಂಗಳವಾರ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಅವರು ಸ್ವಾಗತಿಸಿದರು.

ಮಾಗಡಿ ತಾಲ್ಲೂಕಿನ ತಹಶೀಲ್ದಾರರಾದ ಸುರೇಂದ್ರ ಮೂರ್ತಿ, ತಾಲ್ಲೂಕು ಮಟ್ಟದ ಅಧಿಕಾರಿಗಳು, ಜಿಲ್ಲಾ ಜಾಗೃತಿ ಸಮಿತಿಯ ಸದಸ್ಯರುಗಳು ಹಾಗೂ ಸಮುದಾಯದ ಮುಖಂಡರು, ಸಂಘ-ಸಂಸ್ಥೆಯ ಪದಾಧಿಕಾರಿಗಳಿದ್ದರು.

ನಂತರ ಸಂವಿಧಾನ ಜಾಗೃತಿ ಜಾಥಾವು ಆಗಲಕೋಟೆ ಗ್ರಾಮ ಪಂಚಾಯಿತಿಯಲ್ಲಿ ಸಂಚರಿಸಿತು. ಇದೇ ಸಂದರ್ಭದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ಪ್ರತಿಜ್ಞಾ ವಿಧಿ ವಾಚಿಸಿದರು.

# ಸರ್ಕಾರಿ ಶಾಲೆಗಳನ್ನು ಉಳಿಸಲೆಂದೆ ಎಸ್‌ಡಿಎಂಸಿ ರಚನೆ

**ಹುಳಿಯಾರು:** ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಲೆಂದೆ ಸರ್ಕಾರ ಪೋಷಕರನ್ನೊಳಗೊಂಡ ಎಸ್‌ಡಿಎಂಸಿ ರಚನೆ ಮಾಡಲಾಗಿದೆ. ತಮ್ಮ ಮಕ್ಕಳು ಓದುತ್ತಿರುವ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣಕ್ಕೆ ಒತ್ತು ನೀಡಿ ಎಸ್‌ಡಿಎಂಸಿ ಕ್ರಿಯಾಶೀಲವಾಗಿ ಕೆಲಸ ಮಾಡಿದರೆ ಯಾರೂ ದೂರದೂರಿನ ಖಾಸಗಿ ಶಾಲೆಗೆ ಮಕ್ಕಳನ್ನು ಕಳುಹಿಸುವುದಿಲ್ಲ. ಈ ನಿಟ್ಟಿನಲ್ಲಿ ಎಚ್.ಮೇಲನಹಳ್ಳಿ ಗ್ರಾಮಸ್ಥರು ತಮ್ಮೂರ ಶಾಲೆ ಉಳಿಸಲು ಟೊಂಕಕಟ್ಟಿ ನಿಂತಿರುವುದು ಮಾದರಿಯ ನಡೆಯಾಗಿದ್ದು ಎಲ್ಲಾ ಊರಿನಲ್ಲೂ ಈ ರೀತಿ ಕೆಲಸ ಮಾಡಿದರೆ ಸರ್ಕಾರಿ ಶಾಲೆ ಉಳಿಯುವುದರಲ್ಲಿ ಅನುಮಾನವಿಲ್ಲ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು. ಹುಳಿಯಾರು ಹೋಬಳಿಯ ಎಚ್.ಮೇಲನಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ಅಮೃತ ಮಹೋತ್ಸವದ ಅಂಗವಾಗಿ ಏರ್ಪಡಿಸಿದ್ದ ಹಳೆ ವಿದ್ಯಾರ್ಥಿಗಳ ಸಮಾಗಮ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಎಚ್.ಮೇಲನಹಳ್ಳಿ ಶಾಲೆಗೆ ಸರ್ಕಾರದಿಂದ ಸಿಗಬಹುದಾದ ಎಲ್ಲಾ ಮೂಲ ಸೌಕರ್ಯಗಳನ್ನು ಕೊಡಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ. ಇಲ್ಲಿನ ಜನರ ಓಡಾಟಕ್ಕೆ ಸಾರಿಗೆ ವ್ಯವಸ್ಥೆ ಕಲ್ಪಿಸುತ್ತೇನೆ. ಬಿಎಸ್‌ಎನ್‌ಎಲ್ ಅಧಿಕಾರಿಗಳೊಂದಿಗೆ ಮಾತನಾಡಿ ನೆಟ್‌ವರ್ಕ ಸಿಗುವಂತೆ ಮಾಡಿಕೊಡುತ್ತೇನೆ. ಮೈನಿಂಗ್ ಹಣದಲ್ಲಿ ಶಾಲಾ ಕಟ್ಟಡ ನಿರ್ಮಿಸುವ ಜೊತೆಗೆ ಅಭಿವೃದ್ಧಿ ಕೆಲಸಗಳನ್ನು ಹಮ್ಮಿಕೊಳ್ಳುತ್ತೇನೆ ಎಂದರಲ್ಲದೆ ಜನರು ಕಛೇರಿಗಳಿಗೆ ಅಲೆಯುವುದನ್ನು ತಪ್ಪಿಸುವ ಜೊತೆಗೆ ಭ್ರಷ್ಟಾಚಾರ ರಹಿತ ಕೆಲಸಕಾರ್ಯಗಳನ್ನು ಮಾಡಿಸಿಕೊಳ್ಳಲೆಂದು ಪ್ರತಿ ಸೋಮವಾರ ಜನಸ್ಪಂಧನ ಕಾರ್ಯಕ್ರಮ ಮಾಡಲಾಗುತ್ತಿದೆ. ಪೌತಿ ಖಾತೆ ಆಂದೋಲನ ಮಾಡಲಾಗುತ್ತಿದೆ ಇದರ ಸದ್ಬಳಕೆಯನ್ನು ಎಲ್ಲರೂ ಪಡೆಯುವಂತೆ ತಿಳಿಸಿದರು. ಬಿಇಒ ಸಿ.ಎಸ್.ಕಾಂತರಾಜು, ನಿವೃತ್ತ ಜಿಲ್ಲಾಧಿಕಾರಿ ಶ್ರೀರಂಗಯ್ಯ, ಹಿರಿಯರಾದ ನಿಂಗಣ್ಣ, ಹೊನ್ನಜ್ಜ, ಹನುಮಂತಪ್ಪ, ಹುಚ್ಚಮ್ಮ, ಕಾಟಪ್ಪ, ಸಾಕಮ್ಮ, ಮುರುಡಪ್ಪ, ರಾಮಯ್ಯ, ಗ್ರಾಮಸ್ಥರಾದ ಬಸವರಾಜು, ತಾಪಂ ಮಾಜಿ ಸದಸ್ಯ ಮೋಹನ್, ಲಾಯರ್ ಸದಾಶಿವು, ಎಂ.ಎನ್.ಕಿರಣ್, ಚಿಕ್ಕಕರಿಯಪ್ಪ, ಧನಂಜಯ, ನಾಗರಾಜು, ಎಂ.ಎಚ್.ರಾಜಣ್ಣ, ರಾಮಚಂದ್ರಯ್ಯ, ಎಸ್.ಮನೋಹರ್, ಕಿರಣ್, ಲಿಂಗದೇವರು, ಎಂ.ವಿ.ಮೋಹನ್, ಪರಮೇಶ್ ಮತ್ತಿತರರು ಇದ್ದರು.



# ಭಾರತಾಂಬೆಯ ಕನಸು ನನಸು ಮಾಡಲು ಆದರ್ಶ ವಿದ್ಯಾರ್ಥಿಗಳ ಅವಶ್ಯಕತೆ ಇದೆ



**ಪಿರಿಯಾಪಟ್ಟಣ:** ಭಾರತಾಂಬೆಯ ಕನಸುಗಳನ್ನು ನನಸು ಮಾಡಲು ಸಂಸ್ಕಾರಯುತ, ಹೃದಯವಂತ, ಸರ್ವಧರ್ಮ ಸಮಭಾವ, ಸಮಚಿತ್ತದ ಆದರ್ಶ ವಿದ್ಯಾರ್ಥಿಗಳ ಅವಶ್ಯಕತೆ ಅತ್ಯಗತ್ಯ ಎಂದು ತಹಸೀಲ್ದಾರ್ ಕುಂಜಿ ಅಹಮದ್ ತಿಳಿಸಿದರು.

ತಾಲೂಕಿನ ಬೆಟ್ಟದಪುರ ಸರ್ಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು. ಮಕ್ಕಳು ಕಲಿಯುವ ಹಂತದಲ್ಲಿ ಆದರ್ಶ ಗುರಿಗಳನ್ನು ಇಟ್ಟುಕೊಂಡು ಸರಿದಾರಿಯಲ್ಲಿ ಮುನ್ನಡೆಯುವ ಮೂಲಕ ಸ್ವಾಭಿಮಾನಿಯುತ ಮೇರು ಸದೃಶವಾದ ಭವಿಷ್ಯ ರೂಪಿಸಿಕೊಳ್ಳಬೇಕು. ಬುದ್ಧ, ಬಸವೇಶ್ವರ, ಅಂಬೇಡ್ಕರ್, ಮಹಾತ್ಮಗಾಂಧಿ, ವಿವೇಕಾನಂದ, ಕುವೆಂಪು, ಮುಂತಾದ ಸಮಾಜ ಸುಧಾರಕರ ಜೀವನ ಕೃತಿಗಳನ್ನು ತಳಸ್ಪರ್ಶಿ ಅಧ್ಯಯನ ನಡೆಸಿ, ಅವರ ಗುಣಗಳನ್ನು ಮೈಗೂಡಿಸಿಕೊಳ್ಳಬೇಕೆಂದರು.

ಆಧುನಿಕ ಜಗತ್ತು ಅತ್ಯಂತ ವೇಗದಲ್ಲಿ ಮುನ್ನಡೆಯುತ್ತಿದ್ದು ವಿಜ್ಞಾನ, ತಂತ್ರಜ್ಞಾನ,ಕೃಷಿ, ವೈದ್ಯಕೀಯ, ಕೈಗಾರಿಕೆ, ಶಿಕ್ಷಣ ಮುಂತಾದ ಕ್ಷೇತ್ರದಲ್ಲಿ ನಮ್ಮ ದೇಶದಲ್ಲಿ ಮಹತ್ತರ ಸಾಧನೆಗಳು ಆಗುತ್ತಿದ್ದು ತಮ್ಮ ಆಸಕ್ತದಾಯಕ ಕ್ಷೇತ್ರಗಳನ್ನು ಆಯ್ಕೆ ಮಾಡಿಕೊಂಡು ಮಹತ್ತರ ಸಾಧನೆ ಮಾಡಬೇಕು. ತಂದೆ, ತಾಯಿ, ಗುರುಹಿರಿಯರು ಮಕ್ಕಳ ಬಗ್ಗೆ ಅಪಾರ ನಂಬಿಕೆ ಇಟ್ಟಿದ್ದು ಆ ನಂಬಿಕೆಗೆ ಅಪಚಾರ ಎಸಗುವ ಕಾರ್ಯವನ್ನು ಮಾಡದೆ ಎತ್ತರದ ಬದುಕು ಕಟ್ಟಿಕೊಳ್ಳಬೇಕು ಎಂದರು. ಕಾರ್ಯಕ್ರಮದಲ್ಲಿ ಕಸಾಪ ನಿಕಟಪೂರ್ವ ಅಧ್ಯಕ್ಷ ಗೊರಹಳ್ಳಿ ಜಗದೀಶ್, ಉಪ ಪ್ರಾಂಶುಪಾಲ ಮಂಜೇಗೌಡ, ಶಿಕ್ಷಕರಾದ ಅಮಿತಾ, ನಿಂಗರಾಜ್, ಸೋಮಯ್ಯ, ಮೋಹನ್ ಕುಮಾರ್, ರೂಪಕುಮಾರಿ, ಮಮತಾ ನಾಯಕ್, ಜ್ಯೋತಿ, ಜ್ಯೋತಿ ಬಿ. ಎನ್ ,ಕಾವ್ಯ, ಪ್ರೇಮ, ಕಾಂತರಾಜ್, ಕಿರಣ್, ಕಾವ್ಯಶ್ರೀ, ಅವಿನಾಶ್, ಇಂದ್ರಮ್ಮ, ಮಹೇಶ್ವರಿ, ಮಕ್ಕಳು ಹಾಜರಿದ್ದರು.

# ಸಂಜೆ ಟಿಪ್ಸ್



## ಅಡುಕಲೆಯಿಂದ ಜಯನಗರ 4ನೇ ಬ್ಲಾಕ್ ನಲ್ಲಿ ತನ್ನ ಫ್ಲಾಗ್ ಶಿಪ್ ಮಳಿಗೆ

ಕರ್ನಾಟಕದ ಶ್ರೀಮಂತ ತಿನಿಸಿನ ಪರಂಪರೆಯನ್ನು ಬಿಂಬಿಸುವ ಬ್ರಾಂಡ್ ಅಡುಕಲೆ ತನ್ನ ಫ್ಲಾಗ್ ಶಿಪ್ ಮಳಿಗೆ ಮತ್ತು ಎಕ್ಸ್ ಪೀರಿಯೆನ್ಸ್ ಝೋನ್ ಓಲ್ಡ್ ಬೆಂಗಳೂರು ಕೆಫೆಯನ್ನು ಜಯನಗರದ ಹೃದಯಭಾಗದಲ್ಲಿ ಪ್ರಾರಂಭಿಸಿದೆ. ಈ ಅದ್ಧೂರಿ ಪ್ರಾರಂಭೋತ್ಸವದಲ್ಲಿ ಪಿ.ಆರ್.ಕೆ. ಸ್ಟುಡಿಯೋಸ್ ಸಂಸ್ಥಾಪಕಿ ಅಶ್ವಿನಿ ಪುನೀತ್ ರಾಜ್ ಕುಮಾರ್ ಹಾಗೂ ಬೆಂಗಳೂರು ದಕ್ಷಿಣದ ಸಂಸದರಾದ ತೇಜಸ್ವಿ ಸೂರ್ಯ ಭಾಗವಹಿಸಿದ್ದರು. 3500 ಚದರ ಅಡಿ ವಿಸ್ತೀರ್ಣ ಹೊಂದಿರುವ ಈ ಹೊಸ ಮಳಿಗೆಯು ದಕ್ಷಿಣ ಭಾರತದ ರುಚಿಗಳು ಮತ್ತು ಹಲವಾರು ತಲೆಮಾರುಗಳ ಕಾಲ ಪಾಲಿಸಿಕೊಂಡು ಬಂದ ವೈವಿಧ್ಯಮಯ ತಿನಿಸಿನ ಸಂಪ್ರದಾಯಗಳಿಗೆ ಮೈಲಿಗಲ್ಲಾಗಿದೆ. 2009ರಲ್ಲಿ ಕುಟುಂಬ ನಿರ್ವಹಣೆಯ ಉದ್ಯಮವಾಗಿ ಪ್ರಾರಂಭವಾದ ಈ ಬ್ರಾಂಡ್ ಸ್ಥಿರವಾದ ಹೆಜ್ಜೆಗಳನ್ನು ಇರಿಸಿ ಬೆಂಗಳೂರು ಮತ್ತು ಮೈಸೂರುಗಳಲ್ಲಿ 19 ಅಡುಕಲೆ ಎಕ್ಸ್ ಪೀರಿಯೆನ್ಸ್ ಮಳಿಗೆಗಳ ಸದೃಢ ಜಾಲವಾಗಿ ವಿಸ್ತರಿಸಿದ್ದು, ಇದರೊಂದಿಗೆ ಸದೃಢ ಇ-ಕಾಮರ್ಸ್ ವ್ಯಾಪ್ತಿಯಿಂದ ಅದರ ಉತ್ಪನ್ನಗಳು ಮುಂಚೂಣಿಯ ಸೂಪರ್ ಮಾರ್ಕೆಟ್ ಗಳು ಮತ್ತಿತರೆ ಮಳಿಗೆಗಳಲ್ಲಿ ದೊರೆಯುವಂತೆ ಮಾಡಿದೆ. ಫ್ಲಾಗ್ ಶಿಪ್ ಮಳಿಗೆ ಹಾಗೂ ಓಲ್ಡ್ ಬೆಂಗಳೂರು ಕೆಫೆಯು ಸಂಪರ್ಕಗಳನ್ನು ಉತ್ತೇಜಿಸುವ, ದೀರ್ಘಕಾಲ ಉಳಿಯುವ ಸ್ಮರಣೆಗಳ ಮತ್ತು ಕರ್ನಾಟಕದ ಉಜ್ವಲ ಸಂಸ್ಕೃತಿಯನ್ನು ದಕ್ಷಿಣ ಭಾರತದ ಆಕರ್ಷಕ ರುಚಿಗಳ ಸಂಯೋಜನೆಯ ಮೂಲಕ ಸಂಭ್ರಮಿಸುತ್ತದೆ. ಆವಿಷ್ಕಾರಕ್ಕೆ ಸರಿಸಾಟಿ ಇರದ ಆದ್ಯತೆ ನೀಡಿರುವ ಅಡುಕಲೆ ಬೆಂಗಳೂರಿನ ವೈವಿಧ್ಯಮಯ ಆಹಾರದ ವೈವಿಧ್ಯತೆಯ ನಾಡಿಮಿಡಿತದೊಂದಿಗೆ ಕರ್ನಾಟಕದ ಆಹಾರ ಪರಂಪರೆಯನ್ನು ಸಂರಕ್ಷಿಸಲು ಬದ್ಧವಾಗಿದೆ. ಈ ಪ್ರಾರಂಭ ಕುರಿತು ಅಡುಕಲೆಯ ನಿರ್ದೇಶಕ ಮತ್ತು ಸಿಇಒ ಭರತ್ ಕೌಶಿಕ್, ''ಅಡುಕಲೆಯ ಫ್ಲಾಗ್ ಶಿಪ್ ಮಳಿಗೆ ಮತ್ತು ಓಲ್ಡ್ ಬೆಂಗಳೂರು ಕೆಫೆಯನ್ನು ಬೆಂಗಳೂರಿನ ಅತ್ಯಂತ ಪ್ರಮುಖ ಸಾಂಸ್ಕೃತಿಕ ಮತ್ತು ವಾಣಿಜ್ಯ ಕೇಂದ್ರಗಳಲ್ಲಿ ಒಂದಾದ ಜಯನಗರ 4ನೇ ಬ್ಲಾಕ್ ನಲ್ಲಿ ಪ್ರಾರಂಭಿಸಲು ಬಹಳ ಉತ್ಸುಕರಾಗಿದ್ದೇವೆ ಎಂದರು.

## ಹಾಲು ಪಾಯಸ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಹಾಲು-4 ಕಪ್, ಅಕ್ಕಿ-2 ಟೇಬಲ್ ಸ್ಪೂನ್, ತುಪ್ಪ-1 ಟೀ ಸ್ಪೂನ್, ಸಕ್ಕರೆ-1/4 ಕಪ್, ಕೇಸರಿದಳ-5 ಎಸಳು, ಏಲಕ್ಕಿ ಪುಡಿ-ಚಿಟಿಕೆ.

### ಮಾಡುವ ವಿಧಾನ

ಮೊದಲಿಗೆ ಗ್ಯಾಸ್ ಮೇಲೆ ಒಂದು ಪ್ಯಾನ್ ಇಟ್ಟು ಅದಕ್ಕೆ ತುಪ್ಪ ಹಾಕಿ ಅದು ಬಿಸಿಯಾಗುತ್ತಲೇ ಬಾಸುಮತಿ ಅಕ್ಕಿ ಸೇರಿಸಿ ಅದು ಕೆಂಪಗಾಗುವವರೆಗೆ ಹುರಿದುಕೊಂಡು ಒಂದು ಮಿಕ್ಸಿ ಜಾರಿನಲ್ಲಿ ತರಿ ತರಿಯಾಗಿ ರುಬ್ಬಿಕೊಳ್ಳಿ. ನೀರು ಸೇರಿಸುವುದು ಬೇಡ. ನಂತರ ಒಂದು ಕುಕ್ಕರ್ ತೆಗೆದುಕೊಂಡು ಅದಕ್ಕೆ ½ ಟೀ ಸ್ಪೂನ್ ತುಪ್ಪ ಹಾಕಿ ಕುಕ್ಕರ್ ನ ಒಳಭಾಗಕ್ಕೆ ಈ ತುಪ್ಪ ಸವರಿ. ನಂತರ ಇದಕ್ಕೆ ಹಾಲು ಹಾಕಿ ಕುದಿಸಿ. ಇದಕ್ಕೆ ತರಿ ತರಿಯಾಗಿ ರುಬ್ಬಿದ ಅಕ್ಕಿ ಸೇರಿಸಿ ಸಣ್ಣ ಉರಿಯಲ್ಲಿ ಕುದಿಸಿ. ಇದು ಕುದಿಯಲು ಶುರು ಮಾಡಿದಾಗ ಕುಕ್ಕರ್ ಮುಚ್ಚಳ ಮುಚ್ಚಿ. ವಿಷಲ್ ಬರುತ್ತದೆ ಎನ್ನುವಾಗ ಗ್ಯಾಸ್ ಆಫ್ ಮಾಡಿ. ನಂತರ ಮುಚ್ಚಳ ತೆಗೆದು ಹಾಲು ದಪ್ಪಗಾಗುವವರೆಗೆ ಕುದಿಸಿಕೊಳ್ಳಿ. ನಂತರ ಸಕ್ಕರೆ ಸೇರಿಸಿ ಸಕ್ಕರೆ ಕರಗುವವರೆಗೆ ಬೇಯಿಸಿಕೊಳ್ಳಿ. ನಂತರ ಕೇಸರಿ ದಳ, ಏಲಕ್ಕಿ ಪುಡಿ ಸೇರಿಸಿ ಗ್ಯಾಸ್ ಆಫ್ ಮಾಡಿ. ಬಿಸಿ ಇರುವಾಗಲೇ ಸರ್ವ್ ಮಾಡಿ.

## ನಟಿ ಜಯಪ್ರದಾಗೆ ಸಂಕಷ್ಟ



ಮಾಜಿ ನಾಯಕಿ ಜಯಪ್ರದಾ ಮತ್ತೆ ಸಂಕಷ್ಟಕ್ಕೆ ಸಿಲುಕಿದ್ದಾರೆ... ಅವರು ರಾಜಕೀಯದಲ್ಲಿ ಸಕ್ರಿಯರಾಗಿದ್ದಾಗ ತಮ್ಮ ವಿರುದ್ಧ ದಾಖಲಾಗಿದ್ದ ಪ್ರಕರಣಕ್ಕೆ ಸಂಬಂಧಿಸಿದ ತೊಡಕುಗಳನ್ನು ಬಹೆಹರಿಸಿಕೊಂಡಿರಲಿಲ್ಲ... ಜಯಪ್ರದಾ ಅವರಿಗೆ ಹಲವು ಬಾರಿ ನೋಟಿಸ್ ನೀಡಿದರೂ ಸ್ಪಂದಿಸದ ಹಿನ್ನೆಲೆಯಲ್ಲಿ ನ್ಯಾಯಾಲಯ ಜಾಮೀನು ರಹಿತ ವಾರೆಂಟ್ ಜಾರಿ ಮಾಡಿದೆಯಂತೆ.

ಜಯಪ್ರದಾ ಅವರು 2019 ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಸಂಸದ ಅಭ್ಯರ್ಥಿಯಾಗಿ ರಾಂಪುರದಿಂದ ಸ್ಪರ್ಧಿಸಿದ್ದರು. ಈ ವೇಳೆ ಅವರ ವಿರುದ್ಧ ಚುನಾವಣಾ ನಿಯಮ ಉಲ್ಲಂಘಿಸಿದ ಎರಡು ಪ್ರಕರಣಗಳು ದಾಖಲಾಗಿದ್ದವು. ಈ ಪ್ರಕರಣಗಳು ಕೌಮಾರಿ ಮತ್ತು ಸ್ವರ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿವೆ. ಜಯಪ್ರದಾ ಅವರಿಗೆ ಎಷ್ಟು ಬಾರಿ ನೋಟಿಸ್ ನೀಡಿದರೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

ಸದ್ಯ ನ್ಯಾಯಾಲಯ ಆಕೆಗೆ ಜಾಮೀನು ರಹಿತ ವಾರಂಟ್ ಜಾರಿ ಮಾಡಿದೆ. ಈ ಹಿಂದೆ ನ್ಯಾಯಾಲಯ ಕೂಡ ಜಾಮೀನು ರಹಿತ ವಾರೆಂಟ್ ಹೊರಡಿಸಿ ಜಯಪ್ರದಾ ಬಂಧನಕ್ಕೆ ಆದೇಶಿಸಿತ್ತು. ಏಳು ಬಾರಿ ವಾರಂಟ್ ಜಾರಿ ಮಾಡಿದರೂ ಪೊಲೀಸರು ಯಾರನ್ನೂ ಬಂಧಿಸಿಲ್ಲ ಎಂದು ಸರ್ಕಾರಿ ವಕೀಲರು ತಿಳಿಸಿದ್ದು.. ಕೂಡಲೇ ಅವರನ್ನು ಬಂಧಿಸುವಂತೆ ಆದೇಶಿಸಿದ ನ್ಯಾಯಾಲಯ ಮುಂದಿನ ವಿಚಾರಣೆಯನ್ನು ಫೆಬ್ರವರಿ 27ಕ್ಕೆ ಮುಂದೂಡಿದೆ.

ಈ ಪ್ರಕರಣ 2019ರ ಲೋಕಸಭೆ ಚುನಾವಣೆ ವೇಳೆ ಜಯಪ್ರದಾ ಅವರು ಬಿಜೆಪಿ ಟಿಕೆಟ್ನಲ್ಲಿ ರಾಂಪುರದಿಂದ ಚುನಾವಣೆಗೆ ಸ್ಪರ್ಧಿಸಿದ್ದರು. ಈ ವೇಳೆ ನೀತಿ ಸಂಹಿತೆ ಜಾರಿಯಲ್ಲಿದ್ದಾಗಲೂ ನೂರಪುರ ಗ್ರಾಮದಲ್ಲಿ ರಸ್ತೆ ಉದ್ಘಾಟನೆ ಮಾಡಿದ್ದಾರೆ ಎಂಬ ಆರೋಪವಿದೆ.ಇದಲ್ಲದೇ ಮತ್ತೊಂದು ಘಟನೆ ಕೇಮರಿ ಪೊಲೀಸ್ ಠಾಣೆಯಿಂದ ನಡೆದಿದೆ. ಪಿಪಾಲಿಯಾ ಮಿಶ್ರಾ ಗ್ರಾಮದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಜಯಪ್ರದಾ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಲಾಗಿದೆ.ನಟಿ ವಿರುದ್ಧ 7 ಬಾರಿ ಜಾಮೀನು ರಹಿತ ವಾರಂಟ್ಗಳನ್ನು ಹೊರಡಿಸಲಾಗಿದೆ. ಆದರೆ ಇಷ್ಟೆಲ್ಲಾ ಆದರೂ ಆಕೆ ನ್ಯಾಯಾಲಯಕ್ಕೆ ಹಾಜರಾಗಿರಲಿಲ್ಲ. ಇದೀಗ ನ್ಯಾಯಾಲಯದ ಆದೇಶ ಉಲ್ಲಂಘಿಸಿದ ನಟಿಯ ವಿರುದ್ಧ ಕ್ರಮ ಕೈಗೊಳ್ಳಲಾಗುವುದು.

## ಬಾದಾಮಿಯ ಮೂಲಕ ಆರೋಗ್ಯದ ಕಾಳಜಿ ವಹಿಸಿ

### ಹೆಲ್ತ್ ಟಿಪ್ಸ್

ಪ್ರೀತಿಯ ಋತು ಅನಾವರಣಗೊಳ್ಳುತ್ತಿದ್ದಂತೆ ಈ ವ್ಯಾಲೆಂಟೈನ್ಸ್ ದಿನವನ್ನು ವಿಶಿಷ್ಟ ರೀತಿಯಲ್ಲಿ ಆಚರಿಸಲು ಪರಿಗಣಿಸೋಣ. ಸಾಂಪ್ರದಾಯಿಕ ಸಿಹಿ ತಿನಿಸು ಹಾಗೂ ಸಂತೃಪ್ತಿಕರ ಭೋಜನಕ್ಕಿಂತ ಆರೋಗ್ಯ ಮತ್ತು ಸ್ವಾಸ್ಥ್ಯಕ್ಕೆ ಆದ್ಯತೆ ನೀಡೋಣ. ಈ ಬದಲಾವಣೆಯು ಪ್ರೀತಿಯನ್ನು ಸಂಭ್ರಮಿಸಲು ಸಂತೃಪ್ತಿಕರ ಭೋಜನಕ್ಕಿಂತ ಆರೋಗ್ಯಕರ ಪರ್ಯಾಯಗಳನ್ನು ಆಯ್ಕೆ ಮಾಡಿಕೊಳ್ಳೋಣ. ನಿಮ್ಮ ವಿಶೇಷ ವ್ಯಕ್ತಿಗೆ ಆರೋಗ್ಯಕರ ಆದರೆ ವಿಶಿಷ್ಟ ಉಡುಗೊರೆ ನೀಡಲು ಎಚ್ಚರಿಕೆಯಿಂದ ರೂಪಿಸಲಾದ ಬಾದಾಮಿಗಳು, ನಿಮ್ಮ ಪ್ರೀತಿಯನ್ನು ಸಂಕೇತಿಸುತ್ತವೆ ಮತ್ತು ನಿಮ್ಮ ಬಾಂಧವ್ಯದಲ್ಲಿ ಸ್ವಾಸ್ಥ್ಯದ ಪ್ರಾಮುಖ್ಯತೆಯನ್ನು ಒತ್ತಿ ತೋರಿಸುತ್ತವೆ. ಬಾದಾಮಿಗಳು ತಮ್ಮ ರುಚಿಕರ ಮತ್ತು ಗರಿಗರಿಯಾದ ರುಚಿ ಮತ್ತು ಅಸಂಖ್ಯ ಆರೋಗ್ಯದ ಪ್ರಯೋಜನಗಳಿಗೆ ಖ್ಯಾತಿ ಪಡೆದಿದ್ದು ಅರ್ಥಪೂರ್ಣ ಮತ್ತು ಪೋಷಣೆಯುಕ್ತ ಆಹಾರವಾಗಿವೆ. ಸತುವು, ಫೋಲೇಟ್, ಕಬ್ಬಿಣ, ವಿಟಮಿನ್ ಇ, ಮೆಗ್ನೀಷಿಯಂ ಮತ್ತು ಪ್ರೊಟೀನ್ ಒಳಗೊಂಡು 15 ಪೋಷಕಾಂಶಗಳನ್ನು ಹೊಂದಿದ ಈ ಪವರ್ ಹೌಸ್ ಬೀಜಗಳು ಅಸಂಖ್ಯ ಆರೋಗ್ಯದ ಅನುಕೂಲಗಳನ್ನು ನೀಡುತ್ತವೆ. ಅವು ಹೃದಯದ ಆರೋಗ್ಯಕ್ಕೆಬೆಂಬಲಿಸುತ್ತವೆ, ಚರ್ಮದ ಆರೋಗ್ಯ ಉತ್ತೇಜಿಸುತ್ತದೆ, ತೂಕ ನಿರ್ವಹಣೆಯಲ್ಲಿ ನೆರವಾಗುತ್ತದೆ ಮತ್ತು ರಕ್ತದ ಸಕ್ಕರೆ ಅಂಶ ಕಾಪಾಡಲು ನೆರವಾಗುತ್ತದೆ. ನಿಮ್ಮ ಆಹಾರದಲ್ಲಿ ಬಾದಾಮಿಗಳ ಸೇರ್ಪಡೆಯಿಂದ ನಿಮಗೆ ರುಚಿಕರ ತಿನಿಸು ದೊರೆಯುವುದಲ್ಲದೆ ನಿಮ್ಮ ಸ್ವಾಸ್ಥ್ಯದ ಹಲವಾರು ಆಯಾಮಗಳಿಗೆ ಸಕಾರಾತ್ಮಕವಾಗಿ ಪರಿಣಾಮ ಬೀರಬಲ್ಲ ಪೋಷಕಾಂಶಗಳ ಸಂಪತ್ತು ನೀಡುತ್ತದೆ. ಪ್ರೀತಿಯ ಋತುವಿ ಕುರಿತು ಮತ್ತು ದೈನಂದಿನ ಆಹಾರದಲ್ಲಿ ಬಾದಾಮಿಗಳ ಪ್ರಾಮುಖ್ಯತೆ ಕುರಿತು ಖ್ಯಾತ ನಟಿ ಸೊಹಾ ಅಲಿ ಖಾನ್, ''ನನಗೆ ವ್ಯಾಲೆಂಟೈನ್ಸ್ ದಿನವು ಪ್ರೀತಿಯ ಅಭಿವ್ಯಕ್ತಿಯ ಆಚೆಗೂ ಇದೆ: ಇದು ನಮ್ಮ ಪ್ರೀತಿಪಾತ್ರರ ಆರೋಗ್ಯದ ಕುರಿತಾದ ಕಾಳಜಿಯಾಗಿದೆ. ನನ್ನ ಕುಟುಂಬವು ಆರೋಗ್ಯಕರ ಮತ್ತು ಸಮತೋಲನದ ಆಹಾರ ಸೇವಿಸುವುದನ್ನು ನಾನು ದೃಢೀಕರಿಸಲು ಸತತವಾಗಿ ನಮ್ಮ ಭೋಜನದಲ್ಲಿ ಬಾದಾಮಿಗಳನ್ನು ಒಳಗೊಳ್ಳುತ್ತೇವೆ. ಆಸಕ್ತಿದಾಯಕ ಅಂಶವೆಂದರೆ ನನ್ನ ಪುಟ್ಟ ಮಗುವೂ ತನಗೆ ಹಸಿವೆನಿಸಿದಾಗ ಅನಾರೋಗ್ಯಕರ ಆಯ್ಕೆಗಳಿಗಿಂತ ಬಾದಾಮಿ ಸೇವಿಸಲು ಬಯಸುತ್ತಾಳೆ. ಬಾದಾಮಿಗಳು ಸತುವು, ಪ್ರೊಟೀನ್, ವಿಟಮಿನ್ ಇ ಮತ್ತಿತರೆ ಅಂಶಗಳಲ್ಲದೆ ಅಸಂಖ್ಯ ಆರೋಗ್ಯದ ಅನುಕೂಲಗಳನ್ನು ಹೊಂದಿದ್ದು ಆಲೋಚನಾಯುಕ್ತ ಮತ್ತು ಪೋಷಣೆಯುಕ್ತ ಉಡುಗೊರೆಯಾಗಿ ನನ್ನ ಆಯ್ಕೆಯಾಗುತ್ತದೆ'' ಎಂದರು. ನ್ಯೂಟ್ರಿಷನ್ ಮತ್ತು ವೆಲ್ ನೆಸ್ ಕನ್ಸಲ್ಟೆಂಟ್ ಶೀಲಾ ಕೃಷ್ಣಸ್ವಾಮಿ, ''ವಿಶೇಷವಾಗಿ ರೂಪಿಸಿದ ಬಾದಾಮಿಗಳ ಬಾಕ್ಸ್ ಉಡುಗೊರೆ ನೀಡುವುದು ಪ್ರತಿಯೊಬ್ಬರೂ ಕೈಗೊಳ್ಳಬೇಕಾದ ಉತ್ತಮ ಆರೋಗ್ಯದತ್ತ ಹೆಜ್ಜೆಯಾಗಿದೆ. ಬಾದಾಮಿಗಳು ರುಚಿಕರ ಮತ್ತು ಪೋಷಕಾಂಶಯುಕ್ತ ಕುರುಕುಲ ಅಲ್ಲದೆ ಅವು ಹೃದಯದ ಆರೋಗ್ಯವನ್ನೂ ಉತ್ತೇಜಿಸುತ್ತವೆ. ಸಂಶೋಧನೆಯ ಪ್ರಕಾರ ಪ್ರತಿನಿತ್ಯ 42 ಗ್ರಾಂ ಬಾದಾಮಿ ಸೇವನೆಯು ಹೃದಯದ ರೋಗಕ್ಕೆ ಪ್ರಮುಖ ಕಾರಣವಾದ ಹೊಟ್ಟೆಯ ಕೊಬ್ಬನ್ನು ಕಡಿಮೆ ಮಾಡಲು ನೆರವಾಗುತ್ತದೆ. ಖ್ಯಾತ ಕನ್ನಡ ನಟಿ ಪ್ರಣೀತಾ ಸುಭಾಷ್ ಪ್ರತಿನಿತ್ಯ ಬಾದಾಮಿ ಸೇವಿಸುತ್ತೇನೆ ಎನ್ನುತ್ತಾರೆ. ಪ್ರೀತಿಸುವವರಿಗೆ ಬಾದಾಮಿಗಳ ಉಡುಗೊರೆ ನೀಡುವ ಕುರಿತು ಅವರು,ಬಾದಾಮಿಗಳ ಉಡುಗೊರೆ ನೀಡುವುದು ಯಾವುದೇ ಸಂದರ್ಭಕ್ಕೂ ಅರ್ಥಪೂರ್ಣ ಆಯ್ಕೆ ಎಂದು ನಂಬಿದ್ದೇನೆ. ಬಾದಾಮಿಗಳು ಕಾಳಜಿ ಮತ್ತು ಪರಿಗಣನೆಯ ಸಂಕೇತವಾಗಿದ್ದು ಒಟ್ಟಾರೆ ಸ್ವಾಸ್ಥ್ಯದ ಪ್ರಾಮುಖ್ಯತೆಯನ್ನು ಒತ್ತಿ ತೋರಿಸುತ್ತವೆ.

## ಮಧುಮೇಹ ಜಾಗೃತಿಗಾಗಿ ಶುಗರ್ಫಿಟ್ ಬೀಟ್ ಡಯಾಬಿಟಿಸ್ ವಾಕಥಾನ್‌ಗೆ ಸೇರಿ!



**ಬೆಂಗಳೂರು:** ಮಧುಮೇಹವು ಪ್ರಪಂಚದಾದ್ಯಂತ ಒಂದು ಒತ್ತುವ ಆರೋಗ್ಯ ಕಾಳಜಿಯಾಗಿ ಉಳಿದಿದೆ, ಪ್ರತಿದಿನ ಲಕ್ಷಾಂತರ ಜನರ ಮೇಲೆ ಪರಿಣಾಮ ಬೀರುತ್ತದೆ. ಜಾಗೃತಿ ಮೂಡಿಸುವ ಪ್ರಯತ್ನದಲ್ಲಿ, ಶುಗರ್ಫಿಟ್ ಮುಂಬರುವ ಶುಗರ್ಫಿಟ್ ಬೀಟ್ ಡಯಾಬಿಟಿಸ್ ವಾಕಥಾನ್ ಅನ್ನು ಘೋಷಿಸಲು ಹೆಮ್ಮೆಪಡುತ್ತದೆ, ಇದನ್ನು ಭಾನುವಾರ, ಫೆಬ್ರವರಿ 18, 2024 ರಂದುಟನಿಗದಿಪಡಿಸಲಾಗಿದೆ. ಮಧುಮೇಹವನ್ನು ಬೆಂಬಲಿಸುವ ಮತ್ತು ಜಾಗೃತಿ ಮೂಡಿಸುವ ಸಾಮೂಹಿಕ ಬದ್ಧತೆಯನ್ನು ಸಂಕೇತಿಸುವ ಈ ಮೆರವಣಿಗೆಯಲ್ಲಿ ಪಾಲ್ಗೊಳ್ಳಲು ಭಾಗವಹಿಸುವವರನ್ನು ಆತ್ಮೀಯವಾಗಿ ಆಹ್ವಾನಿಸಲಾಗಿದೆ. ಜಯನಗರದ 3ನೇ ಬ್ಲಾಕ್ನಲ್ಲಿರುವ ಶುಗರ್ಫಿಟ್ ಡಯಾಬಿಟಿಸ್ ರಿವರ್ಸಲ್ ಸೆಂಟರ್ನಿಂದ ಬೆಳಿಗ್ಗೆ 7 ರಿಂದ 10 ರವರೆಗೆ ವಾಕಥಾನ್ ಪ್ರಾರಂಭವಾಗಲಿದೆ. ಪಾಲ್ಗೊಳ್ಳುವವರು ಈ ಪ್ರಮುಖ ಕಾರಣಕ್ಕೆ ಅವರ ಕೊಡುಗೆಯನ್ನು ಅಂಗೀಕರಿಸುವ ಮೂಲಕ ಭಾಗವಹಿಸುವಿಕೆಯ ಪ್ರಮಾಣೀಕರಣವನ್ನು ಪಡೆಯುವ ಅವಕಾಶವನ್ನು ಹೊಂದಿರುತ್ತಾರೆ. ಹೆಚ್ಚುವರಿಯಾಗಿ, ಪ್ರತಿಯೊಬ್ಬ ಭಾಗವಹಿಸುವವರಿಗೆ ಬೆಂಗಳೂರಿನ ಯಾವುದೇ ಶುಗರ್ಫಿಟ್ ಡಯಾಬಿಟಿಸ್ ರಿವರ್ಸಲ್ ಕೇಂದ್ರಗಳಲ್ಲಿ ಅವರ ಆಯ್ಕೆಯ ಸೇವೆಗಾಗಿ ಕಾಂಪ್ಲಿಮೆಂಟರಿ ವೋಚರ್ ಅನ್ನು ನೀಡಲಾಗುತ್ತದೆ. ಸ್ಥಳವನ್ನು ಸುರಕ್ಷಿತವಾಗಿರಿಸಲು ಮತ್ತು ಈ ಪ್ರಭಾವಶಾಲಿ ಈವೆಂಟ್ನ ಭಾಗವಾಗಲು, ಈ ಕೆಳಗಿನ ಲಿಂಕ್ ಮೂಲಕ ಈಗಲೇ ನೋಂದಾಯಿಸಿ: https://forms.gle/nr9Gf4xhrRXDet458 ಒಂದಾಗೋಣ, ನಡೆಯೋಣ ಮತ್ತು ಮಧುಮೇಹವನ್ನು ಸೋಲಿಸೋಣ! ಶುಗರ್ಫಿಟ್ ಬೀಟ್ ಡಯಾಬಿಟಿಸ್ ವಾಕಥಾನ್ಗೆ ಬನ್ನಿ ಭಾಗವಹಿಸಿ ಮತ್ತು ಬದಲಾವಣೆ ಮಾಡಿ. ಶುಗರ್ಫಿಟ್ ಒಂದು ನವೀನ ಹೆಲ್ತ್ಟೆಕ್ ಸ್ಟಾರ್ಟ್ಅಪ್ ಆಗಿದ್ದು, ಇದು ಹೆಚ್ಚು ಗ್ರಾಹಕ-ಕೇಂದ್ರಿತ ಡೇಟಾ-ಚಾಲಿತ ಡಿಜಿಟಲ್ಆರೋಗ್ಯ ಅನುಭವದ ಮೂಲಕ ಟೈಪ್ 2 ಮತ್ತು ಪ್ರಿ ಡಯಾಬಿಟಿಸ್ ಅನ್ನು ನಿರ್ವಹಿಸಲು ಮತ್ತು ರಿವರ್ಸ್ ಮಾಡಲುಪ್ರಯತ್ನಿಸುತ್ತದೆ. ಮಾಸ್ ಮ್ಯೂಚುಯಲ್ ವೆಂಚರ್ಸ್, ಕ್ಯೂರ್ಫಿಟ್, ಎಂಡಿಯಾ ಪಾರ್ಟ್ನರ್ಸ್ ಮತ್ತು ಟ್ಯಾಂಗ್ಲಿನ್ ವೆಂಚರ್ ಪಾರ್ಟ್ನರ್ಸ್ ಬೆಂಬಲದೊಂದಿಗೆ, ಶುಗರ್ಫಿಟ್ ನಿರಂತರ ಗ್ಲೂಕೋಸ್ ಮಾನಿಟರಿಂಗ್ ತಂತ್ರಜ್ಞಾನವನ್ನು (ಸಿಜಿಎಂ) ಬಳಸುತ್ತದೆ, ಇದು ಚಯಾಪಚಯ ಆರೋಗ್ಯವನ್ನು ಉತ್ತಮಗೊಳಿಸಲು ತಮ್ಮ ರಕ್ತದ ಸಕ್ಕರೆಯ ಮಟ್ಟದಲ್ಲಿ ವಿವಿಧ ಆಹಾರ ಮತ್ತು ಜೀವನಶೈಲಿಯ ಚಟುವಟಿಕೆಗಳ ನೈಜ-ಸಮಯದ ಪರಿಣಾಮವನ್ನು ನೋಡಲು ಬಳಕೆದಾರರಿಗೆ ಸಹಾಯ ಮಾಡುತ್ತದೆ.

## ಕಪ್ಪು ಕಲೆ ನಿವಾರಿಸಲು ಸಲಹೆ

### ಬ್ಯೂಟಿ ಟಿಪ್ಸ್



ಅರ್ಧ ಚಮಚ ನಿಂಬೆ ರಸದಲ್ಲಿ ಒಂದು ಚಮಚ ರೋಸ್ ವಾಟರ್ ಮಿಶ್ರಣ ಮಾಡಿ. ಈ ಮಿಶ್ರಣವನ್ನು ನಿಮ್ಮ ಕುತ್ತಿಗೆ, ಮೊಣಕೈ ಮತ್ತು ಮೊಣಕಾಲುಗಳಿಗೆ ಅನ್ವಯಿಸಿ ಮತ್ತು ರಾತ್ರಿಯಿಡೀ ಹಾಗೆಯೇ ಬಿಡಿ. ಕೆಲವು ದಿನಗಳ ಕಾಲ ಇದನ್ನು ನಿರಂತರವಾಗಿ ಉಪಯೋಗಿಸಿ. ಇದರಿಂದ ನಿಮ್ಮ ಚರ್ಮಕ್ಕೆ ಅಂಟಿಕೊಂಡಿರುವ ಕಪ್ಪು, ಕೆಸರು ಅಥವಾ ಕಪ್ಪು ಕಲೆಗಳು ನಿವಾರಣೆಯಾಗುತ್ತವೆ. ಎರಡು ಚಮಚ ಜೇನುತುಪ್ಪದಲ್ಲಿ ಒಂದು ಚಮಚ ನಿಂಬೆ ರಸವನ್ನು ಮಿಶ್ರಣ ಮಾಡಿ. ಸ್ನಾನ ಮಾಡುವ ಮೊದಲು ಕಪ್ಪಾದ ಜಾಗಕ್ಕೆ ಇದನ್ನು ಅನ್ವಯಿಸಿ. ಸುಮಾರು ಅರ್ಧ ಗಂಟೆಯವರೆಗೆ ಹಾಗೆಯೇ ಬಿಡಿ. ಈ ನಂತರ ಸ್ನಾನ ಮಾಡಿ. ಚರ್ಮವು ಹೆಚ್ಚು ಮೃದುವಾಗುತ್ತದೆ ಮತ್ತು ಕಪ್ಪು ಕಲೆಗಳನ್ನು ಹೋಗಲಾಡಿಸಲು ಸಹಾಯ ಮಾಡುತ್ತದೆ. ಒಂದು ಬಟ್ಟಲಿನಲ್ಲಿ ಹಸಿ ಆಲೂಗಡ್ಡೆಯನ್ನು ತುರಿದು ಅದಕ್ಕೆ ಮೊಸರು ಸೇರಿಸಿ ಕುತ್ತಿಗೆ, ಮೊಣಕೈ ಮತ್ತು ಮೊಣಕಾಲುಗಳಿಗೆ ಕಚ್ಚಿ 10 ರಿಂದ 15 ನಿಮಿಷಗಳವರೆಗೆ ಹಾಗೆಯೇ ಒಣಗಲು ಬಿಡಿ. ಆ ಬಳಿಕ ಶುದ್ಧ ನೀರಿನಿಂದ ತೊಳೆಯಿರಿ. ಇದು ನಿಮ್ಮ ಕುತ್ತಿಗೆಗೆ ಅಂಟಿಕೊಂಡಿರುವ ಕೆಸರನ್ನು ಮತ್ತು ಕಪ್ಪು ಕಲೆಯನ್ನು ಹೋಗಲಾಡಿಸಲು ಸಹಾಯಕವಾಗಿದೆ.ಸೌತೆಕಾಯಿ ರಸವನ್ನು ಕಪ್ಪಾದ ಚರ್ಮಕ್ಕೆ ಹಚ್ಚಿ. ಜೊತೆಗೆ ಅಲೋವೆರಾ ಜೆಲ್ ಕೂಡ ಬಳಸಬಹುದು. ಇದರಿಂದ ನಿಮ್ಮ ಚರ್ಮಕ್ಕೆ ಅಂಟಿರುವ ಕಪ್ಪು ಕಲೆಗೆ ಪರಿಹಾರ ಪಡೆದುಕೊಳ್ಳಬಹುದಾಗಿದೆ.

## ರಾಶಿ ಭವಿಷ್ಯ

ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಸಕಾಲದಲ್ಲಿ ಹಣ ಬರುವುದು, ಸ್ತ್ರೀಯರಿಗೆ ಶುಭ, ಕೃಷಿಕರಿಗೆ ಲಾಭ, ತೀರ್ಥ ಯಾತ್ರೆ, ಪರರ ತಪ್ಪಿನಿಂದ ಗೌರವಕ್ಕೆ ಧಕ್ಕೆ.

**ವೃಷಭ:** ಮಿತ್ರರ ಬೆಂಬಲ, ವಿಪರೀತ ಕೋಪ, ದಾಂಪತ್ಯದಲ್ಲಿ ಪ್ರೀತಿ, ವೈರಿಗಳಿಂದ ದೂರವಿರಿ, ಆರೋಗ್ಯದಲ್ಲಿ ವ್ಯತ್ಯಾಸ.

**ಮಿಥುನ:** ಉದಾಸೀನತೆ ಬೇಡ, ಅಮೂಲ್ಯ ವಸ್ತುಗಳನ್ನು ಕಳೆದುಕೊಳ್ಳುವಿರಿ, ಇತರರ ಭಾವನೆಗೆ ಸ್ಪಂದಿಸುವಿರಿ.

**ಕಟಕ:** ಸಾಮಾಜಿಕ ಕಾರ್ಯಗಳಲ್ಲಿ ಭಾಗಿ, ಸ್ತ್ರೀಯರು ತಾಳ್ಮೆಯಿಂದ ಇರಿ, ಚೋರ ಭಯ.

**ಸಿಂಹ:** ಬಹು ಸೌಖ್ಯ, ಮಾತಿಗೆ ಮರುಳಾಗದಿರಿ, ಅಧಿಕ ಖರ್ಚು, ಕಷ್ಟಕ್ಕೆ ಪ್ರತಿಫಲ ಸಿಕ್ಕಿ ಸಂತೋಷ.

**ಕನ್ಯಾ:** ಅಲ್ಪ ಆದಾಯ ಅಧಿಕ ಖರ್ಚು, ಯಾರನ್ನು ಹೆಚ್ಚಾಗಿ ನಂಬಬೇಡಿ, ವಸ್ತ್ರ ವ್ಯಾಪಾರಿಗಳಿಗೆ ಲಾಭ, ನಿದ್ರಾಭಂಗ.

**ತುಲಾ:** ಮಾತೃವಿನಿಂದ ನಿಂದನೆ, ಅತಿಯಾದ ಭಯ, ಪರಸ್ಥಳವಾಸ, ಶರೀರದಲ್ಲಿ ಆಯಾಸ, ಅಕಾಲ ಭೋಜನ.

**ವೃಶ್ಚಿಕ:** ಅಧಿಕಾರಿಗಳಿಂದ ಕಿರುಕುಳ, ಮಾನಹಾನಿ, ಕೆಲಸಕ್ಕಾಗಿ ತಿರುಗಾಟ, ಸಕಾಲಕ್ಕೆ ಭೋಜನ ಇಲ್ಲದಿರುವಿಕೆ, ಗುರುಗಳ ಭೇಟಿ.

**ಧನಸ್ಸು:** ಅನಾವಶ್ಯಕ ಖರ್ಚಿನಿಂದ ದೂರವಿರಿ, ವಿದೇಶ ಪ್ರಯಾಣ, ಯತ್ನ ಕಾರ್ಯಾನುಕೂಲ, ಅಧಿಕ ಕೆಲಸದಿಂದ ವಿಶ್ರಾಂತಿ.

**ಮಕರ:** ಉದ್ಯಮಿಗಳಿಗೆ ಯಶಸ್ಸು, ದೃಷ್ಟಿ ದೋಷ, ಸುಖ ಭೋಜನ, ಪ್ರಭಾವಿ ವ್ಯಕ್ತಿಗಳ ಭೇಟಿ, ಕುಟುಂಬದಲ್ಲಿ ಶಾಂತಿ.

**ಕುಂಭ:** ರಾಜ ಭಯ, ಮೂಗಿನ ಮೇಲೆ ಕೋಪ, ಹಣದ ತೊಂದರೆ, ಶತ್ರು ಭಾದೆ, ನೆಮ್ಮದಿ ಇಲ್ಲದ ಜೀವನ.

**ಮೀನ:** ಅಪರಿಚಿತರಿಗೆ ಸಹಾಯ, ವಿದ್ಯಾರ್ಥಿಗಳಲ್ಲಿ ಗೊಂದಲ, ಹೊಸ ಅವಕಾಶ, ಆಲಸ್ಯ ಮನೋಭಾವ, ಸ್ವಲ್ಪ ಪ್ರಯತ್ನ ಪಟ್ಟರೆ ಅವಕಾಶ ಪ್ರಾಪ್ತಿ.

## ಪ್ರೇಮಿಗಳ ದಿನಾಚರಣೆ



ಇಂದು ಪ್ರೇಮಿಗಳ ದಿನಾಚರಣೆ. ಈ ದಿನವನ್ನು ವಿಶ್ವದಾದ್ಯಂತ ಸಂಭ್ರಮದಿಂದ ಆಚರಿಸಲಾಗುತ್ತಿದೆ. ವ್ಯಾಲೆಂಟೈನ್ಸ್ ಡೇ ಪಾಶ್ಚಾತ್ಯ ಆಚರಣೆಯಾಗಿದ್ದರೂ, ಫೆ.7 ರಿಂದ ಪ್ರೇಮಿಗಳು ತಮ್ಮ ಸಂಗಾತಿಗೆ ಹಲವು ರೀತಿ ಸರ್ಪ್ರೈಸ್ ಗಿಫ್ಟ್ಗಳನ್ನು ನೀಡಿರುತ್ತಾರೆ. ಅದು ಹೂವಿರಬಹುದು, ಟೆಡ್ಡಿ ಬೇರ್ ಅಥವಾ ಚಾಕೋಲೇಟ್ಗಳಿರಬಹುದು. ಹೀಗೆ ಕಳೆದೊಂದು ವಾರದಿಂದ ಪ್ರೇಮಿಗಳು ಪ್ರೇಮಲೋಕದಲ್ಲಿ ತೇಲಾಡಿದ್ದಾರೆ. ಪ್ರೇಮಿಗಳ ದಿನದಂದು ಕೆಂಪು ಬಣ್ಣ ಉಡುಗೆ ತೊಡುವುದು ಸಾಮಾನ್ಯ.

ಪ್ರೀತಿ ಅಥವಾ ಪ್ರೇಮ ಎಂಬುದು ಅಸಂಖ್ಯಾತ ಭಾವನೆಗಳು ಮತ್ತು ಅನುಭವಗಳ ಒಂದು ಭಾವ. ಒಂದು ಅಮೂರ್ತ ಪರಿಕಲ್ಪನೆಯಾಗಿರುವ ಪ್ರೀತಿ, ಬೇರೊಬ್ಬ ವ್ಯಕ್ತಿಯ ಮೇಲೆ ತೋರುವ ಸೂಕ್ಷ್ಮವಾದ ಕಾಳಜಿಯ ಆಳವಾದ ಮತ್ತು ಅನಿರ್ವಚನೀಯ ಭಾವನೆ. ಪ್ರತಿ ಪ್ರೇಮಿಯ ಮನದಲ್ಲೂ ಹೇಳಿಕೊಳ್ಳಲಾಗದ ಪುಳಕ. ತನ್ನೆದೆಯಲ್ಲಿ ಬೆಚ್ಚಗೆ ಕಾಪಿಡಿಟ್ಟುಕೊಂಡಿದ್ದ ಪ್ರೀತಿಯನ್ನು ತನ್ನೊಲವಿನೆದುರು ಉಸುರುವ ತವಕ. ಅದಕ್ಕಾಗಿ ಫೆಬ್ರವರಿ 14ನೇ ತಾರೀಕಿಗಾಗಿ ಕಾತುರದಿಂದ ಎದುರು ನೋಡುತ್ತಿರುತ್ತಾರೆ. ವ್ಯಾಲೆಂಟೈನ್ ಎಂಬ ಸಂತನಿಂದ ವ್ಯಾಲೆಂಟೈನ್ಸ್ ಡೇ ಆರಂಭವಾಗಿದೆ. ಈ ಸಂತರ ಮರಣದ ದಿನವನ್ನು ಇಂದು ಪ್ರೇಮಿಗಳ ದಿನವಾಗಿ ಆಚರಿಸಲಾಗುತ್ತಿದೆ. ಹಾಗಾದರೆ ಸಂತರಿಗೂ ಪ್ರೇಮಕ್ಕೂ ಏನೂ ಸಂಬಂಧ ಎಂಬ ಪ್ರಶ್ನೆ ನಿಮ್ಮಲ್ಲಿ ಮೂಡಬಹುದು. ಅದು ಕ್ರಿ.ಶ 270. ರೋಮ್ ಸಾಮ್ರಾಜ್ಯವನ್ನು 2ನೇ ಕ್ಲಾಡಿಯಸ್ ಎಂಬ ರಾಜ ಆಳುತ್ತಿದ್ದ. ತನ್ನ ಸರ್ವಾಧಿಕಾರಿ ಧೋರಣೆಯಿಂದ ಕುಖ್ಯಾತಿ ಪಡೆದಿದ್ದ ಸಾಮ್ರಾಜ್ಯದಲ್ಲಿ ವ್ಯಾಲೆಂಟೈನ್ ಎಂಬ ಸಂತ ಹೊಸ ಬೆಳಕಾಗಿ ಕಾಣಿಸಿಕೊಂಡಿದ್ದರು. ತನ್ನ ರಾಜಾಢಾಳಿತದ ಅವಧಿಯಲ್ಲಿ ಕ್ಲಾಡಿಯಸ್ ಸೈನಿಕರನ್ನು ಮದುವೆಯಾಗಲು ಬಿಡುತ್ತಿರಲಿಲ್ಲ. ಯುದ್ಧದ ಸಂದರ್ಭದಲ್ಲಿ ಯುವಕರು ಮದುವೆಯಾಗಬಾರದೆಂದು ಕ್ಲಾಡಿಯಸ್ ಕಟ್ಟಪ್ಪಣೆ ಹೊರಡಿಸಿದ್ದ. ಏಕೆಂದರೆ ಯುವಕರು ಒಬ್ಬಂಟಿಯಾಗಿದ್ದರೆ ಯುದ್ಧದಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಳ್ಳುತ್ತಾರೆ ಎಂದು ಆತ ನಂಬಿದ್ದ. ಇಡೀ ಸಾಮ್ರಾಜ್ಯದಲ್ಲಿ ಕ್ಲಾಡಿಯಸ್ನ ನಿರ್ಧಾರಕ್ಕೆ ವಿರೋಧ ವ್ಯಕ್ತಪಡಿಸಿದ್ದು ಸಂತ ವ್ಯಾಲೆಂಟೈನ್ ಮಾತ್ರ. ಸೈನಿಕ ಮನದಾಳವನ್ನು ಅರಿತ ವ್ಯಾಲೆಂಟೈನ್ ರಾಜನಿಗೆ ತಿಳಿಯದಂತೆ ಪ್ರೇಮಿಗಳನ್ನು ಜತೆ ಒಂದುಗೂಡಿಸುತ್ತಿದ್ದರಂತೆ. ಮದುವೆಯಾಗಲು ಇಚ್ಛಿಸುತ್ತಿದ್ದವರಿಗೆ ರಹಸ್ಯವಾಗಿ ಮದುವೆ ಮಾಡಿಸುತ್ತಿದ್ದರಂತೆ. ತಮ್ಮ ಜೀವನವನ್ನೇ ಪಣಕ್ಕಿಟ್ಟು ಹಲವು ಪ್ರೇಮಿಗಳ ನೆರವಿಗೆ ನಿಂತಿದ್ದರಂತೆ.

# ಅರಬ್ಬರ ನೆಲದಲ್ಲಿ ದೇವಸ್ಥಾನ ಇಂದು ಲೋಕಾರ್ಪಣೆ



**ಅಬುಧಾಬಿ:** ಇಂದು (ಫೆ.14) ಅಬುಧಾಬಿಯಲ್ಲಿ ಬೋಚಸನ್‌ವಾಸಿ ಅಕ್ಷರ ಪುರುಷೋತ್ತಮ ಸ್ವಾಮಿನಾರಾಯಣ ಸಂಸ್ಥೆ ಅಥವಾ ಬಿಎಪಿಎಸ್ (ಃ ೦ಕಖ) ಸೊಸೈಟಿ ನಿರ್ಮಿಸಿರುವ ವಿಸ್ತಾರವಾದ ಹಿಂದೂ ದೇವಾಲಯವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಉದ್ಘಾಟಿಸಲಿದ್ದಾರೆ. 27 ಎಕರೆ ಭೂಮಿಯಲ್ಲಿ ನಿರ್ಮಿಸಲಾದ ಈ ದೇವಾಲಯ ಅಬುಧಾಬಿಯ ಮೊದಲ ಹಿಂದೂ ಕಲ್ಲಿನ ದೇವಾಲಯವಾಗಿದ್ದು, ಭಾರತೀಯ ಸಂಸ್ಕೃತಿಯ ವಿಶಿಷ್ಟ ಮಿಶ್ರಣ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ಗುರುತನ್ನು ಹೊಂದಿದೆ. ಪ್ರಧಾನಿ ನರೇಂದ್ರ ಮೋದಿಯವರ ಎರಡು ದಿನದ ಅರಬ್ ಪ್ರವಾಸದಲ್ಲಿ ಈ ದೇವಾಲಯದ ಉದ್ಘಾಟನೆಯನ್ನು ಮಾಡಲಿದ್ದಾರೆ. ಇದು ಯುಎಇಯಲ್ಲಿ ಉದ್ಘಾಟನೆಗೊಂಡ ಎರಡನೇ ಅತಿ ದೊಡ್ಡ ಹಿಂದೂ ದೇವಾಲಯವಾಗಿದೆ. ಮಾರ್ಚ್ 1 ರಂದು ಸಾರ್ವಜನಿಕರಿಗೆ ತೆರೆಯಲಾಗುವ ದೇವಾಲಯದ ಸಮರ್ಪಣೆ ಸಮಾರಂಭಕ್ಕೂ ಪ್ರಧಾನಿ ಮೋದಿ ನೇತೃತ್ವ ವಹಿಸಲಿದ್ದಾರೆ. 2024ರ ವರ್ಷ ಹಿಂದೂಗಳಿಗೆ ಹರ್ಷ ತಂದಿದೆ. ಹೊಸ ವರ್ಷದ ಮೊದಲ ತಿಂಗಳಲ್ಲೇ ಅಯೋಧ್ಯೆ ರಾಮಮಂದಿರದಲ್ಲಿ ಪ್ರಾಣ ಪ್ರತಿಷ್ಠಾಪನೆಯ ಸಂತಸ ಒಂದುಕಡೆಯಾದರೆ, 2ನೇ ತಿಂಗಳಲ್ಲಿ ಮುಸ್ಲಿಮರ ನೆಲದಲ್ಲಿ ಮೊಟ್ಟ ಮೊದಲ ಐತಿಹಾಸಿಕ ಹಿಂದೂ ದೇವಾಲಯ ಲೋಕಾರ್ಪಣೆ ಕಣ್ತುಂಬಿಕೊಳ್ಳುವ ಸೌಭಾಗ್ಯ ಹಿಂದೂಗಳಿಗೆ ಒಲಿದು ಬಂದಿದೆ. ಮುಸ್ಲಿಮರ ನೆಲದಲ್ಲಿ ಲೋಕಾರ್ಪಣೆಗೊಳ್ಳುತ್ತಿರುವ ಮೊದಲ ಬಿಎಪಿಎಸ್ ಹಿಂದೂ ದೇವಾಲಯ ಎಂಬ ಹೆಗ್ಗಳಿಕೆಗೆ ಈ ದೇವಾಲಯ ಪಾತ್ರವಾಗಲಿದೆ. ಈ ದೇವಾಲಯವು ಭಾರತದ ಹೊರಗಿನ ಅತ್ಯಂತ ದೊಡ್ಡ ಮತ್ತು ಅತ್ಯಂತ ಸುಂದರವಾದ ಹಿಂದೂ ದೇವಾಲಯಗಳಲ್ಲಿ ಒಂದಾಗಿದೆ. ಪಶ್ಚಿಮ ಏಷ್ಯಾದ ಅತಿದೊಡ್ಡ ಹಿಂದೂ ದೇವಾಲಯವೂ ಹೌದು. ಫೆಬ್ರವರಿ 2018 ರಲ್ಲಿ ಪ್ರಧಾನಿ ಮೋದಿ ಅವರು ದೇವಾಲಯದ ನಿರ್ಮಾಣಕ್ಕೆ ಶಂಕುಸ್ಥಾಪನೆ ಮಾಡಿದ್ದರು. ಡಿಸೆಂಬರ್ 2019ರಲ್ಲಿ ನಿರ್ಮಾಣ ಪ್ರಾರಂಭವಾಯಿತು. ದೇವಾಲಯವನ್ನು 5.4 ಹೆಕ್ಟೇರ್ ಭೂಮಿ ಜಾಗದಲ್ಲಿ ನಿರ್ಮಿಸಲಾಗುತ್ತಿದೆ. 700 ಕೋಟಿ ರೂ. ವೆಚ್ಚದಲ್ಲಿ ದೇವಾಲಯ ನಿರ್ಮಿಸಲಾಗಿದೆ.

## ಪಾಕ್ ಪ್ರಧಾನಿ ರೇಸ್‌ನಿಂದ ಹಿಂದೆ ಸರಿದ ಭುಟ್ಟೋ

**ಇಸ್ಲಾಮಾಬಾದ್:** ಪಾಕಿಸ್ತಾನ್ ಪೀಪಲ್ಸ್ ಪಾರ್ಟಿಯ ಅಧ್ಯಕ್ಷ ಬಿಲಾವಲ್ ಭುಟ್ಟೋ ಜರ್ದಾರಿ ಅವರು ಮಂಗಳವಾರ ಪ್ರಧಾನಿ ಸ್ಪರ್ಧೆಯಿಂದ ಹಿಂದೆ ಸರಿದಿದ್ದಾರೆ. ಬದಲಿಗೆ ಪ್ರಧಾನಿ ಸ್ಥಾನಕ್ಕೆ ಪಾಕಿಸ್ತಾನ್ ಮುಸ್ಲಿಂ ಲೀಗ್-ನವಾಜ್ ಅಭ್ಯರ್ಥಿಯನ್ನು ಬೆಂಬಲಿಸುವುದಾಗಿ ತಿಳಿಸಿದ್ದಾರೆ. ಪಾಕಿಸ್ತಾನ ಮುಸ್ಲಿಂ ಲೀಗ್-ನವಾಜ್ ಮುಖ್ಯಸ್ಥ ನವಾಜ್ ಷರೀಫ್ ಅವರು ದಾಖಲೆಯ 4ನೇ ಬಾರಿಗೆ ಪ್ರಧಾನಿಯಾಗಲಿದ್ದಾರೆ ಎಂದು ಪಾಕಿಸ್ತಾನದ ಮಾಜಿ ಪ್ರಧಾನಿ ಶೆಹಬಾಜ್ ಷರೀಫ್ ಮಂಗಳವಾರ ಹೇಳಿಕೆ ನೀಡಿದ ಬೆನ್ನಲ್ಲೇ ಬಿಲಾವಲ್ ಈ ನಿರ್ಧಾರ ತೆಗೆದುಕೊಂಡಿದ್ದಾರೆ.

ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಬಿಲಾವಲ್, ಒಕ್ಕೂಟದಲ್ಲಿ ಸರ್ಕಾರ ರಚಿಸಲು ತಮ್ಮ ಪಕ್ಷವು ಜನಾದೇಶವನ್ನು ಪಡೆಯಲು ವಿಫಲವಾಗಿದೆ.



ಹೀಗಾಗಿ ನಾನು ಪಾಕಿಸ್ತಾನದ ಪ್ರಧಾನ ಮಂತ್ರಿಯ ಸ್ಪರ್ಧೆಯನ್ನು ಮುಂದುವರಿಸುವುದಿಲ್ಲ ಎಂದು ಹೇಳಿದ್ದಾರೆ. ದೇಶದಲ್ಲಿ ರಾಜಕೀಯ ಸ್ಥಿರತೆಯನ್ನು ತರಲು ಪಿಪಿಪಿ ಪಕ್ಷ ಪಿಎಂಎಲ್-ಎನ್ ಅಭ್ಯರ್ಥಿಯನ್ನು ಪ್ರಧಾನಿ ಹುದ್ದೆಗೆ ಬೆಂಬಲಿಸಲು ನಿರ್ಧರಿಸಿದೆ. ಸರ್ಕಾರ ರಚನೆ ಮತ್ತು ರಾಜಕೀಯ ಸ್ಥಿರತೆಗಾಗಿ ಇತರ ರಾಜಕೀಯ ಪಕ್ಷಗಳೊಂದಿಗೆ ತೊಡಗಿಸಿಕೊಳ್ಳಲು ಪಿಪಿಪಿ ಸಮಿತಿಯನ್ನು ರಚಿಸಲು ನಿರ್ಧರಿಸಿದೆ ಎಂದರು.

# ದೆಹಲಿ ಗಡಿಭಾಗದಲ್ಲಿ ಉದ್ವಿಗ್ನ ಪರಿಸ್ಥಿತಿ

**ನವದೆಹಲಿ:** ತಮ್ಮ ಬೇಡಿಕೆ ಈಡೇರಿಸಲು ರಾಷ್ಟ್ರ ರಾಜಧಾನಿಗೆ ಸಾವಿರಾರು ರೈತರ ಹಸಿರು ಸೇನೆ ಲಗ್ಗೆ ಇಡುತ್ತಿದೆ. ಪಂಜಾಬ್, ಹರಿಯಾಣ, ಕರ್ನಾಟಕ, ಕೇರಳದಿಂದ ರೈತರ ದಂಡು ದೆಹಲಿಯ ಗಡಿಭಾಗವನ್ನು ತಲುಪಿದೆ. ರಸ್ತೆಯುದ್ದಕ್ಕೆ ಸಾಲು, ಸಾಲು ಟ್ರ್ಯಾಕ್ಟರ್ಗಳು ದೆಹಲಿಯತ್ತ ಧಾವಿಸುತ್ತಾ ಇದ್ರೆ ಪೊಲೀಸರು ರೈತರನ್ನ ತಡೆಯಲು ಮುಳ್ಳಿನ ಕೋಟೆಯನ್ನೇ ನಿರ್ಮಿಸಿದ್ದಾರೆ.

ದೆಹಲಿಯ ಗಡಿಗಳಲ್ಲಿ ರೈತರು ಪ್ರವೇಶ ಮಾಡದಂತೆ ರಸ್ತೆಗೆ ಮುಳ್ಳುತಂತಿಯ ಬೇಲಿ, ರಸ್ತೆಗೆ ಕಾಂಕ್ರೀಟ್ ಗೋಡೆ ಕಟ್ಟಿ ಬಂದ್ ಮಾಡಲಾಗಿದೆ. ಸಾವಿರಾರು ರೈತರು ಜಮಾಯಿಸುತ್ತಾ ಇರೋದ್ರಿಂದ ದೆಹಲಿ-ನೋಯ್ಡಾ ಗಡಿಯ ಡಿಎನ್ಡಿ ರಸ್ತೆಯಲ್ಲಿ ಭಾರಿ ಟ್ರಾಫಿಕ್ ಜಾಮ್ ಆಗಿದೆ. ರೈತರು ದೆಹಲಿ ಪ್ರವೇಶಿಸದಂತೆ ರಸ್ತೆಗಳನ್ನು ಬಂದ್ ಮಾಡಿರುವ ಕಾರಣ ಕಿಲೋ ಮೀಟರ್ ಕ್ರಮಿಸೋದು ಕಷ್ಟವಾಗಿದೆ.

ರಾಷ್ಟ್ರ ರಾಜಧಾನಿಯಲ್ಲಿ ಅನ್ನದಾತರ ಪ್ರತಿಭಟನಾ ಕಹಳೆ ಮೊಳಗಿದೆ. ಬೆಂಬಲ ಬೆಲೆ, ವಿವಿಧ ಬೇಡಿಕೆಗಳ ಇಡೇರಿಕೆಗೆ ಆಗ್ರಹಿಸಿ ಅನ್ನದಾತರು ಫೀಲ್ಡ್ಗಿಳಿದಿದ್ದಾರೆ. ರೈತರು ದೆಹಲಿಗೆ ಟ್ರ್ಯಾಕ್ಟರ್ ಮೂಲಕ ಎಂಟ್ರಿಕೊಡ್ತಿರೋದನ್ನ ಕಂಡು, ಹರಿಯಾಣದ ಅಂಬಾಲದಲ್ಲಿರುವ ಶಂಭುಗಡಿಯಲ್ಲಿ ರೈತರನ್ನ ತಡೆಯಲು ಪೊಲೀಸರು ಅಶ್ರುವಾಯು ಸಿಡಿಸಿದ್ದಾರೆ. ಇದರಿಂದ ದೆಹಲಿ, ಹರಿಯಾಣ ಗಡಿಭಾಗದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ.

# 1 ಕೋಟಿ ಮನೆಗಳಿಗೆ 300 ಯೂನಿಟ್ ಉಚಿತ ವಿದ್ಯುತ್ : ಮೋದಿ ಘೋಷಣೆ





**ನವದೆಹಲಿ:** ಸೌರಶಕ್ತಿ ಮತ್ತು ಸುಸ್ಥಿರ ಪ್ರಗತಿಯನ್ನು ಹೆಚ್ಚಿಸುವ ಪ್ರಯತ್ನದಲ್ಲಿ, ತಮ್ಮ ಸರ್ಕಾರವು 'ಪಿಎಂ ಸೂರ್ಯ ಘರ್: ಮುಫ್ತ್ ಬಿಜ್ಲಿ ಯೋಜನೆ' ಅನ್ನು ಪ್ರಾರಂಭಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ಘೋಷಿಸಿದರು. ಸುಸ್ಥಿರ ಅಭಿವೃದ್ಧಿ ಮತ್ತು ಜನರ ಯೋಗಕ್ಷೇಮಕ್ಕಾಗಿ, ನಾವು ಪಿಎಂ ಸೂರ್ಯ ಘರ್: ಮುಫ್ತ್ ಬಿಜ್ಲಿ ಯೋಜನೆಯನ್ನು ಪ್ರಾರಂಭಿಸುತ್ತಿದ್ದೇವೆ. 75,000 ಕೋಟಿ ರೂ.ಗಳ ಹೂಡಿಕೆಯ ಈ ಯೋಜನೆಯು ಪ್ರತಿ ತಿಂಗಳು 300 ಯೂನಿಟ್ ವರೆಗೆ ಉಚಿತ ವಿದ್ಯುತ್ ಒದಗಿಸುವ ಮೂಲಕ 1 ಕೋಟಿ ಮನೆಗಳನ್ನು ಬೆಳಗಿಸುವ ಗುರಿಯನ್ನು ಹೊಂದಿದೆ'' ಎಂದು ಪ್ರಧಾನಿ ಹೇಳಿದರು. ಜನರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ನೀಡಲಾಗುವ ಗಣನೀಯ ಸಬ್ಸಿಡಿಗಳಿಂದ ಹಿಡಿದು ಭಾರಿ ರಿಯಾಯಿತಿಯ ಬ್ಯಾಂಕ್ ಸಾಲಗಳವರೆಗೆ, ಕೇಂದ್ರ ಸರ್ಕಾರವು ಜನರ ಮೇಲೆ ಯಾವುದೇ ವೆಚ್ಚದ ಹೊರೆಯಾಗದಂತೆ ನೋಡಿಕೊಳ್ಳುತ್ತದೆ ಎಂದು ಅವರು ಹೇಳಿದರು.

## ರಾಜಸಾನದಿಂದ ಸೋನಿಯಾ ಗಾಂಧಿ ರಾಜ್ಯಸಭೆಗೆ ಸ್ಪರ್ಧೆ

**ನವದೆಹಲಿ:** ಕಾಂಗ್ರೆಸ್‌ನ ಮಾಜಿ ಅಧ್ಯಕ್ಷೆ ಸೋನಿಯಾ ಗಾಂಧಿ ಅವರು ಮುಂಬರುವ ರಾಜ್ಯಸಭಾ ಚುನಾವಣೆಗೆ ರಾಜಸ್ಥಾನದಿಂದ ಬುಧವಾರ ನಾಮಪತ್ರ ಸಲ್ಲಿಸಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಐದು ಅವಧಿಗೆ ಲೋಕಸಭೆ ಸಂಸದೆಯಾಗಿ ಸೇವೆ ಸಲ್ಲಿಸಿದ ನಂತರ 77 ವರ್ಷದ ಸೋನಿಯಾ ಗಾಂಧಿ ಮೊದಲ ಬಾರಿಗೆ ರಾಜ್ಯಸಭಾ ಚುನಾವಣೆಗೆ ಸ್ಪರ್ಧಿಸುತ್ತಿದ್ದಾರೆ. ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ ಅವರ ಪುತ್ರ ರಾಹುಲ್ ಗಾಂಧಿ ಮತ್ತು ಪುತ್ರಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಭಾಗಿಯಾಗಲಿದ್ದಾರೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ. ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಕಳೆದ ವಾರ ಸೋನಿಯಾ ಗಾಂಧಿ ಅವರನ್ನು ಮುಂಬರುವ ಲೋಕಸಭೆ ಚುನಾವಣೆಯಲ್ಲಿ ರಾಜ್ಯದ ಖಮ್ಮಂ ಕ್ಷೇತ್ರದಿಂದ ಸ್ಪರ್ಧಿಸುವಂತೆ ಒತ್ತಾಯಿಸಿದ್ದರು. 15 ರಾಜ್ಯಗಳ 56 ಸ್ಥಾನಗಳಿಗೆ ರಾಜ್ಯಸಭಾ ಚುನಾವಣೆ ಫೆಬ್ರವರಿ 27 ರಂದು ನಡೆಯಲಿದೆ. ನಾಮಪತ್ರ ಸಲ್ಲಿಸಲು ಫೆಬ್ರವರಿ 15 ಕೊನೆಯ ದಿನಾಂಕವಾಗಿದೆ. 1999 ರಿಂದ ಸೋನಿಯಾ



ಗಾಂಧಿ ಲೋಕಸಭೆ ಚುನಾವಣೆಯನ್ನು ಗೆಲ್ಲುತ್ತಾ ಬಂದಿದ್ದಾರೆ. 1999 ರಲ್ಲಿ ಉತ್ತರ ಪ್ರದೇಶದ ಅಮೇಠಿ ಮತ್ತು ಕರ್ನಾಟಕದ ಬಳ್ಳಾರಿಯಿಂದ ಸ್ಪರ್ಧಿಸಿ ಗೆದ್ದಿದ್ದ ಅವರು 2004ರ ಚುನಾವಣೆಯಿಂದ 2019ರ ಚುನಾವಣೆಯವರೆಗೂ ಉತ್ತರ ಪ್ರದೇಶದ ರಾಯ್‌ಬರೇಲಿಯಿಂದ ಸತತವಾಗಿ ಆಯ್ಕೆ ಆಗಿದ್ದರು. ಅನಾರೋಗ್ಯ ಕಾರಣದಿಂದ 2024ರ ಲೋಕಸಭಾ ಚುನಾವಣೆಗೆ ಸೋನಿಯಾ ಗಾಂಧಿ ಸ್ಪರ್ಧಿಸುತ್ತಿಲ್ಲ ಎಂಬ ಮಾತು ರಾಜಕೀಯ ವಲಯದಲ್ಲಿ ಹರಿದಾಡಿತ್ತು.

## ತೇಜಸ್ವಿ ಯಾದವ್ ವಿರುದ್ಧದ ಕ್ರಿಮಿನಲ್ ಮಾನನಷ್ಟ ಪ್ರಕರಣ ರದ್ದು

**ಗುಜರಾತ್:** ಗುಜರಾತಿಗಳನ್ನು ದರೋಡೆಕೋರರು ಎಂದು ಉಲ್ಲೇಖಿಸಿದ ಆರೋಪದಲ್ಲಿ ಆರ್ಜೆಡಿ ನಾಯಕ ಹಾಗೂ ಬಿಹಾರದ ಮಾಜಿ ಉಪ ಮುಖ್ಯಮಂತ್ರಿ ತೇಜಸ್ವಿ ಯಾದವ್ ಅವರ ವಿರುದ್ಧ ದಾಖಲಿಸಲಾಗಿದ್ದ ಕ್ರಿಮಿನಲ್ ಮಾನನಷ್ಟ ಪ್ರಕರಣವನ್ನು ಸುಪ್ರೀಂ ಕೋರ್ಟ್ ಮಂಗಳವಾರ ರದ್ದುಗೊಳಿಸಿದೆ.



ಗುಜರಾತಿಗಳಿಗೆ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿ ಅಹ್ಮದಾಬಾದ್ ಮೂಲದ ಸ್ವಯಂ ಸೇವಾ ಸಂಘಟನೆ ಆಲ್ ಇಂಡಿಯಾ ಆಯಂಟಿ ಕರಪ್ಶನ್ ಆಯಂಡ್ ಕ್ರೈಮ್ ಪ್ರಿವೆಂಟಿವ್ ಕೌನ್ಸಿಲ್ (ಗುಜರಾತ್ ರಾಜ್ಯ) ನ ಅಧ್ಯಕ್ಷ ಹರೇಶ್ ಮೆಹ್ತಾ ಅವರು ತೇಜಸ್ವಿ ಯಾದವ್ ಅವರ ವಿರುದ್ಧ ದೂರು ದಾಖಲಿಸಿದ್ದರು. ನವೆಂಬರ್ 6ರಂದು ದೂರುದಾರರಿಗೆ ನೋಟಿಸು ಜಾರಿ ಮಾಡಿದ ಸುಪ್ರೀಂ ಕೋರ್ಟ್ ಪ್ರಕರಣದ ಮುಂದಿನ ವಿಚಾರಣೆಗೆ ತಡೆ ನೀಡಿತ್ತು. ಅನಂತರ ತೇಜಸ್ವಿ ಯಾದವ್ ಅವರು ತನ್ನ ಹೇಳಿಕೆ ಹಿಂಪಡೆಯುವ ಅಫಿಡಾವಿಟ್ ಸಲ್ಲಿಸಿದ್ದರು. ಆದರೆ, ಅಫಿಡಾವಿಟ್ ಗೆ ಆಕ್ಷೇಪ ವ್ಯಕ್ತಪಡಿಸಿದ ಹರೇಶ್ ಮೆಹ್ತಾ, ಅವರು ಹೇಳಿಕೆಯನ್ನು ಹಿಂಪಡೆದಿರುವುದು ಸ್ಪಷ್ಟವಾಗಿಲ್ಲ ಎಂದಿದ್ದರು. ಈ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ಹೊಸ ಅಫಿಡಾವಿಟ್ ಸಲ್ಲಿಸುವಂತೆ ತೇಜಸ್ವಿ ಯಾದವ್ ಅವರಿಗೆ ನಿರ್ದೇಶಿಸಿತ್ತು. ಮಂಗಳವಾರ ನ್ಯಾಯಮೂರ್ತಿಗಳಾದ ಅಭಯ್ ಎಸ್. ಓಕಾ ಹಾಗೂ ಉಜ್ಜಲ್ ಭುಯಾನ್ ಅವರನ್ನು ಒಳಗೊಂಡ ಪೀಠ ತೇಜಸ್ವಿ ಯಾದವ್ ವಿರುದ್ಧದ ಕ್ರಿಮಿನಲ್ ಮಾನನಷ್ಟ ಪ್ರಕರಣವನ್ನು ರದ್ದುಗೊಳಿಸಿತು.

# ರೈತರ ಪ್ರತಿಭಟನೆ ವಿರುದ್ಧ ಸುಪ್ರೀಂ ಕೋರ್ಟ್‌ಗೆ ವಕೀಲರ ಸಂಘದ ಅರ್ಜಿ



**ನವದೆಹಲಿ:** ಕನಿಷ್ಠ ಬೆಂಬಲ ಬೆಲೆ ಸೇರಿದಂತೆ ಹಲವು ಬೇಡಿಕೆ ಮುಂದಿಟ್ಟು ಭಾರಿ ಸಂಖ್ಯೆಯಲ್ಲಿ ರೈತರು ದೆಹಲಿಯತ್ತ ನುಗ್ಗಿದ್ದಾರೆ. ಅತೀ ದೊಡ್ಡ ರೈತ ಪ್ರತಿಭಟನೆ ಆರಂಭಗೊಂಡಿದೆ. ದೆಹಲಿಯ ಗಡಿ ಭಾಗಗಳನ್ನು ದೆಹಲಿ ಪೊಲೀಸರು ಮುಚ್ಚಿದ್ದಾರೆ. ಪ್ರತಿಭಟನಾಕಾರರ ಮೇಲೆ ಆಶ್ರುವಾಯು ಸಿಡಿಸಲಾಗಿದೆ. ಇತ್ತಪ್ರತಿಭಟನಾ ನಿರತ ರೈತರು ಟ್ರಾಕ್ಟರ್ ಸೇರಿದಂತೆ ಹಲವು ವಾಹನಗಳ ಮೂಲಕ ದೆಹಲಿಯತ್ತ ಧಾವಿಸಿದ್ದಾರೆ. ಈ ಪ್ರತಿಭಟನೆ ಜೋರಾಗುತ್ತಿದ್ದಂತೆ ಸುಪ್ರೀಂ ಕೋರ್ಟ್ ಬಾರ್ ಅಸೋಸಿಯೇಶನ್ ಅಧ್ಯಕ್ಷ ಮುಖ್ಯ ನ್ಯಾಯಮೂರ್ತಿಗೆ ಅರ್ಜಿ ಸಲ್ಲಿಸಿದ್ದಾರೆ. ರೈತ ಪ್ರತಿಭಟನೆ ನಡೆಸುವವರ ವಿರುದ್ಧ ಸ್ವಯಂ ಪ್ರೇರಿತವಾಗಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ದೆಹಲಿ ಚಲೋ ರೈತ ಪ್ರತಿಭಟನೆ ಹಮ್ಮಿಕೊಂಡವರ ವಿರುದ್ಧ ಸುಪ್ರೀಂ ಕೋರ್ಟ್ ಸ್ವಯಂ ಪ್ರೇರಿತವಾಗಿ ಕ್ರಮ ಜರುಗಿಸಬೇಕು ಎಂದು ಮುಖ್ಯನ್ಯಾಯಮೂರ್ತಿ ಡಿವೈ ಚಂದ್ರಚೂಡ್ಗೆ ಬಾರ್ ಅಸೋಸಿಯೇಶನ್ ಅಧ್ಯಕ್ಷ ಆದಿಶ್ ಅಗರ್ವಾಲ್ ಅರ್ಜಿ ಸಲ್ಲಿಸಿದ್ದಾರೆ.ಪಂಜಾಬ್, ಹರ್ಯಾಣ, ಉತ್ತರ ಪ್ರದೇಶ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ರೈತರು ಪ್ರತಿಭಟನೆ ಹೆಸರಿನಲ್ಲಿ ದೆಹಲಿಗೆ ಆಗಮಿಸಿದ್ದಾರೆ. ಇದರಿಂದ ಸಾಮಾನ್ಯರ ಜನಜೀವನ ಅಸ್ತವ್ಯಸ್ಥವಾಗಿದೆ. ತುರ್ತು ಚಿಕಿತ್ಸೆ ಬೇಕಿದ್ದ ರೋಹಿಗಳಿಗೆ ಚಿಕಿತ್ಸೆ ಸಿಗದಂತಾಗಿದೆ.

## ಫ್ಲೂ: 14,000 ಪಕ್ಷಿಗಳನ್ನು ಕೊಂದ ಜಪಾನ್

**ಜಪಾನ್:** ಜಪಾನ್‌ನಲ್ಲಿ ಏವಿಯನ್ ಫ್ಲೂ ಕಾಣಿಸಿಕೊಂಡ ಹಿನ್ನೆಲೆ 14 ಸಾವಿರ ಪಕ್ಷಿಗಳನ್ನು ಕೊಲ್ಲಲಾಗಿದೆ ಎಂದು ಮಾಹಿತಿ ಲಭಿಸಿದೆ. ಕಾಗೋಶಿಮಾದ ಮಿನಾಮಿಸಾತ್ಸುಮಾ ನಗರದ ಕೋಳಿ ಫಾರ್ಮ್‌ನಲ್ಲಿ ಏವಿಯನ್ ಇನ್ಫ್ಲುಯೆಂಜಾ ಕಾಣಿಸಿಕೊಂಡಿದೆ. ಈ ಫ್ಲೂ ಕಾಣಿಸಿಕೊಂಡಂತೆ ಹತ್ತಿರದ ಫಾರ್ಮ್‌ನಲ್ಲಿರುವ ಕೋಳಿಗಳನ್ನು ಸಹ ಕೊಲ್ಲಲಾಗಿದೆ. ಇದರ ಜೊತೆಗೆ ಈ ರೋಗ ಹರಡದಂತೆ ಪಕ್ಷಿಗಳನ್ನು ಸಹ ಕೊಲ್ಲಲಾಗಿದೆ. ಸದ್ಯ ಜಪಾನ್ನಲ್ಲಿ ಸೋಂಕು ಹರಡದಂತೆ ಅಲ್ಲಿನ ಸರ್ಕಾರ ಕಟ್ಟೆಚ್ಚರ ವಹಿಸಿದೆ ಎಂದು ತಿಳಿದುಬಂದಿದೆ.



# ಪಾಕ್‌ನಲ್ಲಿ ಹಿಂಸಾಚಾರದಿಂದ ಅಭಿವೃದ್ಧಿಗೆ ಹಿನ್ನಡೆ: ವಿಶ್ವಸಂಸ್ಥೆ



**ವಿಶ್ವಸಂಸ್ಥೆ:** ಪಾಕಿಸ್ತಾನದಲ್ಲಿ ಕಳೆದ ಗುರುವಾರ ನಡೆದ ಸಾರ್ವತ್ರಿಕ ಚುನಾವಣೆಯ ಬಗ್ಗೆ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಕಳವಳ ವ್ಯಕ್ತಪಡಿಸಿದ್ದಾರೆ.

ಪಾಕಿಸ್ತಾನದ ಪರಿಸ್ಥಿತಿಯನ್ನು ಬಹಳ ಹತ್ತಿರದಿಂದ ನೋಡಿದ್ದೇನೆ ತ್ರೀವ್ರ. ಹಿಂಸಾಚಾರದಿಂದ ಅಭಿವೃದ್ಧಿ ಹಳಿ ತಪ್ಪುತ್ತಿದ್ದು ಕೂಡಲೆ ಸರಿ ದಾರಿಗೆ ಬರುವಂತೆ ಅಧಿಕಾರಿಗಳು ಮತ್ತು ರಾಜಕೀಯ ಮುಖಂಡರನ್ನು ಒತ್ತಾಯಿಸಿದ್ದಾರೆ.

ಪಾಕಿಸ್ತಾನದ ಚುನಾವಣೆಯ ಪರಿಸ್ಥಿತಿಯನ್ನು ನೋಡಿದರೆ ನಿಜವಾಗಿಯೂ ಬಹಳ ಕಟ್ಟದ್ದಾಗಿತ್ತು. ಸ್ಥಾಪಿತ ಕಾನೂನು ಚೌಕಟ್ಟಿನಲ್ಲಿ ಎಲ್ಲಾ ಸಮಸ್ಯೆಗಳು ಮತ್ತು ವಿವಾದಗಳನ್ನು ಪರಿಹರಿಸಬಹುದು ,ಪಾಕಿಸ್ತಾನದ ಜನರ ಹಿತಾಸಕ್ತಿಯಲ್ಲಿ ಮಾನವ ಹಕ್ಕುಗಳು ಮತ್ತು ಕಾನೂನಿನ ನಿಯಮವನ್ನು ಸಂಪೂರ್ಣವಾಗಿ ಗೌರವಿಸಲು ಆಂಟೋನಿಯೊ ಗುಟೆರೆಸ್ ಕರೆ ನೀಡುತ್ತಾರೆ. ಶಾಂತಿ ಕಾಪಾಡಿ ,ದೇಶದದ ಅಭಿವೃದ್ಧಿಯ ಬಗ್ಗೆ ಗಮನವಿರಲಿ ಹಿಂಸಾಚಾರ ಹಾಗು ಉದ್ವಿಘ್ನ ಪರಿಸ್ಥಿತಿ ನಿನಾಯಿಸಲು ಕ್ರಮ ಕೈಗೊಳ್ಳಿ ಎಂದು ಸಲಹೆ ನೀಡಿದ್ದಾರೆ. ಪ್ರಸ್ತುತ ಜೈಲಿನಲ್ಲಿರುವ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಪಾಕಿಸ್ತಾನ್ ತೆಹ್ರೀಕ್-ಇ-ಇನ್ಸಾ-್ (ಪಿಟಿಐ) ಪಕ್ಷ ಮತ್ತು ಮಾಜಿ ಪ್ರಧಾನಿ ನವಾಜ್ ಷರೀ ಅವರ ಪಾಕಿಸ್ತಾನ್ ಮುಸ್ಲಿಂ ಲೀಗ್-ನವಾಜ್ (ಪಿಎಂಎಲ್ -ಎನ್) ಎರಡೂ ಪಕ್ಷಗಳು ಹೆಚ್ಚು ಸ್ಥಾನ ಗಳಿಸಿವೆ, ಆದರೆ ಯಾವುದೇ ಪಕ್ಷಕ್ಕೆ ಬಹುಮತ ಸಿಕ್ಕಿಲ್ಲ ಹಾಗಾಗಿ ಸಮ್ಮಿಶ್ರ ಸರ್ಕಾರ ಅನಿವಾರ್ಯವಾಗಿದೆ ಎಂದಿದ್ದಾರೆ.

# ಪನ್ನೂನ್ ಆಪ್ತನ ಮನೆಯ ಮೇಲೆ ಗುಂಡಿನ ದಾಳಿ

**ಟೊರಂಟೊ:** ಖಾಲಿಸ್ತಾನ್ ಪ್ರತ್ಯೇಕತಾವಾದಿ ಮುಖಂಡ ಗುರುಪತ್ವಂತ್ ಸಿಂಗ್ ಪನ್ನೂನ್ ಆಪ್ತನ ಮನೆಯ ಮೇಲೆ ಸೋಮವಾರ ಬೆಳಿಗ್ಗೆ ಗುಂಡಿನ ದಾಳಿ ನಡೆದಿದೆ ಎಂದು ಕೆನಡಾ ಪೊಲೀಸರು ಹೇಳಿದ್ದಾರೆ. ಕೆನಡಾದ ಗ್ರೇಟರ್ ಟೊರಂಟೊ ಪ್ರದೇಶದ ಬ್ರಾಂಪ್ಟನ್ ನಗರದಲ್ಲಿ ನಿರ್ಮಾಣ ಹಂತದಲ್ಲಿರುವ ಮನೆಯ ಮೇಲೆ ಗುಂಡಿನ ದಾಳಿ ನಡೆದಿದೆ. ಪನ್ನೂನ್ ನಿಕಟವರ್ತಿ, ಸಿಖ್ಸ್ ಫಾರ್ ಜಸ್ಟಿಸ್(ಎಸ್‌ಎಫ್ಜೆ) ಕಾರ್ಯಕರ್ತ ಇಂದರ್ಜಿತ್ ಸಿಂಗ್ ಗೊಸಾಲ್ಗೆ ಸೇರಿದ ಮನೆ ಇದಾಗಿದೆ. ಹರ್ದೀಪ್ ಸಿಂಗ್ ನಿಜ್ಜಾರ್ ಜೂನ್ 18ರಂದು ಹತನಾದ ಬಳಿಕ ಎಸ್ ಎಫ್ಜೆ ಸಂಯೋಜಕರಾಗಿ ಕಾರ್ಯನಿರ್ವಹಿಸುತ್ತಿರುವ ಇಂದರ್ಜಿತ್ ಸಿಂಗ್, ಸೆಪ್ಟಂಬರ್ 23ರಂದು ಬ್ರಿಟಿಷ್ ಕೊಲಂಬಿಯಾದ ಸರ್ರೆ ನಗರದಲ್ಲಿ 'ಖಾಲಿಸ್ತಾನ್ ಜನಮತ ಸಂಗ್ರಹ' ಕಾರ್ಯಕ್ರಮ ಆಯೋಜಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಮತ್ತು ಫೆಬ್ರವರಿ 17ರಂದು ಟೊರಂಟೊದಲ್ಲಿರುವ ಭಾರತೀಯ ಕಾನ್ಸುಲೇಟ್ ಕಚೇರಿಯೆದುರು ಪ್ರತಿಭಟನೆಗೆ ಕರೆ ನೀಡಿರುವುದಾಗಿ ವರದಿಯಾಗಿದೆ. ಎಸ್‌ಎಫ್ಜೆ ಪರ ಸಕ್ರಿಯವಾಗಿ ಕೆಲಸ ಮಾಡುತ್ತಿರುವ ತನ್ನನ್ನು, ನಿಜ್ಜಾರ್ ಹತ್ಯೆಯ ರೀತಿಯಲ್ಲೇ ಮುಗಿಸಿಬಿಡಲು ಭಾರತದ ಏಜೆಂಟರು ಪ್ರಯತ್ನಿಸುತ್ತಿದ್ದಾರೆ ಎಂದು ಇಂದರ್ಜಿತ್ ಸಿಂಗ್ ಆರೋಪಿಸಿದ್ದಾರೆ.



# ಜಯಾ ಬಚ್ಚನ್ ನಾಮಪತ್ರ ಸಲ್ಲಿಕೆ

**ಲಕ್ನೋ:** ಫೆ.27ರಂದು ನಡೆಯಲಿರುವ ರಾಜ್ಯಸಭೆ ಚುನಾವಣೆಗೆ ಎಸ್ಪಿ ನಾಲ್ವರು ಅಭ್ಯರ್ಥಿಗಳ ಹೆಸರನ್ನು ಘೋಷಿಸಿದೆ. ಹಾಲಿ ಸಂಸದೆ ಮತ್ತು ನಟಿ ಜಯಾ ಬಚ್ಚನ್ ಅವರಿಗೆ ಮತ್ತೊಮ್ಮೆ ಸ್ಪರ್ಧಿಸಲು ಅವಕಾಶ ನೀಡಲಾಗಿದೆ.



ಜತೆಗೆ ದಲಿತ ಮುಖಂಡ ರಾಮ್ಜಿ ಲಾಲ್ ಸುಮನ್ ಹಾಗೂ ನಿವೃತ್ತ ಐಎಎಸ್ ಅಧಿಕಾರಿ ಅಲೋಕ್ ರಂಜನ್ ಹೆಸರಿಸಿದೆ. ಎಸ್ಪಿ ವರಿಷ್ಠ ಅಖಿಲೇಶ್ ಯಾದವ್ ನೇತೃತ್ವದಲ್ಲಿ ಮೂವರೂ ಮಂಗಳವಾರ ನಾಮಪತ್ರ ಸಲ್ಲಿಸಿದ್ದಾರೆ. ಉತ್ತರಪ್ರದೇಶ ವಿಧಾನಸಭೆಯಲ್ಲಿ 108 ಶಾಸಕರನ್ನು ಹೊಂದಿರುವ ಎಸ್ಪಿ, ಮೂವರನ್ನು ರಾಜ್ಯಸಭೆಗೆ ಕಳುಹಿಸುವ ಸಾಮರ್ಥ್ಯ ಹೊಂದಿದೆ.

# ಜಿಯೋಸಿನಿಮಾದಿಂದ ಜಾಹೀರಾತುದಾರರಿಗೆ ವಿಶಿಷ್ಟ ಕೊಡುಗೆಗಳು

JioCinema
INDIAN PREMIER LEAGUE

**ಮುಂಬೈ:** ಮುಂದಿನ ಐಪಿಎಲ್ ಋತು ಆರಂಭವಾಗುವುದಕ್ಕೆ ಕ್ರಿಕೆಟ್ ಅಭಿಮಾನಿಗಳಲ್ಲಿ ನಿರೀಕ್ಷೆ ಶುರುವಾಗಿದೆ. 2024ನೇ ಸಾಲಿನ ಇಂಡಿಯನ್ ಪ್ರೀಮಿಯರ್ ಲೀಗ್ ಹಿನ್ನೆಲೆಯಲ್ಲಿ ವಯಾಕಾಮ್ 18ನಿಂದ ಜಾಹೀರಾತುದಾರರಿಗೆ ಹಲವು ನಾವೀನ್ಯತೆಗಳನ್ನು ಆರಂಭಿಸುವುದಾಗಿ ಘೋಷಣೆ ಮಾಡಲಾಗಿದೆ. ಭಾರತೀಯ ಪ್ರಸಾರ ವ್ಯವಸ್ಥೆಯಲ್ಲೇ ಇದೇ ಮೊದಲ ಬಾರಿಗೆ ಎಂಬಂಥ ವಿಶಿಷ್ಟ ಆಫರ್ ಗಳನ್ನು ಸಹ ಇದು ಒಳಗೊಂಡಿದೆ. ಕಳೆದ ಬಾರಿಯ ಐಪಿಎಲ್ ಋತುವಿನಲ್ಲಿ ಸಾಂಪ್ರದಾಯಿಕ ಟೀವಿ ಜಾಹೀರಾತುಗಳಿಗೆ ಬರುವುದಕ್ಕಿಂತ ಹೆಚ್ಚಿನ ಆದಾಯವು ಡಿಜಿಟಲ್ ಜಾಹೀರಾತು ಆದಾಯದ ಮೂಲಕ ಬಂದಿತ್ತು.ಜಾಹೀರಾತುದಾರರ ಆದ್ಯತೆಯ ಪ್ಲಾಟ್ ಫಾರ್ಮ್ ಆಗಿ ಡಿಜಿಟಲ್ ಹೊರಹೊಮ್ಮಿತ್ತು. ಜಾಹೀರಾತುದಾರರ ಮಾರ್ಕೆಟಿಂಗ್ ಗುರಿಗಳು ಅಥವಾ ಉದ್ಯಮದ ವ್ಯಾಪ್ತಿಯನ್ನು ಮೀರಿ ಜಿಯೋಸಿನಿಮಾ ನೀಡುತ್ತಿರುವ ಆಫರ್ ಪ್ರಮಾಣವನ್ನು ವಿಸ್ತರಿಸಿಕೊಂಡಿದೆ. ಡಿಜಿಟಲ್ ಪ್ಲಾಟ್ ಫಾರ್ಮ್‌ನಿಂದ ಯಾವ ಪ್ರಮಾಣದ ಬೆಂಬಲ, ವ್ಯಾಪಕತೆ ದೊರೆಯುತ್ತದೆ ಎಂದು ಜಾಹೀರಾತುದಾರರು ಗುರಿ ಇರಿಸಿಕೊಂಡಿರುತ್ತಾರೋ ಅದನ್ನು ಮೀರಿದ ಫಲಿತಾಂಶ ದೊರಕಿಸಲು ಎಲ್ಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಬ್ರ್ಯಾಂಡ್ ದೃಷ್ಟಿಯಿಂದ ಉತ್ತಮ ಪ್ರಭಾವ ಬೀರುವಂತೆ, ತೀಕ್ಷ್ಣವಾದ ಬ್ರ್ಯಾಂಡ್ ಸಂಯೋಜನೆಗೆ, ಘರ್ಷಣೆಯಿಂದ ಮುಕ್ತವಾಗಿ ತಲೆಮಾರುಗಳನ್ನು ಮುನ್ನಡೆಸುವುದು, ನಾವೀನ್ಯತೆ ಮೂಲಕ ಹೆಚ್ಚು ತೊಡಗಿಕೊಳ್ಳುವುದು ಸಾಧ್ಯವಾಗುವಂತೆ ಹೀಗೆ ನಿರ್ದಿಷ್ಟವಾಗಿ ಎಲ್ಲವನ್ನೂ ಅಭಿವೃದ್ಧಿ ಪಡಿಸಲಾಗಿದೆ. 2024ನೇ ಸಾಲಿನ ಐಪಿಎಲ್ ಋತುವಿಗೆ ಜಾಹೀರಾತುದಾರರಿಗೆ ಜಿಯೋಸಿನಿಮಾ ಏನೇನು ಒದಗಿಸಲಿದೆ ಎಂಬುದರ ಬಗೆಗಿನ ಮುನ್ನೋಟ ಇಲ್ಲಿದೆ. ಜಿಯೋಸಿನಿಮಾ ಹೊಸದಾಗಿ ಹೆಚ್ಚು ಪರಿಣಾಮಕಾರಿಯಾದ ಫೀಚರ್‌ಗಳನ್ನು ಆರಂಭಿಸಲಾಗಿದೆ. ಐಪಿಎಲ್ ಮೂಲಕ ಬ್ರ್ಯಾಂಡ್ ಮೌಲ್ಯವನ್ನು ಹೆಚ್ಚಿಸುವುದಕ್ಕೆ ಬೇಕಾದದ್ದೆಲ್ಲವನ್ನೂ ಮಾಡಲಾಗುತ್ತಿದೆ. ಅದರಲ್ಲೂ ಐಪಿಎಲ್ ಉದ್ಘಾಟನಾ ದಿನಕ್ಕೆ ಹೇಗೆ ವೀಕ್ಷಕರನ್ನು ತಲುಪಿಸಬೇಕು ಎಂಬುದಕ್ಕೆ ದಾರಿ ಯೋಜಿಸಲಾಗಿದೆ. ಆಯ್ದ ಐದು ಬ್ರ್ಯಾಂಡ್‌ಗಳು ಉದ್ಘಾಟನಾ ದಿನದಂದು ಈ ಕ್ಷೇತ್ರದಲ್ಲೇ ಮೊದಲ ಬಾರಿಗೆ ಎಂಬಂತೆ ವೀಕ್ಷಕರನ್ನು ತಲುಪಲು ಅಮೋಘ ಅವಕಾಶ ಪಡೆಯುತ್ತವೆ. ಸಮೂಹ ಮಾಧ್ಯಮ ಅಭಿಯಾನದ ಸಾಂಪ್ರದಾಯಿಕ ಗಡಿಗಳನ್ನು ಮೀರಿ ಬ್ರ್ಯಾಂಡ್‌ಗಳು ಅನುಕೂಲ ಒದಗಿಸುತ್ತವೆ. ಈ ಐಪಿಎಲ್ ಅಭಿಯಾನದ ಹಿಂದಿರುವ ಕಥೆಯನ್ನು ಜಿಯೋಸಿನಿಮಾ ಅಪ್ಲಿಕೇಷನ್ ಮೂಲಕ ಹೇಳಬಹುದು. ಬ್ರ್ಯಾಂಡ್ ಮೇಲೆ ಬೆಳಕು ಚೆಲ್ಲುವುದರ ಜತೆಗೆ ಜಿಯೋಸಿನಿಮಾದ ಮಾಸ್ಟ್ ಹೆಡ್ ಈ ಋತುವಿನ ವಿಡಿಯೋ ಜತೆಗೆ ಬೆಂಬಲಿಸುತ್ತದೆ. ಇನ್ನು ಬ್ರ್ಯಾಂಡ್‌ಗಳು ಹೊಸ ಉತ್ಪನ್ನಗಳನ್ನು ಘೋಷಿಸಬಹುದು. ಜತೆಗೆ ಮಾರಾಟ, ಹೊಸ ಕ್ರಿಯೇಟಿವ್ಸ್ ಮತ್ತಷ್ಟು ಮಾಡಬಹುದು. ಸ್ಕೋರ್ ಕಾರ್ಡ್ ಬ್ರ್ಯಾಂಡಿಂಗ್ ಸಹ ಮಾಡಬಹುದು. ಇದರಿಂದ ವೀಕ್ಷಕರ ಮನದಲ್ಲಿ ಇನ್ನಷ್ಟು ಆಳವಾಗಿ ಇಳಿಯಬಹುದು. ಕಳೆದ ಐಪಿಎಲ್ ಋತುವಿನಲ್ಲಿ ಹತ್ತಕ್ಕೂ ಹೆಚ್ಚು ಫೀಡ್ ಗಳನ್ನು ಪ್ರಾಯೋಗಿಕವಾಗಿ ಪ್ರಯತ್ನಿಸಿದ ಮೇಲೆ ಈ ಬಾರಿ ಜಿಯೋಸಿನಿಮಾದಿಂದ ಸಂಪೂರ್ಣ ಫೀಡ್ ಬಳಸಿಕೊಳ್ಳಲು ಜಾಹೀರಾತುದಾರರಿಗೆ ಅವಕಾಶ ನೀಡಲಾಗುತ್ತಿದೆ. ಈ ಬಾರಿ ನಾವೀನ್ಯತೆ ಏನೆಂದರೆ, ವರ್ಟಿಕಲ್ ಮುಖ್ಯಾಂಶಗಳು, ಸೋಷಿಯಲ್ ಮೀಡಿಯಾದಲ್ಲಿ ಸದ್ಯಕ್ಕೆ ಟ್ರೆಂಡ್ ನಲ್ಲಿ ಇರುವಂಥ ಸಣ್ಣ ಅವಧಿಯ ವಿಡಿಯೋಗಳನ್ನು ಸಹ ಪರಿಚಯಿಸಲಾಗಿದೆ.ಕ್ಲಿಕ್ ಟು ವಾಟ್ಸಾಪ್ ಎಂಬ ಫೀಚರ್ ಪರಿಚಯಿಸುತ್ತಿದ್ದು, ಒಂದು ಕ್ಲಿಕ್ ಮೂಲಕ ವೀಕ್ಷಕರು ಬ್ರ್ಯಾಂಡ್ ಉದ್ಯಮದ ಚಾಟ್ ನಡೆಸಬಹುದು. ಜಾಹೀರಾತುಗಳು ತೆರೆ ಮೇಲೆ ಇರುತ್ತದೆ. ಐಪಿಎಲ್ ಅನ್ನು ಪಿಕ್ಚರ್ ಇನ್ ಪಿಕ್ಚರ್ ಮೋಡ್ ನಲ್ಲಿ ನೋಡುವಾಗ ಜಿಯೋಸಿನಿಮಾದ ಮೂಲಕ ವಾಟ್ಸಾಪ್ ಚಾಟ್ ಮಾಡುವುದಕ್ಕೆ ಅವಕಾಶ ಇದೆ. ಇದೇ ರೀತಿ ಹಲವು ಫೀಚರ್ ಇದೆ.

ಸಂಜೆ ಮುಗಿಲು
Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಜಪಾನ್‌ನಲ್ಲಿ ಆಮೀರ್ ಖಾನ್ ಪುತ್ರನ ಜೊತೆ ಸಾಯಿ ಪಲ್ಲವಿ

ಬಾಲಿವುಡ್ ಸ್ಟಾರ್ ನಟ ಆಮೀರ್ ಖಾನ್ ಪುತ್ರ, ಜುನೈದ್ ಖಾನ್ ಜೊತೆ ಜಪಾನ್‌ನಲ್ಲಿ ಸಾಯಿ ಪಲ್ಲವಿ ಕಾಣಿಸಿಕೊಂಡಿದ್ದಾರೆ. ಒಟ್ಟಾಗಿರುವ ಜುನೈದ್- ಸಾಯಿ ಪಲ್ಲವಿ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿವೆ.

ಸೌತ್‌ನ ಕೆಂಪು ಗಲ್ಲದ ಸುಂದರಿ ಸಾಯಿ ಪಲ್ಲವಿ ಅವರು ದೂರದ ಜಪಾನ್‌ನಲ್ಲಿ ಜುನೈದ್ ಜೊತೆ ಜೋಡಿಯಾಗಿ ಕಾಣಿಸಿಕೊಂಡಿದ್ದಾರೆ. ಹೊಸ ಸಿನಿಮಾವೊಂದರ ಚಿತ್ರೀಕರಣಕ್ಕಾಗಿ ಜಪಾನ್‌ನಲ್ಲಿ ಸಾಯಿ ಪಲ್ಲವಿ ಟೀಮ್ ಬೀಡು ಬಿಟ್ಟಿದೆ. ಆಮೀರ್ ಖಾನ್ ಅವರ ಪುತ್ರ, ಜುನೈದ್ ಖಾನ್ ಅವರಲ್ಲಿ ಸೂಪರ್ ಮ್ಯಾನ್ ಚಾಯೆ ಕೂಡ ಕಂಡು ಬರುತ್ತಿದೆ. ಸಾಯಿ ಪಲ್ಲವಿ ಹಿಂದಿ ಚಿತ್ರರಂಗಕ್ಕೆ ನಾಯಕಿಯಾಗಿ ಅಧಿಕೃತವಾಗಿ ಕಾಲಿಡ್ತಿದ್ದಾರೆ.

ಕೆಲವು ತಿಂಗಳುಗಳಿಂದ ಆಮೀರ್ ಪುತ್ರ ಚಿತ್ರರಂಗಕ್ಕೆ ಎಂಟ್ರಿ ಕೊಡುವ ಬಗ್ಗೆ ಭಾರೀ ಸುದ್ದಿಯಾಗಿತ್ತು. ಆದರೆ ಯಾವುದೇ ಸ್ಪಷ್ಟನೆ ಸಿಕ್ಕಿರಲಿಲ್ಲ. ಈ ಹಿಂದೆಯೇ ಆಮೀರ್ ಪುತ್ರನಿಗೆ





ಸಾಯಿ ಪಲ್ಲವಿ ನಾಯಕಿ ಎಂದು ಕೂಡ ಸಖತ್ ಸುದ್ದಿಯಾಗಿತ್ತು. ಇದೀಗ ವೈರಲ್ ಆಗಿರುವ ಫೋಟೋ ಮೂಲಕ ಗಾಸಿಪ್‌ಗೆ ತೆರೆಬಿದ್ದಿದೆ.

ಜುನೈದ್ ಖಾನ್‌ಗೆ ನಾಯಕಿಯಾಗುವ ಮೂಲಕ ಬಾಲಿವುಡ್‌ಗೆ ಸಾಯಿ ಪಲ್ಲವಿ ಪಾದಾರ್ಪಣೆ ಮಾಡಿದ್ದಾರೆ. ಸೌತ್‌ನಲ್ಲಿ ಗೆದ್ದ ಹಾಗೇ ಬಾಲಿವುಡ್ ನಲ್ಲಿಯೂ ಗೆದ್ದು ಬೀಗುತ್ತಾರಾ ಕಾದುನೋಡಬೇಕಿದೆ.



# ಪ್ರೇಮಿಗಳ ದಿನಕ್ಕೆ ಸಮರ್- ಸಾನ್ಯಾ ಫೋಟೋಶೂಟ್

ನಿರ್ದೇಶಕ ಇಂದ್ರಜಿತ್ ಲಂಕೇಶ್ ಅವರ ಬಹು ನಿರೀಕ್ಷಿತ 'ಗೌರಿ' ಚಿತ್ರದ ಚಿತ್ರೀಕರಣ ಭರದಿಂದ ಸಾಗುತ್ತಿದೆ. ಖ್ಯಾತ ಸಾಹಿತಿ ಪಿ.ಲಂಕೇಶ್ ಅವರ ಮೊಮ್ಮಗ, ಲಂಕೇಶ್ ಕುಟುಂಬದ ಮೂರನೇ ತಲೆಮಾರು ಸಮರ್ಜಿತ್ ಲಂಕೇಶ್ ನಾಯಕ ನಟನಾಗಿದ್ದು, ಸಾನ್ಯಾ ಅಯ್ಯರ್ ನಾಯಕಿಯಾಗಿದ್ದಾರೆ. ಬಹುದೊಡ್ಡ ತಾರಾಗಣವಿರುವ 'ಗೌರಿ' ಚಿತ್ರದ ಅಪರೂಪದ, ವಿಭಿನ್ನ, ವಿಶಿಷ್ಠ ಶೈಲಿಯ ಫೋಟೋ ಶೂಟ್ ಬುಕ್ ಮೈ ಕ್ಯಾಪ್ಚರ್ ನಲ್ಲಿ ಯಶಸ್ವಿಯಾಗಿ ನಡೆದಿದೆ.

ಪ್ರೇಮಿಗಳ ದಿನಕ್ಕೂ ಮುನ್ನ ಖ್ಯಾತ ಛಾಯಾಗ್ರಾಹಕ ಕೆನಡಾದ ರೋಹಿತ್ ಅವರ ಕ್ಯಾಮೆರಾದಲ್ಲಿ ಫೋಟೋಗಳು ಸೆರೆ ಆಗಿವೆ. ಅವರ ಕೈಚಳಕ, ದೀಪಿಕಾ ಪಡುಕೋಟೆ ಸೇರಿದಂತೆ ಅನೇಕ ಖ್ಯಾತ ಸೆಲಬ್ರೆಟಿಗಳ ಮೇಕಪ್ ಆರ್ಟಿಸ್ಟ್ ಗೌರಿ ಕಪೂರ್ ಅವರ ಮೇಕಪ್ ಮೋಡಿ ಮಾಡಿದೆ. ಪ್ರೇಮಿಗಳ ದಿನಕ್ಕೆ ಭಾವನೆಗಳ ಸಂಗಮದ ಫೋಟೋ ಶೂಟ್ ಆದಾಗಿದೆ.

ಸಾನ್ಯ ಅಯ್ಯರ್ ತಮ್ಮ ಚೊಚ್ಚಲು ಸಿನಿಮಾ 'ಗೌರಿ' ಶೂಟಿಂಗ್ ಮುಗಿಸಿದ್ದಾರೆ. ಡಬ್ಬಿಂಗ್ ಕೆಲಸವನ್ನೂ ಮುಗಿಸಿದ್ದಾರೆ. ಡಬ್ಬಿಂಗ್ ಮಾಡುತ್ತಿರುವ ಫೋಟೋವನ್ನು ಸೋಷಿಯಲ್ ಮೀಡಿಯಾದಲ್ಲಿ ಅವರು ಪೋಸ್ಟ್ ಮಾಡಿದ್ದರು. ಜೊತೆಗೆ ನಿರ್ದೇಶಕ ಇಂದ್ರಜಿತ್ ಲಂಕೇಶ್ ಕೂಡ ಇದ್ದರು. ಆ ಫೋಟೋ ವೈರಲ್ ಕೂಡ ಆಗಿತ್ತು.

'ಗೌರಿ' ಸಿನಿಮಾದಲ್ಲಿ ನಾಯಕಿಯಾಗಿ ನಟಿಸುತ್ತಿದ್ದಂತೆಯೇ ಕಿರುತೆರೆಯ ಪುಟ್ಟಗೌರಿ



ಸಾಕಷ್ಟು ಬದಲಾವಣೆ ಕಾಣುತ್ತಿದ್ದಾರೆ. ಸಖತ್ ಹಾಟ್ ಹಾಟ್ ಆಗಿ ಫೋಟೋಶೂಟ್ ಮಾಡಿಸಿಕೊಂಡಿದ್ದ ಸಾನ್ಯಾ ಅಯ್ಯರ್, ಈ ಚಿತ್ರಕ್ಕಾಗಿ ಮತ್ತೊಂದು ಫೋಟೋ ಶೂಟ್‌ನಲ್ಲಿ ಭಾಗಿಯಾಗಿದ್ದರು.

ಬ್ಲೌಸ್ ಇಲ್ಲದೇ ಕೇವಲ ಸೀರೆ ಉಟ್ಟುಕೊಂಡು ಫೋಟೋ ಶೂಟ್ ಮಾಡಿಸಿಕೊಂಡಿರುವ ಸಾನ್ಯಾ ಅಯ್ಯರ್. ಆ ಫೋಟೋದಲ್ಲಿ ಸಖತ್ ಬೋಲ್ಡ್ ಆಗಿ ಕಾಣಿಸಿಕೊಂಡಿದ್ದರು. ಬ್ಯಾಕ್ ಲೆಸ್ ಪೋಸ್ ಕೂಡ ನೀಡಿದ್ದರು. ಆ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಕೂಡ ಆಗಿದ್ದವು. ಈ ಹಿಂದೆಯೂ ಸಾನ್ಯಾ ಬಿಕಿನಿ ಫೋಟೋಶೂಟ್‌ನಲ್ಲಿ ಬೋಲ್ಡ್ ಆಗಿ ಕಾಣಿಸಿಕೊಳ್ಳುವ ಮೂಲಕ ಸೋಶಿಯಲ್ ಮೀಡಿಯಾದಲ್ಲಿ ಸೆನ್ಸೇಷನ್ ಕ್ರಿಯೇಟ್ ಮಾಡಿದ್ದರು. ಗೌರಿ ಚಿತ್ರಕ್ಕಾಗಿ ಹೊಸ ಲುಕ್‌ನಲ್ಲಿ ಸ್ಟೈಲೀಶ್ ಗೆಟಪ್‌ನಲ್ಲಿ ಕ್ಯಾಮೆರಾ ಕಣ್ಣಿಗೆ ನಟಿ ಪೋಸ್ ನೀಡಿದ್ದಾರೆ. ಬ್ಲೌಸ್ ಇಲ್ಲದೇ ಸೀರೆ ತೊಟ್ಟಿದ್ದಾರೆ.

ಗೌರಿ ಸಿನಿಮಾ ಚಿಕ್ಕಮಗಳೂರು ಸೇರಿದಂತೆ ನಾನಾ ಸ್ಥಳಗಳಲ್ಲಿ ಶೂಟ್ ಆಗಿದೆ. ರವಿವರ್ಮ ಅವರ ಸಾಹಸ ನಿರ್ದೇಶನದಲ್ಲಿ ಸಾಹಸ ದೃಶ್ಯಗಳು ಅದ್ಭುತವಾಗಿ ಮೂಡಿಬಂದಿದೆ. ಸಮರ್ಜಿತ್ ನಾನು ಅಂದುಕೊಂಡದಕ್ಕಿಂತ ಚೆನ್ನಾಗಿ ಅಭಿನಯಿಸಿದ್ದಾರೆ. ಸಾನ್ಯ ಅವರು ಕೂಡ. ಮುಖ್ಯಮಂತ್ರಿ ಚಂದ್ರು, ಸಿಹಿಕಹಿ ಚಂದ್ರು, ಮಾನಸಿ ಸುಧೀರ್, ಎಸ್ತರ್ ನರೋನ ಮುಂತಾದವರು ಚಿತ್ರದಲ್ಲಿ ನಟಿಸಿದ್ದಾರೆ.

# ಬಳುಕುವ ಬಳ್ಳಿಯಂತೆ ಕ್ಯಾಮೆರಾಗೆ ಪೋಸ್ ಕೊಟ್ಟ ಮೇಘಾ ಶೆಟ್ಟಿ



ಕನ್ನಡದ ನಟಿ ಮೇಘಾ ಶೆಟ್ಟಿ ಇದೀಗ ಹೊಸ ಫೋಟೋಶೂಟ್ ನಲ್ಲಿ ಮಿಂಚಿದ್ದಾರೆ. ಕ್ಯಾಮೆರಾ ಕಣ್ಣಿಗೆ ಬೋಲ್ಡ್ ಆಗಿ ಪೋಸ್ ಕೊಟ್ಟಿದ್ದಾರೆ. 'ಕೈವ' ನಟಿಯ ಹೊಸ ಲುಕ್ ಇದೀಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.

ನೀಲಿ ಬಣ್ಣದ ಡ್ರೆಸ್‌ನಲ್ಲಿ ಬಳುಕುವ ಬಳ್ಳಿಯಂತೆ ಮೇಘಾ ಶೆಟ್ಟಿ ಕಾಣಿಸಿಕೊಂಡಿದ್ದಾರೆ. ನಟಿಯ ಮಾಡ್ರನ್ ಲುಕ್‌ಗೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ಮೇಘಾ ಸಖತ್ ಸ್ಟೈಲೀಶ್ ಆಗಿ ಕಾಣಿಸಿಕೊಂಡಿದ್ದಾರೆ. ಮೇಘಾ ಹೊಸ ಅವತಾರ ನೋಡಿ ನೆಟ್ಟಿಗರು ಬಗೆ ಬಗೆಯ ಕಾಮೆಂಟ್ ಹಾಕ್ತಿದ್ದಾರೆ.

'ಜೊತೆ ಜೊತೆಯಲಿ' ಸೀರಿಯಲ್ ಮೂಲಕ ಟಿವಿ ಜಗತ್ತಿಗೆ ಪರಿಚಿತರಾದ ಮೇಘಾ ಶೆಟ್ಟಿ ಅವರು ಈಗ ಬೆಳ್ಳಿತೆರೆಯಲ್ಲಿ ಸಾಲು ಸಾಲು ಸಿನಿಮಾಗಳನ್ನು ಮಾಡ್ತಿದ್ದಾರೆ. ಅನು ಸಿರಿಮನೆ ಎಂಬ ಪಾತ್ರದ ಮೂಲಕ ಕಿರುತೆರೆ ಮನೆ ಮಾತಾಗಿದ್ದ ನಟಿ ಈಗ ಸ್ಯಾಂಡಲ್‌ವುಡ್‌ನಲ್ಲಿ ಮಿಂಚ್ತಿದ್ದಾರೆ.

ಇಂದಿಗೂ ಮೇಘಾ ನಟಿಸಿದ ಅನು ಸಿರಿಮನೆ ಪಾತ್ರವನ್ನು ಸ್ಮರಿಸುತ್ತಾರೆ. ಅನಿರುದ್ಧ ಮತ್ತು ಮೇಘಾ ಜೋಡಿ ಸೀರಿಯಲ್‌ನಲ್ಲಿ ಮೋಡಿ ಮಾಡಿತ್ತು. ಮೇಘಾ ಸಿನಿಮಾಗಳಲ್ಲಿ ಆಕ್ಟೀವ್ ಆಗಿದ್ರು ಕೂಡ ಅನು ಪಾತ್ರವನ್ನು ಅಭಿಮಾನಿಗಳು ಮರೆತಿಲ್ಲ.

ದಿಲ್‌ಪಸಂದ್, ತ್ರಿಬಲ್ ರೈಡಿಂಗ್, 'ಕೈವ' ಸಿನಿಮಾಗಳಲ್ಲಿ ನಟಿಸುವ ಮೂಲಕ ನಾಯಕಿಯಾಗಿ ಮೇಘಾ ಸದ್ದು ಮಾಡಿದ್ದಾರೆ. ಸದ್ಯ ವಿನಯ್ ರಾಜ್‌ಕುಮಾರ್‌ಗೆ ನಾಯಕಿಯಾಗಿ 'ಗ್ರಾಮಾಯಣ' ಚಿತ್ರದಲ್ಲಿ ಮೇಘಾ ಶೆಟ್ಟಿ ನಟಿಸುತ್ತಿದ್ದಾರೆ.

# ಟೀಮ್ ಇಂಡಿಯಾ ಗೆದ್ದರೆ ಹೊಸ ಇತಿಹಾಸ

ಭಾರತ ಮತ್ತು ಇಂಗ್ಲೆಂಡ್ ನಡುವಣ 3ನೇ ಟೆಸ್ಟ್ ಪಂದ್ಯವು ನಾಳೆಯಿಂದ ಶುರುವಾಗಲಿದೆ. ರಾಜ್‌ಕೋಟ್‌ನ ಸೌರಾಷ್ಟ್ರ ಕ್ರಿಕೆಟ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಟೀಮ್ ಇಂಡಿಯಾ ಗೆದ್ದರೆ ಹೊಸ ಇತಿಹಾಸ ನಿರ್ಮಾಣವಾಗಲಿದೆ.

ಅಂದರೆ ಭಾರತ ತಂಡವು ಟೆಸ್ಟ್ ಕ್ರಿಕೆಟ್‌ನಲ್ಲಿ ಒಂದೇ ತಂಡದ ವಿರುದ್ಧ ಅತ್ಯಧಿಕ ಗೆಲುವು ದಾಖಲಿಸಿದ ದಾಖಲೆ ಬರೆಯಲು ಇಂಗ್ಲೆಂಡ್ ವಿರುದ್ಧ ಗೆದ್ದರೆ ಸಾಕು. ಸದ್ಯ ಭಾರತ ತಂಡವು ಇಂಗ್ಲೆಂಡ್ ಮತ್ತು ಆಸ್ಟ್ರೇಲಿಯಾ ವಿರುದ್ಧ 32 ಪಂದ್ಯಗಳಲ್ಲಿ ಜಯ ಸಾಧಿಸಿದೆ. ಭಾರತ ಮತ್ತು ಇಂಗ್ಲೆಂಡ್ ತಂಡಗಳು ಟೆಸ್ಟ್ ಕ್ರಿಕೆಟ್‌ನಲ್ಲಿ ಒಟ್ಟು 133 ಪಂದ್ಯಗಳನ್ನಾಡಿದೆ. ಈ ವೇಳೆ ಇಂಗ್ಲೆಂಡ್ 51 ಮ್ಯಾಚ್‌ಗಳಲ್ಲಿ ಜಯ ಸಾಧಿಸಿದರೆ ಟೀಮ್ ಇಂಡಿಯಾ 32 ಪಂದ್ಯಗಳಲ್ಲಿ ಗೆಲುವು ದಾಖಲಿಸಿದೆ. ಹಾಗೆಯೇ ಭಾರತ ಮತ್ತು ಆಸ್ಟ್ರೇಲಿಯಾ 107 ಟೆಸ್ಟ್ ಪಂದ್ಯಗಳಲ್ಲಿ ಮುಖಾಮುಖಿಯಾಗಿವೆ. ಈ ವೇಳೆ ಆಸ್ಟ್ರೇಲಿಯಾ 45 ಮ್ಯಾಚ್‌ಗಳಲ್ಲಿ ಗೆಲುವಿನ ನಗೆ ಬೀರಿದರೆ, ಟೀಮ್ ಇಂಡಿಯಾ 32 ಪಂದ್ಯಗಳಲ್ಲಿ ಜಯಭೇರಿ ಬಾರಿಸಿದೆ.

ಅಂದರೆ ಭಾರತ ತಂಡವು ಟೆಸ್ಟ್ ಕ್ರಿಕೆಟ್‌ನಲ್ಲಿ ಆಸ್ಟ್ರೇಲಿಯಾ ಮತ್ತು ಇಂಗ್ಲೆಂಡ್ ತಂಡಗಳ ವಿರುದ್ಧ ತಲಾ 32 ಬಾರಿ ಗೆಲುವು ದಾಖಲಿಸಿದೆ. ಇದೀಗ ರಾಜ್‌ಕೋಟ್ ಟೆಸ್ಟ್‌ನಲ್ಲಿ ಟೀಮ್ ಇಂಡಿಯಾ ಜಯ ಸಾಧಿಸಿದರೆ, ಟೆಸ್ಟ್‌ನಲ್ಲಿ ಭಾರತ ತಂಡವು ತಂಡವೊಂದರ ವಿರುದ್ಧ 33 ಪಂದ್ಯಗಳಲ್ಲಿ




ಗೆಲುವು ದಾಖಲಿಸಿದ ವಿಶೇಷ ದಾಖಲೆಯೊಂದು ನಿರ್ಮಾಣವಾಗಲಿದೆ.

ಹೀಗಾಗಿ ಸೌರಾಷ್ಟ್ರ ಕ್ರಿಕೆಟ್ ಅಸೋಷಿಯೇಷನ್ ಮೈದಾನದಲ್ಲಿ ನಡೆಯಲಿರುವ 3ನೇ ಟೆಸ್ಟ್ ಪಂದ್ಯದಲ್ಲಿ ರೋಹಿತ್ ಶರ್ಮಾ ಪಡೆಯಿಂದ ಕಡೆಯಿಂದ ಭರ್ಜರಿ ಪ್ರದರ್ಶನ ನಿರೀಕ್ಷಿಸಬಹುದು.

**ಇಂಗ್ಲೆಂಡ್ ಟೆಸ್ಟ್ ತಂಡ:** ಬೆನ್ ಸ್ಟೋಕ್ಸ್ (ನಾಯಕ), ರೆಹಾನ್ ಅಹ್ಮದ್, ಜೇಮ್ಸ್ ಅಯಂಡರ್ಸನ್, ಗಸ್ ಅಟ್ಕಿನ್ಸನ್ , ಜಾನಿ ಬೈರ್‌ಸ್ಟೋವ್, ಶೋಯೆಬ್ ಬಶೀರ್, ಡ್ಯಾನ್ ಲಾರೆನ್ಸ್, ಝಾಕ್ ಕ್ರಾಲಿ, ಬೆನ್ ಡಕೆಟ್, ಬೆನ್ ಫೋಕ್ಸ್, ಟಾಮ್ ಹಾರ್ಟ್ಲಿ, ಒಲ್ಲಿ ಪೋಪ್, ಆಲಿ ರಾಬಿನ್ಸನ್, ಜೋ ರೂಟ್ , ಮಾರ್ಕ್ ವುಡ್.

**ಭಾರತ ಟೆಸ್ಟ್ ತಂಡ:** ರೋಹಿತ್ ಶರ್ಮಾ (ನಾಯಕ), ಜಸ್‌ಪ್ರೀತ್ ಬುಮ್ರಾ (ಉಪನಾಯಕ), ಯಶಸ್ವಿ ಜೈಸ್ವಾಲ್, ಶುಭಮನ್ ಗಿಲ್, ದೇವದತ್ ಪಡಿಕ್ಕಲ್, ರಜತ್ ಪಾಟಿದಾರ್, ಸರ್ಫರಾಝ್ ಖಾನ್, ಧ್ರುವ್ ಜುರೆಲ್ (ವಿಕೆಟ್ ಕೀಪರ್), ಕೆಎಸ್ ಭರತ್ (ವಿಕೆಟ್ ಕೀಪರ್), ಆರ್ ಅಶ್ವಿನ್, ರವೀಂದ್ರ ಜಡೇಜಾ, ಅಕ್ಷರ್ ಪಟೇಲ್, ವಾಷಿಂಗ್ಟನ್ ಸುಂದರ್, ಕುಲ್ದೀಪ್ ಯಾದವ್, ಮೊಹಮ್ಮದ್ ಸಿರಾಜ್, ಮುಖೇಶ್ ಕುಮಾರ್, ಆಕಾಶ್ ದೀಪ್.

# ರಾಜ್ಯದ ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣರ ಭಾವಚಿತ್ರ ಕಡ್ಡಾಯ

**ಬೆಂಗಳೂರು:** ವಿಶ್ವಗುರು ಬಸವಣ್ಣ ಹಾಗೂ ಸಾಂಸ್ಕೃತಿಕ ನಾಯಕ ಎಂದು ನಮೂದಿಸಿರುವ ಬಸವೇಶ್ವರರ ಭಾವಚಿತ್ರವನ್ನು ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಹಾಕುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಶ್ವಗುರು ಬಸವಣ್ಣ ಅವರ ಪುತ್ಥಳಿಯನ್ನು ಅನಾವರಣಗೊಳಿಸಿದರು. ಬಳಿಕ ಮಾತನಾಡಿದ ಅವರು, ಬಸವಣ್ಣವರ ಕಾರ್ಯಕ್ರಮಕ್ಕೆ ದುಡ್ಡು ಇಲ್ಲ ಅಂತ ಹೇಳುವುದಿಲ್ಲ. ಬುದ್ಧ, ಬಸವ, ಅಂಬೇಡ್ಕರ್, ಗಾಂಧಿಜಿಯವರನ್ನು ಯಾರು ಮರೆಯಲು ಆಗಲ್ಲ. ಈ ನಾಲ್ಕು ಜನರ ಹೆಸರು ದೇಶ ಮರೆಯುವುದಕ್ಕೆ ಆಗುವುದಿಲ್ಲ ಎಂದರು.

ಇವರೆಲ್ಲರು ಸಮಾಜದಲ್ಲಿರುವ ಅಂಕ ಡೊಂಕು ತಿದ್ದಿದವರು. ಸಮಾಜದ ಬದಲಾವಣೆಗಾಗಿ ಅಸಮಾನತೆ ಹೋಗಬೇಕು. ಬ್ರಿಟಿ ‍ನವರು ಹೇಳುತ್ತಾರೆ, ಸಂಸದೀಯ ವ್ಯವಸ್ಥೆ ನಮ್ಮಿಂದ ಬಂತು ಅಂತ, ಆದರೆ ಸಂಸದೀಯ ವ್ಯವಸ್ಥೆ ಬಸವಣ್ಣವರ ಕಾಲದಲ್ಲೆ ಬಂದಿದೆ. ಅನುಭವ ಮಂಟಪದ ಮೂಲಕ ಸಂಸದೀಯ ವ್ಯವಸ್ಥೆ ತಂದಿದ್ದಾರೆ. ಮಹಿಳೆಯರಿಗೆ ಸ್ವಾತಂತ್ರ್ಯ ಇರಲಿಲ್ಲ. ಮನವಾದಿಗಳು ಕೆಲವು ಕೆಟ್ಟ ಸಂಪ್ರದಾಯಗಳನ್ನ ಮಾಡಿಬಿಟ್ಟಿದ್ದರು. ಇದರಿಂದ ಅಸಮಾನತೆ ಹುಟ್ಟು ಹಾಕಿದರು. ಬಸವಣ್ಣನವರು ಈ ಕಂದಾಚಾರವನ್ನು ಹೊಗಲಾಡಿಸಲು ಶ್ರಮಿಸಿದರು



ಎಂದು ತಿಳಿಸಿದರು.

ಮನುಷ್ಯ ಮನುಷ್ಯನನ್ನು ಪ್ರೀತಿಸಿದರೆ ಸದ್ಗುಣ. ಮನುಷ್ಯ ಮನುಷ್ಯರನ್ನು ದ್ವೇಷಿಸಿದರೆ ದುರ್ಗುಣ. ನಾನೇನು ಕುರುಬ ಜಾತಿಯಲ್ಲಿ ಹುಟ್ಟಬೇಕು ಅಂತ ಅರ್ಜಿ ಹಾಕಿದ್ನಾ ನಾನು ಹುಟ್ಟಿದ್ದೇನೆ, ಜಾತಿ ವ್ಯವಸ್ಥೆ ಇದೆ ಎಂದರು.

**ರಾಜ್ಯಕ್ಕೆ ಸಿದ್ದರಾಮಯ್ಯ ಮಾದರಿ:** ರಾಜ್ಯದಲ್ಲಿ ಅನೇಕ ಸರ್ಕಾರಗಳು ಬಂದು ಹೋಗಿವೆ. ಮೊಟ್ಟ ಮೊದಲಿಗೆ ಸಿದ್ದರಾಮಯ್ಯ ಅವರು ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣವರ ಫೋಟೋ ಹಾಕುವಂತೆ ಮಾಡಿದ್ದಾರೆ. ಇಡೀ ರಾಜ್ಯಕ್ಕೆ ಸಿದ್ದರಾಮಯ್ಯ ಮಾದರಿಯಾಗಿದ್ದಾರೆ. ಸರ್ಕಾರಕ್ಕೆ ನಾನು ಅಭಿನಂದನೆ ಸಲ್ಲಿಸುತ್ತೇನೆ. ಸಿದ್ದರಾಮಯ್ಯ ಅವರನ್ನ ಎಷ್ಟು ಹೊಗಳಿದರು ಕಡಿಮೆ ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಹೇಳಿದರು.

ಅನುಭವ ಮಂಟಪ ಮೂಲಕ ಬಸವಣ್ಣ ಅವರು ಪ್ರಜಾಪ್ರಭುತ್ವಕ್ಕೆ ಮಾದರಿಯಾಗಿದ್ದರು. ಬಸವಣ್ಣನವರ ಆಚಾರ ಸಿದ್ದಾಂತವನ್ನ ಎಲ್ಲಾರೂ ಪಾಲಿಸುವಂತಾಗಬೇಕು. ವಚನ ವಿವೇಕ ಎಂಬ ಕಿರು ಹೊತ್ತಿಗೆ ಬಿಡುಗಡೆ ಮಾಡಿದೆ ಎಂದರು.

**ಶಾಲೆ-ಕಾಲೇಜುಗಳ ಪಠ್ಯದಲ್ಲಿ ಬಸವಣ್ಣವನವರ ಪಠ್ಯವನ್ನು ಸೇರಿಸಿ:** ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮೌಲ್ಯವಿಕ ನಿರ್ಧಾರ ತಗೆದುಕೊಂಡಿದ್ದಾರೆ. ವಿಶ್ವಗುರು ಬಸವಣ್ಣನವರನ್ನು ಸಂಸ್ಕೃತಿಕ ನಾಯಕ ಎಂದು ಸಿದ್ದರಾಮಯ್ಯನವರು ಘೋಷಣೆ ಮಾಡಿದ್ದಾರೆ. ವಿಶ್ವವಿದ್ಯಾಲಯದಲ್ಲಿ ಬಸವಣ್ಣನವ ಹೆಸರಲ್ಲಿ ಅಧ್ಯಯನ ಪೀಠ ತೆಗೆಯಬೇಕು. ಹಾಗೂ ಶಾಲೆ-ಕಾಲೇಜುಗಳ ಪಠ್ಯದಲ್ಲಿ ಬಸವಣ್ಣವನವರ ಪಠ್ಯವನ್ನು ಸೇರಿಸಿ, ಸಮಾಜಕ್ಕೆ ಅವರ ಸಂದೇಶ ತಿಳಿಸಬೇಕು ಎಂದು ಹಿರಿಯ ಸಾಹಿತಿ ಗೂ.ರು ಚನ್ನಬಸಪ್ಪ ಅವರು ಮನವಿ ಸಲ್ಲಿಸಿದರು.

**ಬಸವಣ್ಣ ಕರ್ನಾಟಕದ ಸಾಂಸ್ಕೃತಿಕ ರಾಯಭಾರಿ:** ಕಳೆದ ತಿಂಗಳು ರಾಜ್ಯ ಸರ್ಕಾರ ಬಸವಣ್ಣ ಕರ್ನಾಟಕದ ಸಾಂಸ್ಕೃತಿಕ ರಾಯಭಾರಿ ಎಂದು ಅಧಿಕೃತವಾಗಿ ಘೋಷಣೆ ಮಾಡಿತ್ತು. ಈ ಬೆನ್ನಲ್ಲೇ ಇದೀಗ ಸರ್ಕಾರ ಕಚೇರಿಗಳಲ್ಲಿ ಬಸವಣ್ಣ ಅವರ ಭಾವಚಿತ್ರ ಹಾಕುವುದು ಕಡ್ಡಾಯಗೊಳಿಸಲಾಗಿದೆ.

## 10 ಭರ್ಜರಿ ಸಿಕ್ಸ್, 5 ಫೋರ್

# ಆರ್‌ಸಿಬಿ ಆಟಗಾರನ ತೂಫಾನ್ ಶತಕ

ಬಾಂಗ್ಲಾದೇಶ್ ಪ್ರೀಮಿಯರ್ ಲೀಗ್‌ನ 29ನೇ ಪಂದ್ಯದಲ್ಲಿ ವಿಲ್ ಜಾಕ್ಸ್ ಸಿಡಿಲಬ್ಬರದ ಶತಕ ಸಿಡಿಸಿ ಮಿಂಚಿದ್ದಾರೆ. ಕೊಮಿಲ್ಲಾ ವಿಕ್ಟೋರಿಯನ್ಸ್ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದ ಚಟ್ಟೋಗ್ರಾಮ್ ಚಾಲೆಂಜರ್ಸ್ ತಂಡವು ಬೌಲಿಂಗ್ ಆಯ್ದುಕೊಂಡಿತು.

ಅದರಂತೆ ಕೊಮಿಲ್ಲಾ ವಿಕ್ಟೋರಿಯನ್ಸ್ ಪರ ಇನಿಂಗ್ಸ್ ಆರಂಭಿಸಿದ ಲಿಟ್ಟನ್ ದಾಸ್ ಹಾಗೂ ವಿಲ್ ಜಾಕ್ಸ್ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದರು. ಮೊದಲ ವಿಕೆಟ್‌ಗೆ 86 ರನ್ ಕಲೆಹಾಕಿದ ಬಳಿಕ ಲಿಟ್ಟನ್ ದಾಸ್ (60) ವಿಕೆಟ್ ಒಪ್ಪಿಸಿದರು. ದಾಸ್ ಔಟಾದ ಬೆನ್ನಲ್ಲೇ ಜಾಕ್ಸ್ ಅಬ್ಬರ ಶುರು ಮಾಡಿದರು.

ಚಟ್ಟೋಗ್ರಾಮ್ ಚಾಲೆಂಜರ್ಸ್ ಬೌಲರ್‌ಗಳನ್ನು ಮನಸೋ ಇಚ್ಛೆ ದಂಡಿಸಿದ ವಿಲ್ ಜಾಕ್ಸ್ ಸಿಕ್ಸ್ ಫೋರ್‌ಗಳ ಸುರಿಮಳೆಗೈದರು. ಪರಿಣಾಮ ಜಾಕ್ಸ್ ಬ್ಯಾಟ್‌ನಿಂದ ಕೇವಲ 50 ಎಸೆತಗಳಲ್ಲಿ ಭರ್ಜರಿ ಶತಕ ಮೂಡಿಬಂತು.

ಸ್ಫೋಟಕ ಸೆಂಚುರಿ ಬಳಿಕ ಭರ್ಜರಿ ಬ್ಯಾಟಿಂಗ್ ಮುಂದುವರೆಸಿದ ಜಾಕ್ಸ್ 53 ಎಸೆತಗಳಲ್ಲಿ 10 ಸಿಕ್ಸರ್




ಹಾಗೂ 5 ಫೋರ್‌ಗಳೊಂದಿಗೆ ಅಜೇಯ 108 ರನ್ ಬಾರಿಸಿದರು. ಮತ್ತೊಂದೆಡೆ ಮೊಯೀನ್ ಅಲಿ 24 ಎಸೆತಗಳಲ್ಲಿ 5 ಸಿಕ್ಸ್ ಹಾಗೂ 2 ಫೋರ್‌ಗಳೊಂದಿಗೆ ಅಜೇಯ 53 ರನ್ ಚಚ್ಚಿದರು. ಈ ಸ್ಫೋಟಕ ಬ್ಯಾಟಿಂಗ್ ನೆರವಿನಿಂದ ಕೊಮಿಲ್ಲಾ ವಿಕ್ಟೋರಿಯನ್ಸ್ ತಂಡವು 20 ಓವರ್‌ಗಳಲ್ಲಿ 3 ವಿಕೆಟ್ ಕಳೆದುಕೊಂಡು 239 ರನ್ ಕಲೆಹಾಕಿತು.

ಈ ಬೃಹತ್ ಗುರಿಯನ್ನು ಬೆನ್ನತ್ತಿದ ಚಟ್ಟೋಗ್ರಾಮ್ ಚಾಲೆಂಜರ್ಸ್ ತಂಡದ ತಂಝೀದ್ ಹಸನ್ 41 ರನ್ ಬಾರಿಸಿದರು. ಆದರೆ ಉಳಿದ ಬ್ಯಾಟರ್‌ಗಳಿಂದ ನಿರೀಕ್ಷಿತ ಪ್ರದರ್ಶನ ಮೂಡಿಬಂದಿರಲಿಲ್ಲ. ಪರಿಣಾಮ 16.3 ಓವರ್‌ಗಳಲ್ಲಿ 166 ರನ್‌ಗಳಿಸಿ ಚಟ್ಟೋಗ್ರಾಮ್ ಚಾಲೆಂಜರ್ಸ್ ಆಲೌಟ್ ಆಯಿತು. ಈ ಮೂಲಕ ಕೊಮಿಲ್ಲಾ ವಿಕ್ಟೋರಿಯನ್ಸ್ 73 ರನ್‌ಗಳ ಭರ್ಜರಿ ಜಯ ಸಾಧಿಸಿತು.

ವಿಶೇಷ ಎಂದರೆ ಕೊಮಿಲ್ಲಾ ವಿಕ್ಟೋರಿಯನ್ಸ್ ಪರ ಸ್ಫೋಟಕ ಶತಕ ಸಿಡಿಸಿ ಮಿಂಚಿರುವ ಇಂಗ್ಲೆಂಡ್ ಆಟಗಾರ ವಿಲ್ ಜಾಕ್ಸ್ ಈ ಬಾರಿಯ ಐಪಿಎಲ್‌ನಲ್ಲಿ ಆರ್‌ಸಿಬಿ ಪರ ಕಣಕ್ಕಿಳಿಯಲಿದ್ದಾರೆ. ಖಕಐ 2023 ರಲ್ಲಿ ಜಾಕ್ಸ್ ಅವರನ್ನು ಆರ್‌ಸಿಬಿ 3.2 ಕೋಟಿ ರೂ. ಗೆ ಖರೀದಿಸಿತು. ಆದರೆ ಗಾಯದ ಕಾರಣ ಕಳೆದ ಸೀಸನ್‌ನಿಂದ ಹೊರಗುಳಿದಿದ್ದರು. ಇದಾಗ್ಯೂ ಈ ಬಾರಿಯ ಹರಾಜಿಗೂ ಮುನ್ನ ಜಾಕ್ಸ್ ಅವರನ್ನು ಆರ್‌ಸಿಬಿ ಉಳಿಸಿಕೊಂಡಿತ್ತು. ಅದರಂತೆ ಈ ಬಾರಿಯ ಐಪಿಎಲ್‌ನಲ್ಲಿ ವಿಲ್ ಜಾಕ್ಸ್ ಚೊಚ್ಚಲ ಪಂದ್ಯವಾಡುವ ನಿರೀಕ್ಷೆಯಲ್ಲಿದ್ದಾರೆ.

# ರಾಜ್ಯದಲ್ಲಿ ಹೂಡಿಕೆಗೆ ಮಾಡಲು 241 ಕಂಪನಿಗಳಿಗೆ ಅನುಮತಿ

**ಬೆಂಗಳೂರು:** ಬೆಂಗಳೂರು ಹೊರತುಪಡಿಸಿ ರಾಜ್ಯದಲ್ಲಿ ಹೂಡಿಕೆಗೆ ಮಾಡಲು 241 ಕಂಪನಿಗಳಿಗೆ ಅನುಮತಿ ನೀಡಲಾಗಿದೆ. ಕರ್ನಾಟಕ ರಾಜ್ಯ ಮಟ್ಟದ ಏಕ ಗವಾಕ್ಷಿ ಅನುಮೋದನೆ ಸಮಿತಿಯು ಒಟ್ಟು 6,407.82 ಕೋಟಿ ರೂಪಾಯಿ ಮೌಲ್ಯದ 128 ಯೋಜನೆಗಳಿಗೆ ಅನುಮೋದನೆ ನೀಡಿದ್ದು, ಇದರಿಂದ ರಾಜ್ಯಾದ್ಯಂತ 33,771 ಜನರಿಗೆ ಉದ್ಯೋಗಾವಕಾಶ ಕಲ್ಪಿಸುವ ಸಾಮರ್ಥ್ಯ ಹೊಂದಿದೆ. 128 ಯೋಜನೆಗಳಲ್ಲಿ 24 ಯೋಜನೆಗಳು ಬೆಂಗಳೂರಿನಲ್ಲಿವೆ ಎಂದು ವಿಧಾನ ಪರಿಷತ್ ಪ್ರಶ್ನೋತ್ತರ ಕಾಲಾಪದ ವೇಳೆ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಸದನಕ್ಕೆ ತಿಳಿಸಿದರು. ಬಜೆಟ್ ಅಧಿವೇಶನದಲ್ಲಿ ಪರಿಷತ್ ಸದಸ್ಯ ಕೇಶವ ಪ್ರಸಾದ್ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದ ವಿವಿಧ ಭಾಗಗಳಲ್ಲಿ ಉದ್ದಿಮೆ ಸ್ಥಾಪನೆಯಾಗಿದೆ. ಉದ್ಯೋಗ ಸೃಷ್ಟಿಸಲು ರಾಜ್ಯ ಸರ್ಕಾರ ಅನುವು ಮಾಡಿಕೊಟ್ಟಿದೆ ಎಂದರು.



**ರಾಜ್ಯಕ್ಕೆ ಹರಿದುಬರಲಿದೆ 5.4 ಲಕ್ಷ ಕೋಟಿ ರೂ ಹೂಡಿಕೆ:** ಬೆಂಗಳೂರಿನಲ್ಲಿ ನಡೆದ ಇನ್ವೆಸ್ಟ್ ಕರ್ನಾಟಕ ಸಮಾವೇಶದ ಮೂಲಕ 57 ಕಂಪನಿಗಳೊಂದಿಗೆ ರಾಜ್ಯ ಸರ್ಕಾರ ಒಡಂಬಡಿಕೆ ಮಾಡಿಕೊಂಡಿದೆ ಈ ಎಲ್ಲಾ 57 ಒಡಂಬಡಿಕೆಗಳ ಮೊತ್ತ 5,51,369 ಕೋಟಿ ರೂ ಆಗುತ್ತದೆ. ಈ ಎಲ್ಲಾ ಯೋಜನೆಗಳು ಜಾರಿಯಾಗಲು 3ರಿಂದ 4 ವರ್ಷ ಆಗಬಹುದು ಎಂದು ಸಚಿವ ಎಂಬಿ ಪಾಟೀಲ್ ಚಳಿಗಾಲದ ಅಧಿವೇಶನದಲ್ಲಿ ಹೇಳಿದ್ದರು.

ಹುಬ್ಬಳ್ಳಿಯಲ್ಲಿ ನಡೆದಿದ್ದ ಎಫ್‌ಎಂಸಿಜಿ ಹೂಡಿಕೆದಾರರ ಸಮಾವೇಶದಲ್ಲಿ 16 ಕಂಪನಿಗಳ ಜೊತೆ 1,275 ಕೋಟಿ ರೂ ಮೊತ್ತದ ಹೂಡಿಕೆಗೆ ಒಪ್ಪಂದಾಗಿವೆ ಎಂದು ಸಚಿವರು ಸದನಕ್ಕೆ ಮಾಹಿತಿ ನೀಡಿದ್ದರು. ಇನ್ವೆಸ್ಟ್ ಕರ್ನಾಟಕ ಬೆಂಗಳೂರಿನಲ್ಲಿ 2022ರ ನವೆಂಬರ್‌ನಲ್ಲಿ ನಡೆದಿತ್ತು. ಎಫ್‌ಎಂಸಿಜಿ ಹೂಡಿಕೆದಾರರ ಸಮಾವೇಶ ಹುಬ್ಬಳ್ಳಿಯಲ್ಲಿ ನಡೆದಿತ್ತು.

ಇನ್ವೆಸ್ಟ್ ಕರ್ನಾಟಕದಲ್ಲಿ ಕುದುರಿಸಲಾದ 57 ಒಡಂಬಡಿಕೆ (ಎಂಒಯು) ಪೈಕಿ 7 ಯೋಜನೆಗಳಿಗೆ ಏಕಗವಾಕ್ಷಿ ಸಮಿತಿಯಲ್ಲಿ ಅನುಮೋದನೆ ನೀಡಲಾಗಿದೆ. ಇವುಗಳಿಗೆ ಭೂಮಿ, ನೀರು ಮತ್ತು ವಿದ್ಯುತ್ ಪೂರೈಕೆ ಒದಗಿಸಲಾಗುವುದು. ಇವು ಬೃಹತ್ ಯೋಜನೆಗಳಾದ್ದರಿಂದ ಕಾರ್ಯಾರಂಭಕ್ಕೆ 3-4 ವರ್ಷ ಆಗುತ್ತದೆ ಎಂದು ಸಚಿವ ಎಂಬಿ ಪಾಟೀಲ್ ತಿಳಿಸಿದ್ದರು.

ಇನ್ನು, ಹುಬ್ಬಳ್ಳಿಯ ಎಫ್‌ಎಂಸಿಜಿ ಹೂಡಿಕೆದಾರರ ಸಮಾವೇಶದಲ್ಲಿ ಆಗಿರುವ 16 ಒಪ್ಪಂದಗಳ ಪೈಕಿ 3 ಯೋಜನೆಗಳಿಗೆ ಏಕಗವಾಕ್ಷಿ ವ್ಯವಸ್ಥೆ ಮೂಲಕ ಅನುಮೋದನೆ ನೀಡಲಾಗಿದೆ ಎಂದೂ ಸಚಿವರು ಸ್ಪಷ್ಟಪಡಿಸಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com